ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 68

27-8-2025 ಬುಧವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 68

## ಸಂಪಾದಕೀಯ.....

## ಸಾರ್ವಜನಿಕ ನೆಮ್ಮದಿ ಕಸಿಯುವ ಹಕ್ಕು ಯಾರಿಗೂ ಇಲ್ಲ



ರಾಜ್ಯ ಸರ್ಕಾರ ತಡವಾಗಿಯಾದರೂ ಎಚ್ಚೆತ್ತುಕೊಂಡು ಗಣೇಶೋತ್ಸವದಲ್ಲಿ ಮುರಾಬಟ್ಟೆಯಾಗಿ ಬಳಕೆ ಮಾಡುವ ಡಿಜೆಗೆ ನಿಷೇಧ ಹೇರಿರುವುದು ಸ್ವಾಗತಾರ್ಹವಾಗಿದೆ. ದೇವರು, ಧರ್ಮದ ಹೆಸರಲ್ಲಿ ಅಂದಾದುಂದಿ ಮಾಡಿ ಸಾರ್ವಜನಿಕರ ಜೀವನದ ಮೇಲೆ ದುಷ್ಪರಿಣಾಮ ಬೀರುವ ಇಂಥ ಆಚರಣೆಗೆ ಅಂಕಿತ ಹಾಕಿರುವ ರಾಜ್ಯ ಸರ್ಕಾರದ ಧೈರ್ಯವನ್ನು ಮಾಧ್ಯಮಗಳು, ಸಮಾಜ ಚಿಂತಕರು ಸ್ವಾಗತಿಸಲೇ ಬೇಕಾಗಿದೆ.

ರಾಜ್ಯ ಸರ್ಕಾರದ ನಿರ್ಣಯದಂತೆ ದಾವಣಗೆರೆ ಜಿಲ್ಲಾಡಳಿತವೂ ಗಣೇಶೋತ್ಸವದಲ್ಲಿ ಡಿಜೆ ಬಳಕೆ ಮಾಡದಂತೆ ಕಟ್ಟುನಿಟ್ಟಿನ ಸೂಚನೆ ನೀಡಿದೆ. ಜಿಲ್ಲಾಡಳಿತದ ಸೂಚನೆಯನ್ನು ಬಿಜೆಪಿ ಕೆಲ ಮುಖಂಡರು, ಸಂಘ ಸಂಸ್ಥೆಗಳು ಧಿಕ್ಕರಿಸುವುದಾಗಿಯೂ ಹೇಳಿಕೆ ನೀಡಿರುವುದು ಬೇಜವಾಬ್ದಾರಿತನದ ಪ್ರದರ್ಶನವಾಗಿದೆ. ಡಿಜೆ ಎಂಬುದು ಇತ್ತೀಚೆಗೆ ಅಡೆತಡೆ ಇಲ್ಲದೆ ಬಳಕೆಯಾಗುತ್ತಿರುವುದರಿಂದ ಈ ಸಮಯದಲ್ಲಿ ಕೆಲ ಜನರು ಮನೆಯಿಂದ ಹೊರ ಬರಲು ಹೆದರುವಂತಾಗಿದೆ.

ಮನುಷ್ಯನ ಕಿವಿ 110 ರಿಂದ 130 ಡೆಸಿಬಲ್ ಶಬ್ದ ಪ್ರಮಾಣ ತಾಳಬಲ್ಲದು. ಅದಕ್ಕಿಂತ ಹೆಚ್ಚಾದರೆ ಶ್ರವಣದೋಷ, ಹೃದಯ ತೊಂದರೆ, ಭಯ ಇನ್ನಿತರ ತೊಂದರೆ ಎದುರುಗಾವುದನ್ನು ವೈದ್ಯ ಲೋಕ ಮನಗಂಡಿದೆ. ಡಿಜೆ ಬಳಕೆ ಮಾಡುವ ಡೆಸಿಬಲ್ ಪ್ರಮಾಣ 200 ಡೆಸಿಬಲ್‌ಗಿಂತ ಹೆಚ್ಚಾಗಿರುತ್ತದೆ. ಇದರಿಂದ ಸೂಕ್ಷ್ಮ ಕಿವಿ ತಮಟೆಗೆ ಹಾನಿಯಾಗಿ ಕೆಲವು ಕಾಲನಂತರ ಶ್ರವಣದೋಷ ಕಾಣಿಸಿಕೊಳ್ಳಲಿದೆ.

ಹೃದಯ ಸಂಬಂಧಿ ಕಾಯಿಲೆಗಳಿದ್ದವರಿಗೆ ಇಷ್ಟೊಂದು ಶಬ್ದ ತಾಳುವ ಶಕ್ತಿ ಇರುವುದಿಲ್ಲ. ಇಂಥ ರೋಗಿಗಳು ಗಣೇಶೋತ್ಸವ ಆಚರಣೆ ಅಮಲಿನಲ್ಲಿ ತೇಲುತ್ತಿರುವ ಕೆಲವರಿಗೆ ಅರ್ಥವಾಗುವುದಿಲ್ಲ. ಇಂಥ ಅಗಾಧ ಶಬ್ದವನ್ನು ಸಹಿಸದ ಅನೇಕ ಹೃದಯಗಳು ಘಾಸಿಯಾಗಿ ತಕ್ಷಣಕ್ಕೆ ಸ್ತಬ್ದವಾಗಬಹುದು ಅಥವಾ ಕೆಲ ದಿನಗಳ ನಂತರ ತಮ್ಮ ಕಾರ್ಯಾಚರಣೆ ಸ್ಥಗಿತಗೊಳಿಸಬಹುದು.

ಈ ನಿಟ್ಟಿನಲ್ಲಿ ದಾವಣಗೆರೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಕೈಗೊಂಡಿರುವ ಕಠಿಣ ಕ್ರಮ ಸಾರ್ವಜನಿಕ ಹಿತಾಸಕ್ತಿ ಹೊಂದಿದೆ. ಇದನ್ನು ಪ್ರತಿಯೊಬ್ಬರು ಗೌರವಿಸುವ ಅಗತ್ಯ ಇದೆ. ಜಿಲ್ಲಾಡಳಿತ ಸಾರ್ವಜನಿಕ ಹಿತದೃಷ್ಟಿಯಿಂದ ಕೈಗೊಂಡ ನಿರ್ಧಾರವನ್ನು ಕೆಲ ಬಿಜೆಪಿ ಮುಖಂಡರು ಹಾಗೂ ಕೆಲ ಸಂಘಟಕರು ಉಡಾಫೆಯಿಂದ ಧಿಕ್ಕರಿಸುವ ಹೇಳಿಕೆ ನೀಡಿದ್ದಾರೆ. ಸಮಾಜದ ಬಗ್ಗೆ ಕಾಳಜಿ ಇದ್ದವರು, ಸಾರ್ವಜನಿಕ ಹಿತಾಸಕ್ತಿಗಾಗಿ ಕೈಗೊಂಡ ನಿರ್ಧಾರಗಳನ್ನು ಸ್ವಾಗತಿಸಿದರೆ ಶೋಭೆ ಉಂಟು ಮಾಡುತ್ತದೆ.

ಕೇವಲ ರಾಜಕೀಯ ಕಾರಣಕ್ಕೆ ಡಿಜೆ ನಿಷೇಧವನ್ನು ವಿರೋಧಿಸುವುದು ಸರಿಯಲ್ಲ. ಈ ನಿರ್ಧಾರದ ಹಿಂದೆ ಯಾವ ಉದ್ದೇಶ ಇದೆ ಎಂಬುದು ವಿರೋಧಿಸುವವರು ಅರ್ಥ ಮಾಡಿಕೊಳ್ಳಬೇಕಿದೆ. ಮಸೀದಿಗಳಲ್ಲಿ ಪ್ರಾರ್ಥನೆ ಮಾಡುವ ದಿನಕ್ಕೆ ಐದು ಬಾರಿ ಧ್ವನಿವರ್ಧಕ ಬಳಕೆ ಮಾಡುವುದನ್ನು ಮುಂದಿಟ್ಟು ನಮಗೂ ಡಿಜೆ ಬಳಕೆ ಮಾಡಲು ಅನುಮತಿ ಕೋರಿದ್ದಾ-ರೆ. ಇದು ಸರಿಯಾದ ಕ್ರಮವಲ್ಲ. ಮಸೀದಿ ಅಥವಾ ಇನ್ನಾವುದು ಕೇಂದ್ರಗಳಲ್ಲಿ ಸಾರ್ವಜನಿಕರಿಗೆ ತೊಂದರೆ ಆಗುವಂತೆ ಧ್ವನಿವರ್ಧಕ ಅಥವಾ ಡಿಜೆ ಬಳಕೆ ಮಾಡಿದರೆ ಅದನ್ನು ವಿರೋಧಿಸಿ ಜಿಲ್ಲಾಡಳಿತಕ್ಕೆ ದೂರು ನೀಡುವುದಕ್ಕೆ ಅವಕಾಶವಿದೆ. ಅಲ್ಲಿ ಬಳಕೆ ಮಾಡುವ ಧ್ವನಿ ವರ್ಧಕ ನಿಜವಾಗಿಯೂ ಸಾರ್ವಜನಿಕರಿಗೆ ತೊಂದರೆ ಮಾಡುತ್ತಿದ್ದರು ನಿಶ್ಸಂಶಯವಾಗಿ ಅದನ್ನು ವಿರೋಧಿಸಲು ಅವಕಾಶವಿದೆ.

ಮತ್ತೊಬ್ಬರು ಮಾಡುವ ತಪ್ಪನ್ನು ನಾವೂ ಕೂಡ ಮಾಡುತ್ತೇವೆ ಎಂಬುದನ್ನು ಒಪ್ಪಲಾಗದು. ಇದು ಕೇವಲ ಜನರ ನಂಬಿಕೆಗಳನ್ನು ರಾಜಕೀಯವಾಗಿ ಬಳಸಿಕೊಳ್ಳುವ ಹುನ್ನಾರವಾಗುತ್ತದೆಯೇ ಹೊರತು, ಧಾರ್ಮಿಕವಾಗಿ ಸಲ್ಲಿಸುವ ಭಕ್ತಿಯಾಗದು. ಜಿಲ್ಲಾಡಳಿತ ಕೈಗೊಂಡ ಕಠಿಣ ಕ್ರಮದಿಂದ ಯಾವುದೇ ಕಾರಣಕ್ಕೂ ಹಿಂದೆ ಸರಿಯಬಾರದು. ನಿಯಮ ಉಲ್ಲಂಘಿಸುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮಕೈಗೊಳ್ಳಬೇಕಿದೆ.

ಕೆಲವು ಸಂಘಟನೆಗಳು ಧ್ವನಿ ವರ್ಧಕ ಮಾಲೀಕರನ್ನು ಮುಂದೆ ಬಿಟ್ಟು ನಮ್ಮ ಜೀವನದ ಮೇಲೆ ಬರೆ ಎಳೆಯಬಾರದೆಂದು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದ್ದಾರೆ. ಜಿಲ್ಲಾಡಳಿತ ಶಾಮಿಯಾನ, ದೀಪಾಲಂಕಾರ, ಧ್ವನಿವರ್ಧಕ ಬಳಕೆ ಮಾಡುವುದನ್ನು ನಿಷೇಧಿಸಿಲ್ಲ. ಡಿಜೆ ಮಾತ್ರ ನಿಷೇಧ ಮಾಡಿದೆ. ಈ ಬಗ್ಗೆ ಜಿಲ್ಲಾಡಳಿತದ ನಿರ್ಧಾರವನ್ನು ತಪ್ಪಾಗಿ ಸಾರ್ವಜನಿಕವಾಗಿ ಅರ್ಥೈಸಬಾರದು.

ಇದರ ಜೊತೆ ಸಾರ್ವಜನಿಕ ಗಣಪತಿ ಕೂರಿಸುವ ಕೆಲ ಸಂಘಟಕರು ರಸ್ತೆಯಲ್ಲಿ ಹೋಗುವ ವಾಹನ ಅಡ್ಡಗಟ್ಟಿ ಹಣ ನೀಡಲು ಪೀಡಿಸುತ್ತಾರೆ. ಇದರಿಂದ ಪ್ರಯಾಣಿಕರಿಗೆ ಇನ್ನಿಲ್ಲದ ಕಿರಿಕಿರಿ ಆಗುತ್ತಿದೆ. ಹಣ ಕೊಡುವವರಿಂದ ಪಡೆದುಕೊಳ್ಳಲು. ಒತ್ತಾಯ ಮಾಡಿ ತೊಂದರೆ ಮಾಡುವುದು ಸಮಂಜಸವಲ್ಲ. ಈ ಬಗ್ಗೆಯೂ ಜಿಲ್ಲಾಡಳಿತ ಗಮನ ಹರಿಸಬೇಕಾಗಿದೆ.

**–ಮಲ್ಲಿಕಾರ್ಜುನ್ ಕಬ್ಬೂರು**
ಸಂಪಾದಕರು

# ಸೆ. 20ರಿಂದ ಕುಟುಂಬಗಳ ಸಮೀಕ್ಷೆ, ಶೈಕ್ಷಣಿಕ, ಸಾಮಾಜಿಕ ದತ್ತಾಂಶಗಳ ಸಂಗ್ರಹ : ಜಿ.ಪಂ. ಸಿಇಓ

**ದಾವಣಗೆರೆ :** ಬರುವ ಸೆಪ್ಟೆಂಬರ್ ನಲ್ಲಿ ಮನೆ ಮನೆ ಸಮೀಕ್ಷೆ ಕೈಗೊಂಡು ಪ್ರತಿಯೊಂದು ವರ್ಗದ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ದತ್ತಾಂಶ ಸಂಗ್ರಹಿಸುವ ಕೆಲಸವನ್ನು ಸೆಪ್ಟೆಂಬರ್ 20 ರಿಂದ ಅಕ್ಟೋಬರ್ 7 ರೊಳಗಾಗಿ ಪೂರ್ಣಗೊಳಿಸಲ ಜಿಲ್ಲಾ ಪಂಚಾಯತ್ ಸಿ.ಇ.ಓ ಗಿತ್ತೆ ಮಾಧವ್ ವಿಠ್ಠಲ್ ರಾವ್ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಹಿಂದುಳಿದ ವರ್ಗಗಳ ಆಯೋಗದಿಂದ ರಾಜ್ಯದ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷಾ ಕಾರ್ಯವನ್ನು ನಡೆಸಲು ಮಾಸ್ಟರ್ ಟ್ರೈನರ್ಸ್, ಮೇಲ್ವಿಚಾರಕರು ಹಾಗೂ ಗಣತಿದಾರರನ್ನು ನೇಮಿಸಲು ಆಯೋಜಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿಯೊಂದು ಮನೆ ಹಾಗೂ ಅರಣ್ಯ ಪ್ರದೇಶದಲ್ಲಿ ನೆಲೆಸಿರುವ, ದೇವದಾಸಿ ಹೀಗೆ ಯಾವುದೇ ಒಬ್ಬ ವ್ಯಕ್ತಿ ಆಗಲಿ, ಕುಟುಂಬವಾಗಲಿ ಸಮೀಕ್ಷೆಯಿಂದ ತಪ್ಪಿಸಿಕೊಳ್ಳದಂತೆ ಜಾಗೃತವಾಗಿ ಎಚ್ಚರಿಕೆಯಿಂದ ಸಮೀಕ್ಷೆ ಕಾರ್ಯ ಕೈಗೊಳ್ಳಬೇಕು



ಎಂದು ತಾಕೀತು ಮಾಡಿದರು.

ಸಮೀಕ್ಷೆ ವೇಳೆ ತರಾತುರಿಯಲ್ಲಿ ಯಾವುದೇ ರೀತಿಯ ಸಮಸ್ಯೆಗಳು, ಗೊಂದಲಗಳು ಉಂಟಾದಂತೆ ಜಾಗೃತಿ ವಹಿಸಬೇಕು ಎಂದು ತಿಳಿಸಿದರು.

ಮನೆ ಪಟ್ಟಿ ಮತ್ತು ಅವುಗಳ ನಕ್ಷೆ (ಮ್ಯಾಪಿಂಗ್) ಸಿದ್ಧಪಡಿಸುವ ಕಾರ್ಯವನ್ನು ಒಳಗೊಂಡಿರುತ್ತದೆ. ಅದು ರಾಜ್ಯದಾದ್ಯಂತ ಎಲ್ಲಾ ಮನೆಗಳ ಸಂಪೂರ್ಣ ಎಣಿಕೆ, ಅನುಕ್ರಮ ಸಂಖ್ಯೆಗಳನ್ನು ನೀಡುವುದು, ಮ್ಯಾಪಿಂಗ್ ಮಾಡುವ ಕೆಲಸವನ್ನು ಸಾಧ್ಯವಾಗಿಸುತ್ತದೆ. ರಾಜ್ಯದಲ್ಲಿರುವ ಎಲ್ಲಾ ವಾಸದ ಮನೆಗಳಿಗೆ ವಿದ್ಯುತ್ ಸಂಪರ್ಕವಿರುವುದರಿಂದ ವಾಸದ ಮನೆಗಳ ಆರ್. ಆರ್. ಮೀಟರ್ ಆಧಾರದ ಮೇಲೆ ಮನೆಗಳನ್ನು ಗುರುತಿಸಿ ಅಲ್ಲಿರುವ ಜನರ ಸಮೀಕ್ಷೆ ಮಾಡುವುದರಿಂದ ಯಾವುದೇ ಮನೆಗಳು ಸಮೀಕ್ಷಾ ವ್ಯಾಪ್ತಿಯಿಂದ ತಪ್ಪಿ ಹೋಗುವುದಿಲ್ಲ. ಇದರಿಂದ ಎರಡನೇ ಹಂತದಲ್ಲಿ ಸಮೀಕ್ಷೆಯ ಕಾರ್ಯವನ್ನು ವ್ಯವಸ್ಥಿತವಾಗಿ ಮತ್ತು ವೈಜ್ಞಾನಿಕವಾಗಿ ಕಾರ್ಯಗತಗೊಳಿಸಲು ಅನುಕೂಲವಾಗುತ್ತದೆ. ಸಮೀಕ್ಷೆಯ ಕಾರ್ಯವನ್ನು ದಸರಾ ರಜೆಯ ಅವಧಿಯಲ್ಲಿ 22 ನೇ ಸೆಪ್ಟೆಂಬರ್ ನಿಂದ 7 ನೇ ಅಕ್ಟೋಬರ್ 2025 ರವರೆಗೆ ನಡೆಸಲು ಗುರಿ ಹೊಂದಲಾಗಿದೆ. ಈ ಸಮಯದಲ್ಲಿ ಶಾಲಾ ರಜಾದಿನಗಳು ಇರುವುದರಿಂದ ಸಮೀಕ್ಷೆ ಕಾರ್ಯಕ್ಕೆ ಪೂರಕವಾಗಿದೆ.

1 ರಿಂದ 8 ನೇ ತರಗತಿ ಶಿಕ್ಷಕರು ಈ ಸಮೀಕ್ಷೆ ಕಾರ್ಯವನ್ನು ಮಾಡಬೇಕು. ಬಿ.ಆರ್.ಸಿ ಮತ್ತು ಸಿ.ಆರ್.ಸಿ ಯವರು ಮೇಲ್ವಿಚಾರಕರನ್ನಾಗಿ ನೇಮಕ ಮಾಡಬೇಕು. 17 ದಿನಗಳಲ್ಲಿ ಈ ಸಮೀಕ್ಷೆ ಕಾರ್ಯ ಪೂರ್ಣ ಆಗಬೇಕು ಎಂದು ಸೂಚನೆ ನೀಡಿದರು.

ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ ಮಾತನಾಡಿ, ಸಮೀಕ್ಷಾ ಕಾರ್ಯದಲ್ಲಿ ಶಿಕ್ಷಣ ಇಲಾಖೆ ಜೊತೆಗೆ ಅಗತ್ಯವಿದ್ದಲ್ಲಿ ವಿವಿಧ ಇಲಾಖೆಗಳ ಪ್ರಥಮ ದರ್ಜೆ ಮತ್ತು ದ್ವಿತೀಯ ದರ್ಜೆ ಸಹಾಯಕರನ್ನು ಸಹ ಈ ಸಮೀಕ್ಷೆಗೆ ಬಳಸಿಕೊಳ್ಳಬಹುದು ಎಂದು ತಿಳಿಸಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಅಭಿಷೇಕ್, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ರೇಣುಕಾ ದೇವಿ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್, ಡಿಡಿಪಿಐ ಕೊಟ್ರೇಶ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.


## ಚಿಕ್ಕಮಗಳೂರು ಡಿಸಿಸಿ ಬ್ಯಾಂಕ್ ಚುನಾವಣೆ ಮುಂದೂಡಿಕೆ

**ಚಿಕ್ಕಮಗಳೂರು:** ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ಗೆ ಸೆ.13ರಂದು ನಿಗದಿಯಾಗಿದ್ದ ಚುನಾವಣೆಯನ್ನು ಮುಂದೂಡಿರುವುದಾಗಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೇಢರಲ್ ಸಹಕಾರ ಸಂಘಗಳ ಚುನಾವಣಾಧಿಕಾರಿ ಸಿ.ಎನ್. ಮೀನಾ ನಾಗರಾಜ್ ತಿಳಿಸಿದ್ದಾರೆ.

ಮತದಾರರ ಅರ್ಹ ಪಟ್ಟಿಯ ಬಗ್ಗೆ ಹೈಕೋರ್ಟ್‌ನಲ್ಲಿ ಕೆಲವರು ಪ್ರಶ್ನೆ ಮಾಡಿದ್ದು, ವಿಚಾರಣಾ ಹಂತದಲ್ಲಿರುವುದರಿಂದ ಚುನಾವಣೆಗೆ ಹೊರಡಿಸಿದ್ದ ಅಧಿಸೂಚನೆಯನ್ನು ಹಿಂಪಡೆಯಲಾಗಿದೆ ಎಂದು ಪ್ರಕಟಣೆಯಲ್ಲಿ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ತೋಟದೂರು ಹಾಗೂ ನಂದೀಪುರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹೈಕೋರ್ಟ್‌ನಲ್ಲಿ ದಾವೆ ಹೂಡಿ, ಮತದಾನ ಹಕ್ಕನ್ನು ನೀಡುವಂತೆ ಮನವಿ ಮಾಡಿದ್ದಾರೆ. ಪ್ರಕರಣ ವಿಚಾರಣಾ ಹಂತದಲ್ಲಿದೆ. ಅರ್ಹರು ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಹಾಗೂ ಆಡಳಿತ ಮಂಡಳಿಯ ಚುನಾವಣೆಯನ್ನು ನ್ಯಾಯಸಮ್ಮತವಾಗಿ ನಡೆಸುವ ಉದ್ದೇಶದಿಂದ ಅಧಿಸೂಚನೆಯನ್ನು ವಾಪಸು ಪಡೆದು ಚುನಾವಣೆ ಮುಂದೂಡಲಾಗಿದೆ ಎಂದು ಹೇಳಿದ್ದಾರೆ.

## ಜಮ್ಮು ವಿನಾದ್ಯಂತ ಭಾರೀ ಮಳೆ: ಪ್ರವಾಹ, ಭೂಕುಸಿತದಿಂದ ಮೂವರು ಸಾವು; ಕೊಚ್ಚಿ ಹೋದ ಸೇತುವೆ



**ಜಮ್ಮು:** ಜಮ್ಮು ಮತ್ತು ಕಾಶ್ಮೀರದ ದೋಡಾ ಜಿಲ್ಲೆಯಲ್ಲಿ ಮತ್ತೆ ಮೇಘಸ್ಫೋಟವಾಗಿದ್ದು, ಭಾರೀ ಮಳೆಯಿಂದ ಮೂವರು ಸಾವನ್ನಪ್ಪಿದ್ದಾರೆ ಮತ್ತು ಎರಡು ಡಜನ್‌ಗೂ ಹೆಚ್ಚು ಮನೆಗಳು ಹಾಗೂ ಸೇತುವೆಗಳು ಕೊಚ್ಚಿ ಹೋಗಿವೆ.

ಬಹುತೇಕ ಎಲ್ಲಾ ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದು, ನಗರ ಮತ್ತು ಇತರೆಡೆ ಹಲವಾರು ತಗ್ಗು ಪ್ರದೇಶಗಳು ಮತ್ತು ರಸ್ತೆಗಳು ಮುಳುಗಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಜಮ್ಮು ಪ್ರಾಂತ್ಯದ ಹಲವು ಭಾಗಗಳಲ್ಲಿ ಪರಿಸ್ಥಿತಿ "ಸಾಕಷ್ಟು ಗಂಭೀರವಾಗಿದೆ" ಮತ್ತು ಪರಿಸ್ಥಿತಿಯನ್ನು ವೈಯಕ್ತಿಕವಾಗಿ ಮೇಲ್ವಿಚಾರಣೆಮಾಡಲು ಶ್ರೀನಗರದಿಂದ ಜಮ್ಮುವಿಗೆ ಭೇಟಿ ನೀಡುವುದಾಗಿ ಜಮ್ಮು ಮತ್ತು ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಹೇಳಿದ್ದಾರೆ.

ಭಾರೀ ಮಳೆಯಿಂದ ಜಮ್ಮು-ಶ್ರೀನಗರ ಮತ್ತು ಕಿಶ್ತ್ವಾರ್-ದೋಡಾ ರಾಷ್ಟ್ರೀಯ ಹೆದ್ದಾರಿ ಸಂಚಾರ ಸ್ಥಗಿತಗೊಳಿಸಲಾಗಿದೆ. ಅಲ್ಲದೆ ಭೂಕುಸಿತ ಅಥವಾ ಹಠಾತ್ ಪ್ರವಾಹದಿಂದ ಅಲ್ಲದೆ ಡಜನ್ಗಟ್ಟಲೆ ಗುಡ್ಡಗಾಡು ರಸ್ತೆಗಳನ್ನು ನಿರ್ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮುನ್ನೆಚ್ಚರಿಕೆ ಕ್ರಮವಾಗಿ ಮಾತಾ ವೈಷ್ಣೋದೇವಿ ದೇಗುಲಕ್ಕೆ ತೀರ್ಥಯಾತ್ರೆಯನ್ನು ಸಹ ಸ್ಥಗಿತಗೊಳಿಸಲಾಗಿದೆ ಎಂದು ಅವರು ಹೇಳಿದ್ದಾರೆ.

ಗಂಡೋದಲ್ಲಿ ಇಬ್ಬರು ಮತ್ತು ಥಾಥ್ರಿಯಲ್ಲಿ ಒಬ್ಬರು ಸೇರಿದಂತೆ ಮಳೆ ಸಂಬಂಧಿತ ಪ್ರತ್ಯೇಕ ಘಟನೆಗಳಲ್ಲಿ ಮೂವರು ಸಾವನ್ನಪ್ಪಿದ್ದಾರೆ ಮತ್ತು 15 ಮನೆಗಳು ಹಾಗೂ ನಾಲ್ಕು ಸೇತುವೆಗಳಿಗೆ ಹಾನಿಯಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಆರ್‌ಎಸ್‌ಎಸ್‌ನ ಪ್ರಾರ್ಥನೆ ಮಾಡಿದ್ದಕ್ಕೆ ಕ್ಷಮೆಯಾಚಿಸಿದ ಡಿಸಿಎಂ ಡಿ.ಕೆ. ಶಿವಕುಮಾರ್

**ಬೆಂಗಳೂರು, ಆ.26–** ವಿಧಾನಸಭೆಯಲ್ಲಿ ನಮಸ್ತೇ ಸದಾ ವತ್ಸಲೆ ಎಂದು ಆರ್‌ಎಸ್‌ಎಸ್‌ನ ಪ್ರಾರ್ಥನೆ ಮಾಡಿದ್ದು, ತಪ್ಪಾಗಿದ್ದರೆ ಪಕ್ಷದ ಕಾರ್ಯಕರ್ತರು, ಮುಖಂಡರು, ಇಂಡಿಯಾ ರಾಜಕೀಯ ಕೂಟದ ಮುಖಂಡರ ಕ್ಷಮೆ ಕೇಳುತ್ತೇನೆ ಎಂದು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿನ್ನಸ್ವಾಮಿ ಕ್ರೀಡಾಂಗಣದ ಕಾಲ್ತುಳಿತ ಪ್ರಕರಣದ ಕುರಿತು ಚರ್ಚೆ ನಡೆಯುತ್ತಿದ್ದಾಗ ನಾನು ವಿರೋಧ ಪಕ್ಷದ ನಾಯಕ ಆರ್. ಆಶೋಕ್ ಅವರ ಹಿನ್ನೆಲೆಯನ್ನು ಹೇಳುವ ಸಲುವಾಗಿ ನಮಸ್ತೆ ಸದಾ ವತ್ಸಲೆ ಎಂದು ಹಾಡಿದ್ದೇನೆ. ಇದರಲ್ಲಿ ಆರ್‌ಎಸ್‌ಎಸ್ ಅನ್ನು ಹೊಗಳುವ ಉದ್ದೇಶ ಇರಲಿಲ್ಲ ಎಂದಿದ್ದಾರೆ.

ನನ್ನ ಜೀವನ ಕಾಂಗ್ರೆಸ್ ಕಾರ್ಯಕರ್ತರ ಬದುಕಿಗೆ ಮೆಟ್ಟಿಲು ಆಗಬೇಕೆ ಹೊರತು, ಭಾವನೆಗಳಿಗೆ ಧಕ್ಕೆಯಾಗಬಾರದು. ನಮ ಪಕ್ಷದ ಹಿರಿಯ ನಾಯಕರುಗಳು ದೊಡ್ಡ ದೊಡ್ಡ ಸಲಹೆಗಳನ್ನು ನೀಡಿದ್ದಾರೆ. ಅದನ್ನು ಗೌರವಿಸುತ್ತೇನೆ. ಆದರೆ ಮಾಧ್ಯಮಗಳಲ್ಲಿ ಮಾತನಾಡುವುದರಿಂದ ಯಾವುದೇ ಪ್ರಯೋಜನವಿಲ್ಲ. ನೇರವಾಗಿ ಕಾಂಗ್ರೆಸ್ ಕಚೇರಿಗೆ ಬನ್ನಿ, ಸಭೆ ಮಾಡಿ ಚರ್ಚಿಸಿ ಎಂದು ಮನವಿ ಮಾಡಿದರು.

## ರಸ್ತೆ ದುರಸ್ತಿಗೆ ಒತ್ತಾಯಿಸಿ ವಿಶ್ವ ಕರ್ನಾಟಕ ರಕ್ಷಣಾ ವೇದಿಕೆಯ ಮನವಿ

**ಹರಿಹರ :** ಗಣೇಶ ಚತುರ್ಥಿ ಹಬ್ಬ ಸಮೀಪಿಸುತ್ತಿರುವ ಸಂದರ್ಭದಲ್ಲಿ ಹರಿಹರ ನಗರದ ರಸ್ತೆಗಳನ್ನು ತುರ್ತು ಆಧಾರದ ಮೇಲೆ ದುರಸ್ತಿ ಮಾಡಲು ವಿಶ್ವ ಕರ್ನಾಟಕ ರಕ್ಷಣಾ ವೇದಿಕೆಯ ವತಿಯಿಂದ ಸೋಮವಾರ ತಹಶೀಲ್ದಾರ್, ನಗರಸಭೆ ಅಧ್ಯಕ್ಷರು ಹಾಗೂ ಪೌರಾಯುಕ್ತರಿಗೆ ಮನವಿ ಸಲ್ಲಿಸಲಾಯಿತು.

ನಗರದ ರಾಣಿ ಚೆನ್ನಮ್ಮ ವೃತ್ತದಿಂದ ಪ್ರಮುಖ ರಸ್ತೆಗಳಲ್ಲಿ ಘೋಷಣೆಗಳೊಂದಿಗೆ ಪ್ರತಿಭಟನಾ ಮೆರವಣಿಗೆ ಮೂಲಕ ಮಹಾತ್ಮ ಗಾಂಧಿ ವೃತ್ತಕ್ಕೆ ಆಗಮಿಸಿ ಸ್ವಲ್ಪ ಹೊತ್ತು ಮಾನವ ಸರಪಳಿ ನಿರ್ಮಿಸಿ, ಘೋಷಣೆಗಳನ್ನು ಕೂಗಿ ನಂತರ ಗ್ರೇಡ್ 2 ತಹಸೀಲ್ದಾರ್ ಪುಷ್ಪಾವತಿಯವರಿಗೆ ಮನವಿ ಅರ್ಪಿಸಿದರು.

ರಾಜ್ಯ ಉಪಾಧ್ಯಕ್ಷ ನಾಗರಾಜ್ ಭಂಡಾರಿ ಮಾತನಾಡಿ, "ನಗರದ ಪ್ರಮುಖ ಪ್ರದೇಶಗಳಲ್ಲಿನ




ಹಲವಾರು ರಸ್ತೆಗಳಲ್ಲಿ ದೊಡ್ಡ ಮಟ್ಟದ ಹಾನಿ ಉಂಟಾಗಿದೆ. ಇತ್ತೀಚಿನ ಭಾರೀ ಮಳೆಯಿಂದಾಗಿ ರಸ್ತೆಗಳ ಸ್ಥಿತಿ ಇನ್ನಷ್ಟು ಹದಗೆಟ್ಟಿದ್ದು, ಗಣೇಶ ಚತುರ್ಥಿಯ ಸಂದರ್ಭದಲ್ಲಿ ಸಾವಿರಾರು ಮಂದಿ ಹರಿಹರಕ್ಕೆ ಆಗಮಿಸುವ ಹಿನ್ನೆಲೆ ರಸ್ತೆ ಸಮಸ್ಯೆ ನಾಗರಿಕರಿಗೆ ದೊಡ್ಡ ತೊಂದರೆ ಉಂಟುಮಾಡುವ ಸಾಧ್ಯತೆ ಇದೆ. ಅದಕ್ಕಾಗಿ ಸಂಬಂಧಿಸಿದ ಇಲಾಖೆಗಳು ತಕ್ಷಣ ಕ್ರಮ ಕೈಗೊಂಡು ಹಬ್ಬಕ್ಕೂ ಮುನ್ನ ದುರಸ್ತಿ ಕಾರ್ಯಗಳನ್ನು ಪೂರ್ಣಗೊಳಿಸಬೇಕು" ಎಂದು ಒತ್ತಾಯಿಸಿದರು.

ಮುಂದುವರೆದು ಅವರು, "ಗಣೇಶನ ವಿಗ್ರಹಗಳನ್ನು ತರಲು ಹಾಗೂ ಭಕ್ತರು ಸಂಚರಿಸಲು ವಾಹನಗಳ ಸಂಚಾರ ಗಣನೀಯ ಪ್ರಮಾಣದಲ್ಲಿ ನಡೆಯಲಿದೆ. ಆದರೆ ಪ್ರಸ್ತುತ ರಸ್ತೆಗಳ ಹಾಳಾದ ಸ್ಥಿತಿ ಸಾರ್ವಜನಿಕರಿಗೆ ಅಸೌಕರ್ಯ ಉಂಟುಮಾಡುತ್ತಿದ್ದು, ಅಪಘಾತದ ಸಾಧ್ಯತೆಗಳಿಗೂ ಕಾರಣವಾಗಿದೆ. ವಿಶೇಷವಾಗಿ ದಾವಣಗೆರೆ ರಸ್ತೆಯ ಮೇಲ್ಸೇತುವೆ ಹಾಗೂ ತುಂಗಭದ್ರಾ ನದಿಗೆ ನಿರ್ಮಿಸಲಾದ ನೂತನ ಸೇತುವೆಯ ಮೇಲೆ ಗುಂಡಿಗಳು ಉಂಟಾಗಿದ್ದು, ಕಬ್ಬಿಣದ ರಾಡ್‌ಗಳು ಹೊರಗೆ ಬಿದ್ದಿವೆ. ಇದರಿಂದ ವಾಹನ ಸವಾರರಿಗೆ ಅಪಾಯ ಉಂಟಾಗಿದೆ" ಎಂದು ಹೇಳಿದರು.

ಸಾರ್ವಜನಿಕ ನಿರ್ಮಾಣ ಇಲಾಖೆಯು ತಕ್ಷಣವೇ ಕ್ರಮ ಕೈಗೊಂಡು ಈ ಸಮಸ್ಯೆ ನಿವಾರಣೆ ಮಾಡಿದರೆ, ಭಕ್ತರು ಹಾಗೂ ಸಾಮಾನ್ಯ ನಾಗರಿಕರು ಸುರಕ್ಷಿತವಾಗಿ ಸಂಚರಿಸಲು ಅನುಕೂಲವಾಗುತ್ತದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು.

ಮನವಿ ಸಲ್ಲಿಕೆಯ ವೇಳೆ ಆಟೋ ಚಾಲಕರ ಸಂಘ, ಮಾನವ ಹಕ್ಕುಗಳ ಒಕ್ಕೂಟ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿ ಗಳು ಹಾಗೂ ಸದಸ್ಯರು ಸಕ್ರಿಯವಾಗಿ ಭಾಗವಹಿಸಿದರು. ವೇದಿಕೆ ಪರವಾಗಿ ಎಲ್ಲರಿಗೂ ಧನ್ಯವಾದಗಳನ್ನು ಅರ್ಪಿಸಲಾಯಿತು.

ಒಟ್ಟಾರೆ, ಹಬ್ಬದ ಸಂಭ್ರಮದಲ್ಲಿ ನಾಗರಿಕರು ಯಾವುದೇ ತೊಂದರೆ ಅನುಭವಿಸದಂತೆ ತುರ್ತು ಕ್ರಮ ಕೈಗೊಳ್ಳುವಂತೆ ವಿಶ್ವ ಕರ್ನಾಟಕ ರಕ್ಷಣಾ ವೇದಿಕೆ ಒತ್ತಾಯಿಸಿದೆ.

ಈ ಸಮಯದಲ್ಲಿ ವಿಶ್ವ ಕರ್ನಾಟಕ ರಕ್ಷಣಾ ವೇದಿಕೆಯ ಜಿ.ವಿ. ಪ್ರವೀಣ್ ಕುಮಾರ್, ಜಿಲ್ಲಾ ಅಧ್ಯಕ್ಷ ಬಾಬುರಾವ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಜಮ್ ರಜ್ವಿ, ತಾಲೂಕ ಅಧ್ಯಕ್ಷ ರಾಹುಲ್ ಮೆಹರ್ವಾಡೆ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಗದಿಗೆಪ್ಪ ವಾಸನದ, ಜಿಲ್ಲಾ ಅಗೋ ಚಾಲಕರ ಸಂಘದ ಇಸ್ಮಾಹಿಲ್ ಜಬಿವುಲ್ಲಾ,ಸೈಯದ್ ಶಾಬಾಜ್,ರಿಷಬ್ ಮತ್ತಿತರರಿದ್ದರು.

## ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ಸಮಾಜದ ಮುಖ್ಯವಾಹಿನಿಗೆ ಬರಲು ಶಾಸಕ ದೇವೇಂದ್ರಪ್ಪ ಕರೆ



**ಜಗಳೂರು :** ಪರಿಶಿಷ್ಟ ಜಾತಿಗಳಿಗೆ ಒಳ ಮೀಸಲಾತಿ ನೀಡುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದಂತೆ ನಡೆದಿದ್ದಾರೆ ಎಂದು ಶಾಸಕ ಬಿ. ದೇವೇಂದ್ರಪ್ಪ ತಿಳಿಸಿದರು.

ಪಟ್ಟಣದ ಶಾಸಕರ ನಿವಾಸದಲ್ಲಿ ಛಲವಾದಿ ಸಮಾಜದ ವತಿಯಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಅಂಬೇಡ್ಕರ್ ಕೊಟ್ಟ ಮೀಸಲಾತಿ ಅಡಿಯಲ್ಲಿ ನಾವು-ನೀವೆಲ್ಲ ಬದುಕುತ್ತಿದ್ದೇವೆ. ಒಳ ಮೀಸಲಾತಿ ಶಿಕ್ಷಣ ಹಾಗೂ ಉದ್ಯೋಗಕ್ಕೆ ಅನುಕೂಲವಾಗಲಿದೆ. ಈ ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ಸಮಾಜದ ಮುಖ್ಯವಾಹಿನಿಗೆ ಬರಬೇಕು.

ಹಲವು ದಶಕಗಳಿಂದ ಒಳ ಮೀಸಲಾತಿ ಹೋರಾಟ ನಡೆಯುತ್ತಿತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಚುನಾವಣೆ ಪೂರ್ವ ಕೊಟ್ಟ ಮಾತಿನಂತೆ ಒಳ ಮೀಸಲಾತಿ ಜಾರಿ ಗೊಳಿಸಿ, ಪರಿಶಿಷ್ಟ ಜಾತಿಯಲ್ಲಿ ಅಸ್ಪೃಶ್ಯ, ಸ್ಪೃಶ್ಯ ಹಾಗೂ ಅಲೆ ಮಾರಿ, ಅರೆ ಅಲೆ ಮಾರಿಗಳಿಗೆ ಮೀಸಲಾತಿ ಹಂಚಿಕೆ ಮಾಡಿ ಸಾಮಾಜಿಕ ನ್ಯಾಯ ಕಲ್ಪಿಸಿದ್ದಾರೆ ಎಂದರು.

ಕ್ಷೇತ್ರದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಸಮುದಾಯಗಳ ಅಭಿವೃದ್ಧಿಗೆ ಶ್ರಮಿಸು ತ್ತಿದ್ದು, ಛಲವಾದಿ ಸಮಾಜದ ಸಮುದಾಯ ಭವನ ನಿರ್ಮಾಣಕ್ಕೆ ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಅವರು 2 ಕೋಟಿ ಅನುದಾನ ನೀಡುವ ಭರವಸೆ ನೀಡಿದ್ದಾರೆ ಎಂದರು.

ನಿವೃತ್ತ ಸಮಾಜ ಕಲ್ಯಾಣ ಅಧಿಕಾರಿ ಬಿ. ಮಹೇಶ್ವರಪ್ಪ ಮಾತನಾಡಿ, ಒಳ ಮೀಸಲಾತಿ ಛಲವಾದಿ ಮತ್ತು ಮಾದಿಗ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವರದಾನವಾಗಿದೆ. ಉದ್ಯೋಗ ಹಾಗೂ ಶೈಕ್ಷಣಿಕ ಸೌಲಭ್ಯ ಸಿಗಲಿದೆ, ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಿ ಮುಖ್ಯ ವಾಹಿನಿಗೆ ಬರಬೇಕು ಎಂದು ಹೇಳಿದರು.

ಪ್ರಾಂಶುಪಾಲ ಎ.ಡಿ. ನಾಗಲಿಂಗಪ್ಪ, ಪತ್ರಕರ್ತ ಧನ್ಯಕುಮಾರ್ ಮಾತನಾಡಿದರು. ಈ ಸಂದರ್ಭದಲ್ಲಿ ಛಲವಾದಿ ಸಮಾಜದ ಜಿಲ್ಲಾ ಉಪಾಧ್ಯಕ್ಷ ಕೆ.ಟಿ. ವೀರಸ್ವಾಮಿ , ತಾಲ್ಲೂಕು ಉಪಾಧ್ಯಕ್ಷ ಹೆಚ್. ಹನುಮಂತಪ್ಪ, ಸಂಘಟನಾ ಕಾರ್ಯದರ್ಶಿ ಹೆಚ್. ತಿಪ್ಪೇಸ್ವಾಮಿ, ಸಮಿತಿ ನಿರ್ದೇಶಕ ಡಿ.ಬಿ. ಹಳ್ಳಿ ನಾಗೇಶ್, ವಕೀಲ ಮಹಾಂತೇಶ್, ಡಾ. ರಂಗಪ್ಪ, ತಿಪ್ಪೇಸ್ವಾಮಿ, ನೀಲಕಂಠೇಶ್, ದೇವರಾಜ್, ಪತ್ರಕರ್ತ ಮಾದಿಹಳ್ಳಿ ಮಂಜಪ್ಪ , ಟಿ. ರವಿಕುಮಾರ್, ರೈತ ಸಂಘದ ಅಧ್ಯಕ್ಷ ಭರಮ ಸಮುದ್ರ ಕುಮಾರ್, ಗ್ರಾ.ಪಂ.ಉಪಾಧ್ಯಕ್ಷ ಎಸ್. ತಿಪ್ಪೇಸ್ವಾಮಿ ಸೇರಿದಂತೆ, ಸಮಾಜದ ಮುಖಂಡರು ಇದ್ದರು.

## ಬಿಜೆಪಿಯ ರಾಷ್ಟ್ರಾಧ್ಯಕ್ಷರಾಗಿ ಶಿವರಾಜ್‌ಸಿಂಗ್ ಚೌಹಾಣ್ ಆಯ್ಕೆ ಬಹುತೇಕ ಫಿಕ್ಸ್..?

**ನವದೆಹಲಿ,ಆ.26–** ಹಲವು ತಿಂಗಳಿನಿಂದ ಹರಿದಾಡುತ್ತಿರುವ ಅಂತೆಕಂತೆ ಗಾಳಿಸುದ್ದಿ, ಊಹಾಪೋಹಗಳಿಗೆ ಸದ್ಯದಲ್ಲೇ ತೆರೆಬೀಳುವ ಸಾಧ್ಯತೆ ದಟ್ಟವಾಗಿದೆ. ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮತ್ತು ರಾಷ್ಟ್ರೀಯ ಸ್ವಯಂಸೇವಕ ಸಂಘದ ಸರಸಂಘಚಾಲಕ ಮೋಹನ್ ಭಾಗವತ್ ನಡುವೆ ಸುದೀರ್ಘ ಮಾತುಕತೆ ನಡೆದಿದೆ.

ಪ್ರಮುಖ ಅಂಶವೇನಂದರೆ, ಬಿಜೆಪಿಯ ರಾಷ್ಟ್ರಾಧ್ಯಕ್ಷ ಹುದ್ದೆಗೆ ಮಂಚೂಣಿಯಲ್ಲಿ ಕೇಳಿ ಬರುತ್ತಿದ್ದ ಹೆಸರು ಶಿವರಾಜ್ ಸಿಂಗ್. ಮೂಲಗಳ ಪ್ರಕಾರ, ಆರ್‌ಎಸ್‌ಎಸ್ ಪ್ರಥಮ ಆಯ್ಕೆ ಕೂಡಾ ಇವರೇ ಎನ್ನುವ ಸುದ್ದಿಯೂ ಹರಿದಾಡುತ್ತಿದೆ. ಹಾಗಾಗಿ, ರಾಷ್ಟ್ರಾಧ್ಯಕ್ಷ ಹುದ್ದೆಗೆ ಯಾರ ಹೆಸರು ಅಂತಿಮವಾಗುತ್ತದೆ ಎನ್ನುವ ಕುತೂಹಲಕ್ಕೆ ಸದ್ಯದಲ್ಲೇ ತೆರೆಬೀಳಲಿದೆ ಎಂದು ಹೇಳಲಾಗುತ್ತಿದೆ.

ಸುಮಾರು ಎರಡು ವರ್ಷಗಳ ನಂತರ, ಮಧ್ಯಪ್ರದೇಶದ ಮಾಜಿ ಮುಖ್ಯಮಂತ್ರಿಯೂ ಆಗಿರುವ ಶಿವರಾಜ್ ಸಿಂಗ್ ಚೌಹಾಣ್ ಮತ್ತು ಮೋಹನ್ ಭಾಗವತ್ ನಡುವಿನ ಭೇಟಿಯಾಗಿದೆ. ದೆಹಲಿಯ



ಝುಂಡೇವಾಲ್‌ನಲ್ಲಿರುವ ಸಂಘದ ಕೇಶವಕುಂಜ ಕಚೇರಿಯಲ್ಲಿ ಈ ಭೇಟಿಯಾಗಿದೆ ಎಂದು ಹೇಳಲಾಗುತ್ತಿದೆ.

ಉಪರಾಷ್ಟ್ರಪತಿ ಚುನಾವಣೆ ಇದೇ ಬರುವ ಸೆಪ್ಟೆಂಬರ್ ಒಂಬತ್ತರಂದು ನಡೆಯಲಿದೆ. ಇದು ಮುಗಿದ ಬೆನ್ನಲ್ಲೇ, ಬಿಜೆಪಿಯು ತನ್ನ ಹೊಸ ರಾಷ್ಟ್ರಾಧ್ಯಕ್ಷರ ಹೆಸರನ್ನು ಪ್ರಕಟಿಸುವ ಸಾಧ್ಯತೆಯಿದೆ. ಆ ಮೂಲಕ ಬಹುದಿನಗಳಿಂದ ಪೆಂಡಿಂಗ್ ಇರುವ ಈ ಪ್ರಕ್ರಿಯೆಗೆ ಫುಲ್ ಸ್ಟಾಪ್ ಬೀಳಲಿದೆ.

ಸುಮಾರು 45 ನಿಮಿಷಗಳ ಕಾಲ ಇಬ್ಬರೂ ನಾಯಕರು ಮಾತುಕತೆಯನ್ನು ನಡೆಸಿದ್ದಾರೆ.

ಹರಿದಾಡುತ್ತಿದ್ದ ಸುದ್ದಿಯ ಪ್ರಕಾರ, ಶಿವರಾಜ್ ಸಿಂಗ್ ಚೌಹಾಣ್, ಧರ್ಮೇಂದ್ರ ಪ್ರಧಾನ್ ಮತ್ತು ಭೂಪೇಂದ್ರ ಯಾದವ್, ಈ ಮೂವರ ಹೆಸರು ರಾಷ್ಟ್ರಾಧ್ಯಕ್ಷರ ಹುದ್ದೆಗೆ ಕೇಳಿ ಬರುತ್ತಿತ್ತು.

ಮೋಹನ್ ಭಾಗವತ್ ಅವರನ್ನು ಭೇಟಿಯಾಗುವ ಮುನ್ನ ಶಿವರಾಜ್ ಸಿಂಗ್, ಕೇಂದ್ರ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಮತ್ತು ಡಾ. ಚಿನಯ್ ಪಾಂಡ್ಯ ಅವರೊಂದಿಗೆ, ರಾಜಧಾನಿಯ ಪ್ರಗತಿ ಮೈದನಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಆರ್‌ಎಸ್‌ಎಸ್ ಮುಖ್ಯಸ್ಥರ ಜೊತೆಗಿನ ಭೇಟಿಯ ನಂತರ, ಶಿವರಾಜ್, ಭೋಪಾಲ್‌ಗೆ ಪ್ರಯಾಣ ಬೆಳೆಸಿದರು.

ಇಬ್ಬರು ನಾಯಕರ ನಡುವಿನ ಭೇಟಿ ರಾಜಕೀಯ ವಲಯದಲ್ಲಿ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಬಿಜೆಪಿಯ ಆಂತರಿಕ ಮೂಲಗಳ ಪ್ರಕಾರ, ಸೆಪ್ಟಂಬರ್ 28ರೊಳಗೆ ರಾಷ್ಟ್ರಾಧ್ಯಕ್ಷರ ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ನಿರ್ಧರಿಸಲಾಗಿದೆ.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ವೆಚ್ಚದ ಏರಿದರೂ ಆದಾಯದಲ್ಲಿನ ಹೆಚ್ಚಳ ನಿಮ್ಮ ಖರ್ಚುಗಳನ್ನು ನೋಡಿಕೊಳ್ಳುತ್ತದೆ. ನೀವು ನಿಮ್ಮ ಆಕರ್ಷಣೆಯನ್ನು ಹಾಗೂ ನಿಮ್ಮ ಬುದ್ಧಿವಂತಿಕೆಯನ್ನು ಬಳಸಿದಲ್ಲಿ ಜನರು ನಿಮ್ಮ ಮತುಗಳನ್ನು ಕೇಳುತ್ತಾರೆ. ನಿಮ್ಮ ಪ್ರೀತಿಯನ್ನು ಅಮೂಲ್ಯ ವಸ್ತುಗಳಂತೆ ಹೊಸತನದಿಂದಿಡಿ. ಕೆಲವು ಸಹ ಕಾರ್ಮಿಕರು ಕೆಲವು ಪ್ರಮುಖ ಸಮಸ್ಯೆಗಳನ್ನು ನಿಭಾಯಿಸುವ ನಿಮ್ಮ ವಿಧಾನವನ್ನು ಇಷ್ಟಪಡದಿರಬಹುದು ಆದರೆ ಅದನ್ನು ನಿಮಗೆ ಹೇಳದಿರಬಹುದು ನೀವು ಫಲಿತಾಂಶಗಳು ನೀವು ನಿರೀಕ್ಷಿಸಿದಷ್ಟು ಉತ್ತಮವಾಗಿಲ್ಲವೆಂದು ಭಾವಿಸಿದಲ್ಲಿ – ನಿಮ್ಮ ಯೋಜನೆಗಳನ್ನು ವಿಮರ್ಶಿಸಿ ಅವುಗಳನ್ನು ಬದಲಿಸುವದು ಬುದ್ಧಿವಂತಿಕೆಯಾಗಬಹುದು

### ವೃಷಭ ರಾಶಿ

ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ಈ ರಾಶಿಚಕ್ರದ ಕೆಲವರು ಇಂದು ಭೂಮಿಗೆ ಸಂಬಂಧಿಸಿದ ಯಾವುದೇ ವಿಷಯಕ್ಕೆ ಹಣವನ್ನು ಖರ್ಚು ಮಾಡಬೇಕಾಗಬಹುದು. ಒಬ್ಬ ಹತ್ತಿರದ ಸಂಬಂಧಿಗೆ ಹೆಚ್ಚು ಗಮನ ನೀಡಬೇಕಾಗಬಹುದಾದರೂ ಅವರು ಬೆಂಬಲ ಮತ್ತು ಆರೈಕೆ ನೀಡಬಹುದು. ಇವತ್ತು ಡೇಟ್‌ಗೆ ಹೋದಲ್ಲಿ ವಿವಾದಾತ್ಮಕ ವಿಷಯಗಳನ್ನು ಕೆದಕುವುದನ್ನು ತಪ್ಪಿಸಿ.

### ಮಿಥುನ ರಾಶಿ

ಸಂಘರ್ಷವು ನಿಮ್ಮ ಅನಾರೋಗ್ಯವನ್ನು ಇನ್ನಷ್ಟು ಹಾಳುಮಾಡಬಹುದಾದ್ದರಿಂದ ಅದನ್ನು ತಪ್ಪಿಸಿ. ವಿವಾಹಿತ ಜನರು ಇಂದು ತಮ್ಮ ಮಕ್ಕಳ ಶಿಕ್ಷಣದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಕುಟುಂಬದಲ್ಲಿ ಕೆಲವು ಸ್ತ್ರೀ ಸದಸ್ಯರ ಆರೋಗ್ಯ ಚಿಂತೆಗೆ ಕಾರಣವಾಗಬಹುದು. ನಿಮ್ಮ ಪ್ರೇಮ ಜೀವನವಾಗಿ ಮದುವೆಯ ಪ್ರಸ್ತಾಪ ಜೀವನಪೂರ್ಣದ ಬಂಧದಲ್ಲಿ ಬದಲಾಗಬಹುದು.

### ಕರ್ಕ ರಾಶಿ

ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳೆರಡಕ್ಕೂ ಪ್ರಯೋಜನಕಾರಿಯಾಗುತ್ತದೆ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ನಿಮ್ಮ ಮನೆಯ ವಾತಾವರಣವನ್ನು ಬದಲಾಯಿಸುವ ಮೊದಲು ಅದಕ್ಕೆ ಎಲ್ಲರ ಅನುಮೋದನೆಯಿದೆಯೆಂದು ಖಾತ್ರಿಪಡಿಸಿಕೊಳ್ಳಿ. ಇಂದು ಪ್ರಣಯದ ಭಾವನೆಗಳಿಗೆ ಪ್ರತಿಕ್ರಿಯೆ ದೊರಕುತ್ತದೆ.

### ಸಿಂಹ ರಾಶಿ

ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ಕಳೆದ ದಿನಗಳನ್ನು ಹೋಲಿಸಿದರೆ ಇಂದು ಆರ್ಥಿಕ ಉತ್ತಮವಾಗಲಿದೆ ಮತ್ತು ನೀವು ಹೆಚ್ಚಿನ ಹಣವನ್ನು ಪಡೆಯುತ್ತೀರಿ . ನಿಮ್ಮ ಕುಟುಂಬದ ಕಲ್ಯಾಣಕ್ಕಾಗಿ ಕೆಲಸ ಮಾಡಿ. ನಿಮ್ಮ ಕಾರ್ಯಗಳು ದುರಾಶೆಯಿಂದಲ್ಲದೇ ಪ್ರೀತಿ ಮತ್ತು ಸಕಾರಾತ್ಮಕ ದೃಷ್ಟಿಯಿಂದ ನಡೆಯಬೇಕು. ಮನ್ಮಥನು ನಿಮ್ಮ ಜೀವನದಲ್ಲಿ ಪ್ರೀತಿಯ ಮಳೆ ಸುರಿಸುತ್ತ ನಿಮ್ಮೆಡೆಗೆ ನುಗ್ಗುತ್ತಿದ್ದಾನೆ.

### ಕನ್ಯಾ ರಾಶಿ

ಇಂದು ಶಾಂತವಾಗಿ ಒತ್ತಡ ಮುಕ್ತವಾಗಿರಿ. ಇಂದಿನವರೆಗೂ ಹಣವನ್ನು ಯೋಚಿಸದೆ ಖರ್ಚು ಮಾಡುತ್ತಿದ್ದ ಜನರು, ಅವರಿಗೆ ಇಂದು ಹಣದ ತುಂಬಾ ಅಗತ್ಯವಿರಬಹುದು ಮತ್ತು ಜೀವನದಲ್ಲಿ ಹಣದ ಏನು ಮೌಲ್ಯವಿದೆ ಎಂದು ನಿಮಗೆ ಅರ್ಥವಾಗಬಹುದು. ಕುಟುಂಬದ ಬಾಧ್ಯತೆಗಳನ್ನು ಮರೆಯಬೇಡಿ. ಈ ದಿನ ನಿಮ್ಮ ಪ್ರೀತಿ ಜೀವನದ ವಿಚಾರದಲ್ಲಿ ಅಸಾಧಾರಣವಾಗಿದೆ.

### ತುಲಾ ರಾಶಿ

ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ. ಉದ್ಯೋಗಕ್ಕೆ ಸಂಬಂಧಿಸಿರುವ ಜನರಿಗೆ ಇಂದು ಹಣದ ಬಹಳಷ್ಟು ಅಗತ್ಯವಿರುತ್ತದೆ ಆದರೆ ಹಿಂದಿನ ದಿನಗಳಲ್ಲಿ ಮಾಡಲಾಗಿರುವ ಅನಗತ್ಯ ಖರ್ಚುಗಳ ಕಾರಣದಿಂದಾಗಿ ಅವರ ಹತ್ತಿರ ಸಾಕಷ್ಟು ಹಣ ಇರುವುದಿಲ್ಲ. ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ಪ್ರೀತಿಪಾತ್ರರು ಇಂದು ನಿಮ್ಮ ಯಾವುದೇ ಮಾತಿನಿಂದ ಕೋಪಗೊಳ್ಳಬಹುದು.

### ವೃಶ್ಚಿಕ ರಾಶಿ

ಇಂದು ಹಿಂದಿನ ಕೆಟ್ಟ ನಿರ್ಧಾರಗಳು ಹತಾಶೆ ಮತ್ತು ಮಾನಸಿಕ ಪ್ರಕ್ಷುಬ್ಧತೆಗೆ ಕಾರಣವಾಗುತ್ತದೆ ನೀವು ಮುಂದೇನು ಮಾಡಬೇಕೆಂದು ನಿರ್ಧರಿಸಲಾಗದೇ ಸಲುಕಿಕೊಂಡಿರಬಹುದು. ಇತರರಿಂದ ಸಹಾಯ ಪಡೆಯಿರಿ ದಿನದ ಆರಂಭದಲ್ಲಿ ಇಂದು ನೀವು ಯಾವುದೇ ಆರ್ಥಿಕ ನಷ್ಟವನ್ನು ಹೊಂದಿರಬಹುದು.ಇದರಿಂದ ನಿಮ್ಮ ಪೂರ್ತಿ ದಿನ ಹದಗೆಡಬಹುದು. ಅತಿಥಿಗಳು ಸಂಗವನ್ನು ಆನಂದಿಸಲು ಒಂದು ಅದ್ಭುತ ದಿನ. ನಿಮ್ಮ ಸಂಬಂಧಿಗಳೊಂದಿಗೆ ಏನಾದರೂ ವಿಶೇಷವಾದದ್ದನ್ನು ಯೋಜಿಸಿ.

### ಧನು ರಾಶಿ

ಒತ್ತಡ ತೊಡೆದುಹಾಕಲು ನಿಮ್ಮ ಮಕ್ಕಳ ಜೊತೆ ನಿಮ್ಮ ಅಮೂಲ್ಯ ಸಮಯ ಕಳೆಯಿರಿ. ನೀವು ಮಗುವಿನ ಗುಣಪಡಿಸುವ ಶಕ್ತಿಯನ್ನು ಅನುಭವಿಸುತ್ತೀರಿ. ಅವರು ಭೂಮಿಯ ಮೇಲೆ ಅತ್ಯಂತ ಶಕ್ತಿಯುತ ಆಧ್ಯಾತ್ಮಿಕ ಮತ್ತು ಭಾವನಾತ್ಮಕ ವ್ಯಕ್ತಿತ್ವವಾಗಿರುತ್ತಾರೆ. ನೀವೇ ಮರುಚೈತನ್ಯ ಹೊಂದುತ್ತೀರಿ. ಸ್ವಲ್ಪ ಹೆಚ್ಚು ಹಣ ಮಾಡಲು ನಿಮ್ಮ ನವೀನ ಕಲ್ಪನೆಯನ್ನು ಬಳಸಿ.

### ಮಕರ ರಾಶಿ

ನಿಮ್ಮ ಹಠಾತ್ ಪ್ರವೃತ್ತಿ ನಿಮಗೆ ಗಂಭೀರವಾದ ಆರೋಗ್ಯದ ಸಮಸ್ಯೆಗಳನ್ನು ಉಂಟುಮಾಡಬಹುದು. ಅನಿರೀಕ್ಷಿತ ಬಿಲ್‌ಗಳು ಹಣಕಾಸಿನ ಹೊರೆಯನ್ನು ಹೆಚ್ಚಿಸುತ್ತದೆ. ಕೌಟುಂಬಿಕ ಒತ್ತಡ ನಿಮ್ಮ ಗಮನ ಬೇರೆಡೆಗೆ ಸೆಳೆಯದಿರಲಿ. ಕೆಟ್ಟ ಸಮಯಗಳು ನಮಗೆ ಇನ್ನೂ ಹೆಚ್ಚನ್ನು ನೀಡುತ್ತವೆ. ಸ್ವಾನುಕಂಪದಲ್ಲಿ ಸಮಯ ವ್ಯರ್ಥ ಮಾಡದೇ ಜೀವನದ ಪಾಠ ಕಲಿಯಲು ಪ್ರಯತ್ನಿಸಿ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ.

### ಕುಂಭ ರಾಶಿ

ಸ್ವಲ್ಪ ಮನರಂಜನೆಗಾಗಿ ನಿಮ್ಮ ಕಚೇರಿಯಿಂದ ಬೇಗನೇ ಹೊರಬರಲು ಪ್ರಯತ್ನಿಸಿ. ನಿಮಗೆ ತಿಳಿದ ಜನರ ಮೂಲಕ ಆದಾಯದ ಹೊಸ ಮೂಲಗಳು ಕಂಡುಬರುತ್ತವೆ.ನೀವು ಪಾರ್ಟಿ ನೀಡಲು ಯೋಜಿಸುತ್ತಿದ್ದಲ್ಲಿ ನಿಮ್ಮ ಎಲ್ಲಾ ಒಳ್ಳೆಯ ಸ್ನೇಹಿತರನ್ನು ಆಮಂತ್ರಿಸಿ ನಿಮ್ಮನ್ನು ಅಸ್ತುಷ್ಟಗೊಳಿಸುವ ಬಹಳಷ್ಟು ಜನರಿರುತ್ತಾರೆ. ನಿಮ್ಮ ಪ್ರೇಮದ ಸಂಗಾತಿ ನಿಮ್ಮನ್ನು ಹೊಗಳಬಹುದು. ಅವರನ್ನು ಏಕಾಂಗಿಯಾಗಿ ಈ ಪ್ರಪಂಚದಲ್ಲಿ ಬಿಡಬೇಡಿ.

### ಮೀನ ರಾಶಿ

ಆರೋಗ್ಯ ಸಂಬಂಧಿತ ಸಮಸ್ಯೆಗಳು ಅಸ್ವಸ್ಥತೆಯನ್ನು ಉಂಟುಮಾಡಬಹುದು. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ಕುಟುಂಬದ ಸದಸ್ಯರು ಅಥವಾ ಸಂಗಾತಿ ಕೆಲವು ಆತಂಕಗಳನ್ನು ಉಂಟುಮಾಡುತ್ತಾರೆ. ಏಕಪಕ್ಷೀಯ ವ್ಯಾಮೋಹ ಇಂದು ಹಾನಿಕಾರಕವೆಂದು ಸಾಬೀತಾಗುತ್ತದೆ. ಕೆಲಸಕ್ಕೆ ಸಂಬಂಧಿಸಿದಂತೆ ಈ ದಿನ ಒಳ್ಳೆಯದಿರುವಂತೆ ಕಾಣುತ್ತದೆ.

**ಪಠ್ಯಕ್ರಮ ಅನುಸರಣೆ, ಅಧಿಸೂಚನೆ ಅರ್ಥೈಸಿಕೊಳ್ಳುವಿಕೆ, ಹಿಂದಿನ ಪ್ರಶ್ನೆಪತ್ರಿಕೆ ಅಧ್ಯಯನ**

# ವಿದ್ಯಾರ್ಥಿ ಭವಿಷ್ಯದ ಯಶಸ್ಸಿಗೆ ಮೂರು ಸೂತ್ರಗಳು: ಸುನಿಲ್‌ಕುಮಾರ್

**ಚಿಕ್ಕಮಗಳೂರು:** ಸರಿಯಾದ ಪಠ್ಯಕ್ರಮವನ್ನು ಅನುಸರಿಸುವುದೂ ಸೇರಿದಂತೆ ಮೂರು ಸೂತ್ರಗಳನ್ನು ಅವಲಂಬಿಸುವ ಮೂಲಕ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಯಶಸ್ಸು ಪಡೆಯಬಹುದು ಎಂದು ಹೊಸದುರ್ಗ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಹೆಚ್.ಬಿ.ಸುನಿಲ್‌ಕುಮಾರ್ ಸಲಹೆ ನೀಡಿದರು.



ನಗರದ ಮೌಂಟೆನ್ ವ್ಯೂ ಪದವಿ ಪೂರ್ವ ಕಾಲೇಜಿನಲ್ಲಿ ಸೋಮವಾರ ನಡೆದ ಉಚಿತ ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ವೃತ್ತಿ ಮಾರ್ಗದರ್ಶನ ಕಾರ್ಯಾಗಾರವನ್ನು ಹೊಸದುರ್ಗ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಹೆಚ್.ಬಿ.ಸುನಿಲ್‌ಕುಮಾರ್ ಉದ್ಘಾಟಿಸಿದರು.

ನಗರದ ಮೌಂಟೆನ್ ವ್ಯೂ ಪದವಿ ಪೂರ್ವ ಕಾಲೇಜಿನ ಸಿದ್ದಾರ್ಥ ಸಭಾಂಗಣದಲ್ಲಿ ಸೋಮವಾರ ನಡೆದ ಉಚಿತ ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ವೃತ್ತಿ ಮಾರ್ಗದರ್ಶನ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಅವರು ಮಾತನಾಡಿದರು.

ಉ ದ್ ್ಯ ೋ ಗ ಾ ವ ್ ಕ ಾ ಶ ್ ಗ ್ ಳಿ ಗ ್ ಸಂಬಂಧಿಸಿದಂತೆ ವಿವರಣೆ ನೀಡಿದ ಅವರು, ಅಧಿಸೂಚನೆಯನ್ನು ಸಂಪೂರ್ಣವಾಗಿ ಅರ್ಥ ಮಾಡಿಕೊಳ್ಳುವುದು ಹಾಗೂ ಹಿಂದಿನ ವರ್ಷಗಳ ಪ್ರಶ್ನೆ ಪತ್ರಿಕೆಗಳನ್ನು ಅಧ್ಯಯನ ಮಾಡುವುದರ ಮೂಲಕ ಯೋಜಿತ ಯಶಸ್ಸಿಗೆ ಪ್ರಯತ್ನ ನಡೆಸಬೇಕೆಂದು ಕಿವಿಮಾತು ಹೇಳಿದರು.

ಎಸ್‌ಎಸ್‌ಎಲ್‌ಸಿಯಿಂದ ಕೇಂದ್ರ ಲೋಕಸೇವಾ ಆಯೋಗದವರೆಗೂ ಅಸಂಖ್ಯಾತ ಹುದ್ದೆಗಳವರೆಗೂ ಉದ್ಯೋಗಾವಕಾಶಗಳು ಲಭ್ಯವಿರುವುದನ್ನು ವಿವರಿಸಿದ ಅವರು, ಈ ಸಂಬಂಧ ವೃತ್ತಿ ಅವಕಾಶ ಪಡೆಯುವ ಬಗೆಗಿನ ಟಿಪ್ಸ್‌ಗಳನ್ನು ನೀಡಿದರಲ್ಲದೆ, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ನಡೆಸುವ ತಯಾರಿ ಬಗ್ಗೆ ತಿಳಿ ಹೇಳಿದರು.

ಹತ್ತನೇ ತರಗತಿ ಉತ್ತೀರ್ಣರಾದ ನಂತರ ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳಲ್ಲಿ (ಎಸ್‌ಎಸ್‌ಸಿ, ಎಂಟಿಎಸ್, ರೈಲ್ವೇಸ್) ಮತ್ತು ರಾಜ್ಯ ಸರ್ಕಾರಗಳಲ್ಲಿ (ಅಗ್ನಿಶಾಮಕ, ಪೊಲೀಸ್, ಕಂದಾಯ ಇಲಾಖೆಗಳು) ಉದ್ಯೋಗಾವಕಾಶಗಳು ಲಭ್ಯವಿವೆ. ಪಿಯುಸಿ ಹಾಗೂ ಪದವಿಯ ನಂತರವೂ ಉದ್ಯೋಗಾವಕಾಶಗಳು ವಿಪುಲ ಅವಕಾಶಗಳು ತೆರೆದುಕೊಳ್ಳುತ್ತವೆ ಎಂದು ಕೂಲಂಕಷವಾಗಿ ಹೇಳಿದರು.

ಸ್ಟಾಫ್ ಸೆಲೆಕ್ಷನ್ ಆಯೋಗದಲ್ಲಿ ವರ್ಷಕ್ಕೆ 73 ಸಾವಿರಕ್ಕೂ ಹೆಚ್ಚು ಹುದ್ದೆಗಳ ನೇಮಕಾತಿ ಪ್ರಕ್ರಿಯೆ ನಡೆಯುತ್ತವೆ. ಹಾಗೆಯೇ ರೈಲ್ವೆಯಲ್ಲಿ ಸುಮಾರು 50 ಸಾವಿರಕ್ಕೂ ಹೆಚ್ಚು ಹುದ್ದೆಗಳು ಸೃಷ್ಟಿಯಾಗುತ್ತವೆ. ಈ ಹುದ್ದೆಗಳಲ್ಲಿ ಅವಕಾಶ ಪಡೆಯಲು ಗ್ರಾಮೀಣ ಕನ್ನಡ ವಿಭಾಗದ ವಿದ್ಯಾರ್ಥಿಗಳು ಕೇಂದ್ರ ಸರ್ಕಾರದ ಹುದ್ದೆಗಳಲ್ಲಿ ಅವಕಾಶ ಪಡೆಯಲು ಅಗತ್ಯ ಸಿದ್ಧತೆ ನಡೆಸಬೇಕಿದ್ದು, ಅಲ್ಲಿ ಎದುರಾಗುವ ಸವಾಲುಗಳನ್ನು ನಿಭಾಯಿಸಬೇಕೆಂದು ಸಮಗ್ರವಾಗಿ ಮಾಹಿತಿ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಮೌಂಟೆನ್ ವ್ಯೂ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಹಬೀಬಾ ಎನ್.ಪಾಷಾ ಅವರು ಮಾತನಾಡಿ, ಕಲಾ ವಿಭಾಗದ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಮಾತ್ರವಲ್ಲದೆ, ಇತರ ಕ್ಷೇತ್ರಗಳಲ್ಲಿ ಇರುವ ಅವಕಾಶಗಳನ್ನು ಪಡೆಯಲು ಇಲ್ಲಿ ಪಡೆಯುವ ಮಾರ್ಗದರ್ಶನ ಅನುಸರಿಸಬೇಕು ಎಂದು ತಿಳಿಸಿದರು.

ಕಾಲೇಜಿನ ಪ್ರಾಂಶುಪಾಲರಾದ ತಸ್ನಿಮ್ ಫಾತೀಮ ಮಾತನಾಡಿ, ಸಾಮಾಜಿಕ ಜಾಲತಾಣಗಳು ಹಾಗೂ ಮೊಬೈಲ್‌ಗಳಿಗೆ ದಾಸರಾಗದೆ ಕಲಿಕೆಯ ಕಡೆಗೆ ಹೆಚ್ಚಿನ ಆಸಕ್ತಿ ನೀಡುವುದು ಅಗತ್ಯ. ಇದರಿಂದ ವಿದ್ಯಾರ್ಥಿಗಳು ತಮ್ಮ ವ್ಯಾಸಂಗದಲ್ಲಿ ಹೆಚ್ಚು ಸಾಧನೆ ಮಾಡಬಹುದು. ವೃತ್ತಿ ಮಾರ್ಗದರ್ಶನ ಪಡೆಯುವುದರಿಂದ ಸರ್ಕಾರಿ ನೌಕರಿಯಲ್ಲದೆ, ಇತರ ಕ್ಷೇತ್ರಗಳಲ್ಲೂ ಯಶಸ್ವಿಯಾಗಬಹುದು ಎಂದು ಹೇಳಿದರು.

ಪ್ರೌಢಶಾಲಾ ಮುಖ್ಯ ಶಿಕ್ಷಕರಾದ ವೀಣಾ, ಕಾಲೇಜಿನ ಉಪ ಪ್ರಾಂಶುಪಾಲರಾದ ಜೆಲ್ಲಿ ಕೆ.ಜಾರ್ಜ್, ಉಪನ್ಯಾಸಕರುಗಳಾದ ಎಚ್.ಪಿ.ರಘು, ಶಿವರಾಜ್, ದೈಹಿಕ ಶಿಕ್ಷಕರಾದ ಮುದಬೀರ್ ಶಹಬಾಜ್, ಉಪನ್ಯಾಸಕರಾದ ಪ್ರಕಾಶ್ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಆ.27, 28, ಮತ್ತು 31 ರಂದು ಗಣೇಶ ವಿಗ್ರಹಗಳ ವಿಸರ್ಜನೆಗೆ ಸ್ಥಳ ನಿಗದಿ

**ದಾವಣಗೆರೆ:** ನಗರದಾದ್ಯಂತ ಆ.27, 29, ಮತ್ತು 31 ರಂದು ಗಣೇಶ ವಿಗ್ರಹಗಳ ವಿಸರ್ಜನೆಗೆ ಪಾಲಿಕೆ ವತಿಯಿಂದ ತಾತ್ಕಾಲಿಕ ವಿಸರ್ಜನಾ ವ್ಯವಸ್ಥೆಗೆ ಸ್ಥಳ ನಿಗದಿಪಡಿಸಲಾಗಿದೆ. ಸಾರ್ವಜನಿಕರು, ಗಣೇಶ ಮೂರ್ತಿ ಪ್ರತಿಷ್ಠಾಪಿಸಿದ ಭಕ್ತರು ಪಾಲಿಕೆ ನಿಗದಿಪಡಿಸಿದ ಸ್ಥಳಗಳಲ್ಲಿಯೇ ವಿಸರ್ಜಿಸಲು ಸೂಚಿಸಿದೆ.

ನಗರದಲ್ಲಿ ನಿಗದಿಪಡಿಸಲಾದ ಸ್ಥಳಗಳು: ಹಗೆದಿಬ್ಬ ವೃತ್ತ ಗಾಂಧಿನಗರ, ರಾಜಕುಮಾರ ಶಾಲೆ ಹತ್ತಿರ ಕುರುಬರ ಕೇರಿ, ಹೊಂಡದ ಸರ್ಕಲ್, ಮೈಲಾರ ಲಿಂಗೇಶ್ವರ ದೇವಸ್ಥಾನದ ಹತ್ತಿರ ಕೊಂಡಜ್ಜಿ ರಸ್ತೆ, ಕೋರ್ಟ್ ಮುಂಭಾಗ ದೇವರಾಜ ಅರಸು ಬಡಾವಣೆ,

ಶಿವಾಜಿ ವೃತ್ತ ದುರ್ಗಾಂಭಿಕ ದೇವಸ್ಥಾನದ ಹತ್ತಿರ ಕುರುಬರ ಕೇರಿ, ವೆಂಕಟೇಶ್ವರ ವೃತ್ತ ಬೇತೂರು ರಸ್ತೆ, ವಿಠಲ ಮಂದಿರ ಹತ್ತಿರ ಮಹಾರಾಜ ಪೇಟೆ, ಹಾಸಬಾವಿ ವೃತ್ತದ ಚೌಕಿಪೇಟೆ, ವಿನೋಬ ನಗರ 3ನೇ ಮುಖ್ಯರಸ್ತೆ ಪಾರ್ಕ್ ಹತ್ತಿರ, ಪಿ.ಜಿ.ಬಡಾವಣೆಯ ರಾಮ್ ಅಂಡ್ ಕೋ ವೃತ್ತ, ಕಾಯಿಪೇಟೆಯ ಬಸವೇಶ್ವರ ವೃತ್ತ, ಬಂಬೂ ಬಜಾರ್ ಗಣೇಶ್ ಹೋಟೆಲ್ ಹತ್ತಿರ, ಎಸ್.ಎಸ್.ಲೇಔಟ್ ಬನ್ನಿಮರದ ಹತ್ತಿರ, ಎಂ.ಸಿಸಿ ಎ ಬ್ಲಾಕ್ ಬಕ್ಕೇಶ್ವರ ಸ್ಕೂಲ್ ಮುಂಭಾಗ, ಕೆ.ಬಿ.ಬಡಾವಣೆಯ ಜಯದೇವ ವೃತ್ತ, ಡಿ.ಸಿ.ಎಂ.ಲೇಔಟ್ ನ ಡಿಸಿಎಂ ಲೇಔಟ್ ಸರ್ಕಲ್, ಆವರಗೆರೆ ಸರ್ಕಾರಿ ಶಾಲೆ ಹತ್ತಿರ, ಸರಸ್ವತಿ ಬಡಾವಣೆಯ ಪಂಚಮುಖಿ ಆಂಜನೇಯ ದೇವಸ್ಥಾನ ಹತ್ತಿರ, ಶಿವಕುಮಾರ ಸ್ವಾಮಿ ಬಡಾವಣೆಯ ಸಂಜೀವಿನಿ ಆಂಜನೇಯ ದೇವಸ್ಥಾನ, ನಿಟುವಳ್ಳಿ ದುರ್ಗಾಂಬಿಕ ದೇವಸ್ಥಾನದ ಹತ್ತಿರ ಮತ್ತು ಹೆಚ್.ಕೆ.ಆರ್ ಸರ್ಕಲ್, ಕೆಟಿಜೆ ನಗರ ಡಾಂಗೆ ಪಾರ್ಕ್ ಹತ್ತಿರ, ಕುವೆಂಪು ನಗರದಲ್ಲಿನ ಬಾಪೂಜಿ ಶಾಲೆ ಹತ್ತಿರ,

ಎಂ.ಸಿಸಿ ಎ ಬ್ಲಾಕ್ ಗುಂಡಿ ಮಹಾದೇವಪ್ಪ ಸರ್ಕಲ್, ವಿದ್ಯಾನಗರದ ಈಶ್ವರ ಪಾರ್ವತಿ ದೇಚಸ್ಥಾನದ ಹತ್ತಿರ, ಆಂಜನೇಯ ಬಡಾವಣೆಯ ಆಂಜನೇಯ ದೇವಸ್ಥಾನದ ಹತ್ತಿರ ಮತ್ತು ಬಿ.ಐ.ಇ.ಟಿ ರಸ್ತೆ ಬಾಪೂಜಿ ಬ್ಯಾಂಕ್ ಹತ್ತಿರ, ಶ್ಯಾಮನೂರು ಬಡಾವಣೆ ಶ್ರೀರಾಮ ಮಂದಿರದ ಹತ್ತಿರ ಹಾಗೂ ಕೊಂಡಜ್ಜಿ ರಸ್ತೆ ಆರ್‌ಟಿಓ ಆಫೀಸ್ ಹತ್ತಿರ ಟ್ರ್ಯಾಕ್ಟರ್ ನಿಲುಗಡೆ ಮಾಡಿದ ಸ್ಥಳ ನಿಗದಿಪಡಿಸಲಾಗಿದೆ.

# ರೈತರಿಗೆ ಅಗತ್ಯ ಬಿತ್ತನೆ ಬೀಜ, ರಸಗೊಬ್ಬರ ಒದಗಿಸಲು ಸೂಚನೆ

**ಹಾಸನ :** ಕೃಷಿ ಚಟುವಟಿಕೆಗೆ ತೊಂದರೆ ಆಗದಂತೆ ರೈತರಿಗೆ ಅಗತ್ಯ ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕ ಔಷಧಿಗಳನ್ನು ಒದಗಿಸಲು ಕ್ರಮವಹಿಸುವಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿ,ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಅಲ್ಪಸಂಖ್ಯಾತರ ಇಲಾಖೆ, ಹಾಸನ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮತ್ತು ಜಿಲ್ಲಾ ಪಂಚಾಯಿತಿ ಆಡಳಿತಾಧಿಕಾರಿ ಗಳಾದ ನವೀನ್ ರಾಜ್ ಸಿಂಗ್ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.



ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿಂದು ಸಾಮಾನ್ಯ ಸಭೆ ನಡೆಸಿ ಮಾತನಾಡಿದ ಅವರು ಬೆಳೆ ಸಂರಕ್ಷಣೆಗೆ ಔಷಧಿ ಸಿಂಪರಣೆ ಕುರಿತು ರೈತರಿಗೆ ಮಾಹಿತಿ ನೀಡುವ ನಿಟ್ಟಿನಲ್ಲಿ ಪ್ರಾತ್ಯಕ್ಷಿಕೆ ಏರ್ಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕುಡಿಯುವ ನೀರಿಗೆ ಯಾವುದೇ ಗ್ರಾಮಗಳಲ್ಲಿ ತೊಂದರೆ ಆಗದಂತೆ ನಿಗಾವಹಿಸಲು ಸೂಚನೆ ನೀಡಿದರು.

ಭೂಕುಸಿತ ಸಂಭವಿಸಿ ರಸ್ತೆ ತಡೆಯಾಗಿ ಸಂಚಾರಕ್ಕೆ ತೊಂದರೆ ಆಗದಂತೆ ಮುನ್ನೆಚ್ಚರಿಕೆ ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಾನುವಾರುಗಳು ಆಕಸ್ಮಿಕವಾಗಿ ಸಾವನ್ನಪ್ಪಿದರೆ ಪರಿಹಾರ ಪಡೆಯುವ ನಿಟ್ಟಿನಲ್ಲಿ ವಿಮೆ ಮಾಡಿಸುವಂತೆ ಜನರಲ್ಲಿ ಜಾಗೃತಿ ಮೂಡಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಲತಾ ಕುಮಾರಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪೂರ್ಣಿಮಾ,ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಬ್ ಕುಮಾರ್ ಉಪಸ್ಥಿತರಿದ್ದರು.

# ಧರ್ಮ ರಕ್ಷಣೆಗಾಗಿ ಧರ್ಮಸ್ಥಳ ಜಾಥ




**ಚಿಕ್ಕಮಗಳೂರು:** ಧರ್ಮರಕ್ಷಣೆಗಾಗಿ ಧರ್ಮಸ್ಥಳ ಜಾತ ಕಾರ್ಯಕ್ರಮದ ಹಿನ್ನಲೆಯಲ್ಲಿ ಖಾಂಡ್ಯ ಹೋಬಳಿಯ ನೂರಾರು ಬಿಜೆಪಿ ಮುಖಂಡರು ಜಿಪಂ ಮಾಜಿ ಸದಸ್ಯೆ ಕವಿತಾ ಲಿಂಗರಾಜ್ ಅವರ ನೇತೃತ್ವದಲ್ಲಿ ಭಾನುವಾರ ಧರ್ಮಸ್ಥಳಕ್ಕೆ ತೆರಳಿ ಬೃಹತ್ ಜಾಥ ನಡೆಸಿದರು.

ಖಾಂಡ್ಯದಿಂದ ಧರ್ಮಸ್ಥಳಕ್ಕೆ ಹೊರಡುವ ಸಂದರ್ಭದಲ್ಲಿ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಕವಿತಾ ಲಿಂಗರಾಜ್, ಎಷ್ಟೋ ಜನ ಸಮೀರ್ ಹಾಗೂ ಚಿನ್ನಯ್ಯನವರಂಥವರು ಬಂದು ಹೋಗಿದ್ದಾರೆ. ಆದರೆ ಧರ್ಮಸ್ಥಳದ ಪಾವಿತ್ರ್ಯತೆಗೆ ಧಕ್ಕೆ ತರಲು ಸಾಧ್ಯವಾಗಿಲ್ಲ. ಕ್ಷೇತ್ರದ ಪಾವಿತ್ರ್ಯ ಹಾಳು ಮಾಡುವ ಉದ್ದೇಶದಿಂದಲೇ ಕೆಲವರು ಷಡ್ಯಂತ್ರ ನಡೆಸಿದ್ದಾರೆ. ಇಂಥ ಸಂದರ್ಭದಲ್ಲಿ ಭಕ್ತರು ಶ್ರೀಕ್ಷೇತ್ರದ ಜೊತೆಗಿದ್ದೇವೆ ಎನ್ನುವುದನ್ನು ತೋರಿಸುವ ಉದ್ದೇಶದಿಂದ ಧರ್ಮ ಜಾಥ ನಡೆಸಲಾಗುತ್ತಿದೆ ಎಂದು ಹೇಳಿದರು.ನಿರಂತರವಾಗಿ ಹಿಂದು ಧಾರ್ಮಿಕ ಕ್ಷೇತ್ರಗಳನ್ನು ಕೆಲವರು ಟಾರ್ಗೆಟ್ ಮಾಡುವ ಮೂಲಕ ಹಿಂದುಗಳ ಧಾರ್ಮಿಕ ಭಾವನೆಗೆ ಧಕ್ಕೆ ತರುವ ಕೆಲಸ ಮಾಡುತ್ತಿದ್ದಾರೆ. ಇದನ್ನು ಸಹಿಸಲು ಸಾಧ್ಯವಿಲ್ಲ. ಕೂಡಲೇ ಹಿಂದುಗಳ ಧಾರ್ಮಿಕ ಕ್ಷೇತ್ರಗಳ ಬಗ್ಗೆ ಷಡ್ಯಂತ್ರ ನಡೆಸುವವರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.ಬಳಿಕ ಧರ್ಮಸ್ಥಳಕ್ಕೆ 70 ವಾಹನಗಳಲ್ಲಿ ತೆರಳಿದ ಕಾರ್ಯಕರ್ತರು ಅಲ್ಲಿ ಧರ್ಮ ಜಾಥ ನಡೆಸಿ ಧರ್ಮಸ್ಥಳದ ಧರ್ಮದರ್ಶಿ ವೀರೇಂದ್ರ ಹೆಗ್ಗಡೆ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿ ಆಶೀರ್ವಾದ ಪಡೆದು ಖಾಂಡ್ಯಕ್ಕೆ ಹಿಂತಿರುಗಿದರು.

**ಎನ್‌ಟಿಸಿ ಯಶಸ್ಸು ಸಂಭ್ರಮ, SME BRE ಸಾಲ ಉತ್ಪನ್ನ ಬಿಡುಗಡೆ:**

# ಬಿ.ಡಿ.ಸಿ.ಸಿ.ಐ ಸಂಸ್ಥೆಯ ಸಭಾಂಗಣದಲ್ಲಿ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು

**ಬಳ್ಳಾರಿ:** ಬಳ್ಳಾರಿ ಜಿಲ್ಲಾ ವಾಣಿಜ್ಯ ಹಾಗೂ ಕೈಗಾರಿಕಾ ಸಂಸ್ಥೆಯ ಸಭಾಂಗಣದಲ್ಲಿ ಆಗಸ್ಟ್ 25, ಸೋಮವಾರ ಬೆಳಿಗ್ಗೆ 10.30ಕ್ಕೆ "ಬಳ್ಳಾರಿ ಎನ್‌ಟಿಸಿ ಯಶಸ್ಸು ಸಂಭ್ರಮ ಹಾಗೂ ಖಒಇ ಃಖಇ ಸಾಲ ಉತ್ಪನ್ನದ ನೇರ ಪ್ರದರ್ಶನ" ಕಾರ್ಯಕ್ರಮವು ಬಿ.ಡಿ.ಸಿ.ಸಿ.ಐ ಸಂಸ್ಥೆಯ ಸಭಾಂಗಣದಲ್ಲಿ ಅದ್ದೂರಿಯಾಗಿ ನಡೆಯಿತು.




ಈ ಕಾರ್ಯಕ್ರಮವನ್ನು ಬಳ್ಳಾರಿ ಜಿಲ್ಲಾ ವಾಣಿಜ್ಯ ಹಾಗೂ ಕೈಗಾರಿಕಾ ಸಂಸ್ಥೆ, ಇನ್ಸ್ಟಿಟ್ಯೂಟ್ ಆಫ್ ಚಾರ್ಟರ್ಡ್ ಟ್ಯಾಕ್ಸ್ ಕ್ಟಿಷನರ್ಸ್ ಇಂಡಿಯಾ, ಬಳ್ಳಾರಿ ತೆರಿಗೆ ಸಲಹೆಗಾರರ ಸಂಘ ಹಾಗೂ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ (ಖಃಋ) ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಲಾಗಿತ್ತು.

ಕಾರ್ಯಕ್ರಮದ ಉದ್ಘಾಟನೆಯನ್ನು ಸಂಸ್ಥೆಯ ಅಧ್ಯಕ್ಷ ಶ್ರೀ ಯಶವಂತ ರಾಜ್ ನಾಗಿರೆಡ್ಡಿ, ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತೆ, ಶ್ರೀಮತಿ ಸೋನಲ್ ಜಿ. ನಾಯಕ್, ಉಪ ಆಯುಕ್ತರು ಶ್ರೀ ಇನಾಮ್ದಾರ್ ಎ., ಅವರ ಸಾನ್ನಿಧ್ಯದಲ್ಲಿ ನೆರವೇರಿಸಲಾಯಿತು.

ಸಮಾರಂಭದಲ್ಲಿ ಮಾತನಾಡಿದ ಸಂಸ್ಥೆಯ ಅಧ್ಯಕ್ಷ ಶ್ರೀ ಯಶವಂತ ರಾಜ್ ನಾಗಿರೆಡ್ಡಿ ಅವರು ಸಣ್ಣ ಮತ್ತು ಮಧ್ಯಮ ಉದ್ಯಮಗಳ (ಖಒಇ) ಬಿಸಿನೆಸ್ ರೂಲ್ ಎಂಜಿನ್ ಲೋನ್ ಉತ್ಪನ್ನ ಕಾರ್ಯಕ್ರಮದ ಮುಖ್ಯ ಉದ್ದೇಶವು ಹೊಸ ಉದ್ಯಮ ಆರಂಭಿಸಲು ಬಯಸುವ ಉದ್ಯಮಿಗಳಿಗೆ ಅಗತ್ಯವಾದ ಆರ್ಥಿಕ ನೆರವು ಹಾಗೂ ವಿವಿಧ ರೀತಿಯ ಉತ್ಪನ್ನಗಳನ್ನು ಒದಗಿಸುವುದಾಗಿದೆ. ಇಂತಹ ಯೋಜನೆಗಳನ್ನು ಜಾರಿಗೊಳಿಸುವುದರಿಂದ ನೂತನ ಉದ್ಯಮಿಗಳಿಗೆ ಧೈರ್ಯ, ಆತ್ಮವಿಶ್ವಾಸ ಮತ್ತು ನವಚೈತನ್ಯ ದೊರೆತು, ತಮ್ಮ ಉದ್ಯಮವನ್ನು ಯಶಸ್ವಿಯಾಗಿ ಸ್ಥಾಪಿಸಿ ವಿಸ್ತರಿಸಲು ಹೆಚ್ಚಿನ ಅವಕಾಶಗಳು ಲಭಿಸುತ್ತವೆ. ಅಂತೆಯೇ, ಖಒಇ ಬಿಸಿನೆಸ್ ರೂಲ್ ಎಂಜಿನ್ ಲೋನ್ ಉತ್ಪನ್ನ ಕಾರ್ಯಕ್ರಮವು ನವ ಉದ್ಯಮಿಗಳಿಗೆ ದೃಢವಾದ ಬೆಂಬಲ ವ್ಯವಸ್ಥೆಯಾಗಿ, ಅವರ ಕನಸುಗಳನ್ನು ನೈಜಗೊಳಿಸುವ ದಾರಿಯಲ್ಲೊಂದು ಮಹತ್ವದ ಹೆಜ್ಜೆಯಾಗುತ್ತದೆ ಎಂದು ತಿಳಿಸಿದರು.

ಬಿಡಿಸಿಸಿಐ ಗೌರವ ಕಾರ್ಯದರ್ಶಿ ಶ್ರೀ ಕೆ.ಸಿ. ಸುರೇಶ್ ಬಾಬು ಅವರು ಮಾತನಾಡಿ, "ನಮ್ಮ ಸಂಸ್ಥೆಯಲ್ಲಿ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದು ನಮ್ಮ ಭಾಗ್ಯ. ಇದರಿಂದ ಎಲ್ಲಾ ಟ್ರೇಡ್ ಮತ್ತು ಇಂಡಸ್ಟ್ರಿ ಕ್ಷೇತ್ರದವರಿಗೆ ಉಪಯುಕ್ತವಾಗುತ್ತದೆ" ಎಂದು ಹೇಳಿದರು.

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತೆ, ಶ್ರೀಮತಿ ಸೋನಲ್ ಜಿ ನಾಯಕ್ ರವರು ಮಾತನಾಡುತ್ತಾ. ಬಳ್ಳಾರಿ ಟ್ಯಾಕ್ಸ್ ಪ್ರಾಕ್ಟಿಸ್ನರ್‌ಗಳ ಸಂಘಟನೆಯ ಕಾರ್ಯವೈಖರಿಯನ್ನು ಶ್ಲಾಘಿಸಿದ ವಾಣಿಜ್ಯ ತೆರಿಗೆ ಇಲಾಖೆಯ ಜಾಯಿಂಟ್ ಕಮಿಷನರ್, ಶ್ರೀಮತಿ ಸೋನಾಲ ಜಿ ನಾಯಕ್,

"ಸಂಘಟನೆಯಲ್ಲಿ ಬಲವಿದೆ" ಎಂಬುದನ್ನು ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಟ್ಯಾಕ್ಸ್ ಪ್ರಾಕ್ಟಿಸ್ನರ್‌ಗಳು ತೋರಿಸಿದ್ದಾರೆ. ಯಾವುದೇ ಸಮಸ್ಯೆ ಇದ್ದರೂ ನಮ್ಮನ್ನು ಭೇಟಿ ಮಾಡಿದರೆ, ಖಂಡಿತವಾಗಿ ಸ್ಪಂದಿಸುತ್ತೇವೆ" ಎಂದು ತಿಳಿಸಿದರು.

ಇಂತಹ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಒಳ್ಳೆಯ ವೇದಿಕೆ ಆಗಿರುತ್ತದೆ" ಎಂದು ಹೇಳಿದರು.

ಐ.ಸಿ.ಟಿ.ಪಿ.ಐ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಶ್ರೀಧರ ಪಾರ್ಥಸಾರಥಿ ಅವರು ಸಂಸ್ಥೆಯು ನಡೆದು ಬಂದ ದಾರಿ ಕಾರ್ಯಕ್ರಮದಲ್ಲಿ ಮಾತನಾಡಿದರು. ಈ ಸಂದರ್ಭದಲ್ಲಿ ಅವರು, ಉದ್ಯಮಿಗಳಿಗೆ ಸಾಲ ಸೌಲಭ್ಯಗಳನ್ನು ಸುಲಭವಾಗಿ ಪಡೆಯಲು ಸಂಸ್ಥೆ ನೆರವಾಗಲಿದೆ ಎಂದು ತಿಳಿಸಿದರು. ಅವರು ಮುಂದುವರಿದು, ಉದ್ಯಮ ನಡೆಸಲು ಅಗತ್ಯವಾದ ನೂತನ ತಂತ್ರಜ್ಞಾನ, ಮಾರುಕಟ್ಟೆ ಸಂಪರ್ಕ ಮತ್ತು ಆರ್ಥಿಕ ಸಂಪನ್ಮೂಲಗಳನ್ನು ಪಡೆಯುವಲ್ಲಿ ಸಂಸ್ಥೆ ಮಾರ್ಗದರ್ಶನ ನೀಡುವುದಾಗಿ ಹೇಳಿದರು.

ಇದರಿಂದ ಹೊಸ ಉದ್ಯಮಿಗಳು ಆರ್ಥಿಕ ಅಡೆತಡೆಗಳನ್ನು ತೊಲೆದು, ತಮ್ಮ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಲು ಸಾಧ್ಯವಾಗುತ್ತದೆ. ಜೊತೆಗೆ ಮಾರುಕಟ್ಟೆಯಲ್ಲಿ ಸ್ಪರ್ಧಾತ್ಮಕ ಸ್ಥಾನವನ್ನು ಪಡೆಯುವಲ್ಲಿ ಸಹಾಯವಾಗುತ್ತದೆ ಎಂದು ಶ್ರೀ ಪಾರ್ಥಸಾರಥಿ ವಿಶ್ವಾಸ ವ್ಯಕ್ತಪಡಿಸಿದರು.

ಶ್ರೀ ಶಿವಕುಮಾರ್ ಅವರು ಅತಿಥಿಗಳಿಗೆ ಹೃತ್ಪೂರ್ವಕ ಸ್ವಾಗತ ಕೋರಿದರು.

ಬಳ್ಳಾರಿ ಜಿಲ್ಲಾ ತೆರಿಗೆ ಸಲಹೆಗಾರರ ಸಂಘದ ಅಧ್ಯಕ್ಷರಾದ ಶ್ರೀ ವೆಂಕಟೇಶ ಕುಲಕರ್ಣಿ ಅವರು ವಂದನಾರ್ಪಣೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಶಿವಕುಮಾರ್ ಜಿ.ಎಂ, ಶ್ರೀ ಡಾ. ದಿಲೀಪ್ ಕುಮಾರ್ ಎಚ್.ಜಿ, ಶ್ರೀ ಡಾ. ಕೆ.ಎಸ್. ಮಹಾಂತೇಶ್ ವಿಶೇಷ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಜೊತೆಗೆ ಹಿರಿಯ ಉಪಾಧ್ಯಕ್ಷ ಶ್ರೀ ಅವ್ವಾರು ಮಂಜುನಾಥ, ಶ್ರೀ ಸೊಂತಗಿರಿಧರ್, ಗೌರವ ಕಾರ್ಯದರ್ಶಿ ಶ್ರೀ ಕೆ.ಸಿ. ಸುರೇಶ್ ಬಾಬು, ಜಂಟಿ ಕಾರ್ಯದರ್ಶಿಗಳು ಶ್ರೀ ಡಾ. ಮರ್ಚೇಡ್ ಮಲ್ಲಿಕಾರ್ಜುನಗೌಡ ಹಾಗೂ ಶ್ರೀ ವಿ. ರಾಮಚಂದ್ರ, ಸೇರಿದಂತೆ ಕಾರ್ಯಕಾರಿ ಸಮಿತಿ ಸದಸ್ಯರು, ವಿಶೇಷ ಆಹ್ವಾನಿತರು, ವಿಶೇಷ ಸಮನ್ವಯ ಸಮಿತಿ ಸದಸ್ಯರು ಹಾಗೂ ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

## ಶಿಕ್ಷಕರ ವರ್ಗಾವಣೆ ಕೌನ್ಸೆಲಿಂಗ್

**ಚಿಕ್ಕಮಗಳೂರು:** 2024–25ನೇ ಸಾಲಿನ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರು ತತ್ಸಮಾನ ವೃಂದದ ಅಧಿಕಾರಿಗಳ ಹೆಚ್ಚುವರಿ,

ಕೋರಿಕೆ, ಪರಸ್ಪರ ವರ್ಗಾವಣೆಗೆ ಸಂಬಂಧಿಸಿದಂತೆ ಆಗಸ್ಟ್ 29, 30, ಸೆಪ್ಟಂಬರ್ 1, 9, 10, 11, 15 ಮತ್ತು 17 ರಂದು ಕೌನ್ಸೆಲಿಂಗ್ ನಡೆಯಲಿದ್ದು, ಅರ್ಹ ಶಿಕ್ಷಕರು ಕೌನ್ಸೆಲಿಂಗ್‌ಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳುವಂತೆ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು (ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ಮೇಲ್ಕಂಡ ಕಚೇರಿಯನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

## ಅರ್ಜಿ ಆಹ್ವಾನ

**ಹಾಸನ :** ಹಿಂದೂಸ್ಥಾನ್ ಏರೋನ್ಯಾಟಿಕ್ಸ್(ಲಿ) ಎಲ್‌ಸಿಎ ತೇಜಸ್ ಡಿವಿಷನ್ ಬೆಂಗಳೂರು–37 ರವರಿಂದ ಖಾಲಿ ಇರುವ ಟೆಕ್ನಿಷಿಯನ್ ಹುದ್ದೆಗಳಿಗೆ ಅರ್ಜಿಯನ್ನು ಆಹ್ವಾನಿಸಲಾಗಿದ್ದು, ಅಸಕ್ತ ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಬಹುದಾಗಿದೆ.

## ಬಾಲ ಗಣಪ



ಚೌತಿಯ ಗಣಪ ಬಂದನಪ್ಪ
ಬಾಲ ಗೋಪಾಲ ಈ ಗಣಪ

ನಿನ್ನಯ ಆರಾಧನೆ ನಮಗೆ ಪ್ರಿಯವಪ್ಪ
ಈ ಭೂಮಿಗೆ ಅಗ್ರಪೂಜಿತ ವಂದಿಪೆನಪ್ಪ

ಜ್ಞಾನ ಚತುರತೆಗೆ ಮೇಲಾದೆ
ವಿದ್ಯಾ ಬುದ್ದಿಗೆ ಮೊದಲಾದೆ

ಭಕ್ತರ ಪ್ರೀತಿಯ ಗಣಪತಿ ನೀನು
ಸನ್ಮಾರ್ಗ ಸೌಹಾರ್ದತೆ ತೋರಿಸಿದೆ ಏನು
ಜೌತಿ–ವಿಜಾತಿಯ ಅಳಿಸಿದೆ ಬಂದು
ಈ ನಾಡಿನ ಜನತೆಗೆ ಭಕ್ತಿಯ ತಂದು

ಬಗೆ ಬಗೆ ಅಡುಗೆಯುನಿನಗಿಂದು
ಸಡಗರ ಸಂಭ್ರಮ ನಮಗಿಂದು

ನಿನ್ನಯ ಹಬ್ಬವು ಬಂದಿಹುದು
ಬೇಡಿದ ವರಗಳ ಕೊಡು ನೀ ಬಂದು

ಎಲ್ಲರ ಮನೆ–ಮನೆ ಬೆಳಕಾದೆ
ಮಳೆ ಬೆಳೆಗಳ ಸಮೃದ್ಧೀಯ ಕಣ್ಣಾದೆ
ಸುಖಃ ಶಾಂತಿಯ ನೆಮ್ಮದಿ ನೀ ತಂದೆ

ಡಿ.ಶಿವಣ್ಣ ನಿವೃತ್ತ
ಶಿಕ್ಷಕರು. ದಾವಣಗೆರೆ

# ಜೊಳ್ಳುಗಳನ್ನು ತೂರಿ ಗಟ್ಟಿಕಾಳನ್ನು ಸಮಾಜಕ್ಕೆ ಕೊಟ್ಟವರು ಬಸವಣ್ಣ

## ಗೋವಾದಲ್ಲಿನ ಲಿಂಗಾಯತ ಸ್ವತಂತ್ರ ಧರ್ಮ ವಿಚಾರ ಸಂಕಿರಣದಲ್ಲಿ ಸಾಣೇಹಳ್ಳಿಯ ಪಂಡಿತಾರಾಧ್ಯ ಶ್ರೀಗಳು

ಸಾಣೇಹಳ್ಳಿ: ಧರ್ಮಗಳಲ್ಲಿನ ಜೊಳ್ಳು ಕಾಳುಗಳನ್ನು ತೂರಿ, ಗಟ್ಟಿಕಾಳುಗಳನ್ನು ಸಮಾಜಕ್ಕೆ ಕೊಟ್ಟ ಬಸವಣ್ಣ ಕರ್ಮ ಸಿದ್ಧಾಂತವನ್ನು ದೂರ ತಳ್ಳಿ ಕಾಯಕ ಸಿದ್ಧಾಂತವನ್ನು ಜಾರಿಗೆ ತಂದರು. ಪ್ರತಿಯೊಬ್ಬ ವ್ಯಕ್ತಿ ದುಡಿದ ಆದಾಯದಿಂದ ಸಮಾಜಕ್ಕೆ ಸ್ವಲ್ಪವಾದರೂ ದಾಸೋಹ ಮಾಡಬೇಕು ಎಂದು ಸಾಣೇಹಳ್ಳಿಯ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಗೋವಾದ ನೀಲಮ್ಸ್ ಗ್ರ್ಯಾಂಡ್ ಕ್ಯಾಲಂಗುಟೆ ಸಂಭಾಂಗಣದಲ್ಲಿ ರಾಷ್ಟ್ರೀಯ ಬಸವ ಪ್ರತಿಷ್ಠಾನದ ಆಶ್ರಯದಲ್ಲಿ ಕಳೆದ ವಾರ ನಡೆದ ಲಿಂಗಾಯತ ಸ್ವತಂತ್ರ ಧರ್ಮ ಅರಿವು ಸಂಘಟನೆ ಅನುಷ್ಠಾನ ಕುರಿತ ವಿಚಾರ ಸಂಕಿರಣದಲ್ಲಿ ಶ್ರೀಗಳು ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಬಸವಣ್ಣ ಏಕದೇವ ನಿಷ್ಠೆಯನ್ನು ಬೆಳೆಸಿಕೊಂಡು ಇಷ್ಟಲಿಂಗವನ್ನು ಅಂಗೈಯಲ್ಲಿ ಕೊಟ್ಟರು. ಲಿಂಗ ಮುಟ್ಟಿದವರು ಪೂರ್ವ ಕುಲವನ್ನು ಕಳೆದು ಪುನರ್ಜನ್ಮ ಪಡೆದರು. ಲಿಂಗಾಯತ ಧರ್ಮದಲ್ಲಿ ನರ ಜನ್ಮ ಮತ್ತು ಹರ ಜನ್ಮವಿದೆ. ಇಷ್ಟಲಿಂಗ ದೀಕ್ಷೆಯ ಮೂಲಕ ನರ ಜನ್ಮವನ್ನು ಕಳೆದು ಹರ ಜನ್ಮ ಪಡೆಯಬೇಕು. ಬಸವಣ್ಣ ಲೋಕಕ್ಕೆ ಬೇಕಾದ ವಿಚಾರಗಳನ್ನು ವೈಜ್ಞಾನಿಕವಾಗಿ, ವೈಚಾರಿಕವಾಗಿ ಕೊಟ್ಟರು. ಬಾಹ್ಯ ಗುರುವಿನ ಅವಶ್ಯಕತೆ ಇಲ್ಲದೆ ನಿನ್ನರಿವೇ ಗುರುವಾಗಬೇಕು




ಎಂದರು.

ಸರ್ಕಾರ ಲಿಂಗಾಯತ ಸ್ವತಂತ್ರ ಧರ್ಮದ ಮಾನ್ಯತೆಗೆ ಒಪ್ಪಿಕೊಳ್ಳಲಿ ಅಥವಾ ಬಿಡಲಿ, ಬಸವಣ್ಣನವರ ಸಮಕಾಲೀನರು ಅವರನ್ನು ಗುರುವಾಗಿ, ಲಿಂಗಾಯತ ಧರ್ಮದ ಸ್ಥಾಪಕರಾಗಿ, ಸ್ವತಂತ್ರ ಧರ್ಮವಾಗಿ ಒಪ್ಪಿಕೊಂಡಿದ್ದರು. ದೇಶದಾದ್ಯಂತ ಲಿಂಗಾಯತ ಧರ್ಮದ ಬಗ್ಗೆ ಚಿಂತನ–ಮಂಥನ ನಡೆಯುತ್ತಿದೆ. ರಾಷ್ಟ್ರೀಯ ಬಸವ ಪ್ರತಿಷ್ಠಾನ ದೇಶ–ವಿದೇಶಗಳಲ್ಲಿ ಶರಣರ ವೈಚಾರಿಕ ವಿಚಾರಗಳ ಬೀಜಗಳನ್ನು ಬಿತ್ತುತ್ತಿದೆ. ಬಸವ ತತ್ವ ನಮ್ಮೆಲ್ಲರ ಬದುಕಿಗೆ ಬೆಳಕಾಗಲಿ ಎಂದರು.

ಬೆಟ್ಟಹಳ್ಳಿ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಎಲ್ಲ ವಿರಕ್ತ ಮಠಾಧೀಶರು ಬಸವಣ್ಣನವರನ್ನು ಗುರುವಾಗಿ ಒಪ್ಪಿಕೊಂಡಿದ್ದರೆ ಲಿಂಗಾಯತ ಸ್ವತಂತ್ರ ಹೋರಾಟದ ಅವಶ್ಯಕತೆ ಇರುತ್ತಿರಲಿಲ್ಲ ಎಂದು ಹೇಳಿದರು.

ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದಗೌಡರು ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿ, ಬಸವಣ್ಣ ಕರ್ನಾಟಕಕ್ಕೆ ಮಾತ್ರವಲ್ಲ, ಇಡೀ ಪ್ರಪಂಚಕ್ಕೆ ಬೇಕಾದವರು. ಅವರು ಕೊಟ್ಟ ಸಂವಿಧಾನದ ಸಪ್ತಸೂತ್ರಗಳು ಪ್ರತಿಯೊಬ್ಬರಲ್ಲೂ ಮೂಡಿದರೆ ಇನ್ನಾವ ಸಂವಿಧಾನದ ಅವಶ್ಯಕತೆ ಇಲ್ಲ. ಲಿಂಗಾಯತ ಸ್ವತಂತ್ರ ಧರ್ಮ ಎಂದು ಒಪ್ಪಿಕೊಳ್ಳಬೇಕು. ಪ್ರೀತಿ, ವಿಶ್ವಾಸ ದೇಶದ ಕಾನೂನಾಗಬೇಕು. ವಿಚಾರಗಳು ಸ್ಪಷ್ಟವಾಗಿದ್ದರೆ ಅನುಷ್ಠಾನದಲ್ಲಿ ಅನುಮಾನವಿಲ್ಲ ಎಂದರು.

ಗೋವಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸಿದ್ಧಣ್ಣ ಮೇಟಿ ಮಾತನಾಡಿ, ಮನುಷ್ಯನ ವೈಮನಸ್ಸುಗಳಿಂದ ಕೊಳಕಾದ ಮನಸ್ಸನ್ನು ಶರಣರ ವಿಚಾರಗಳಿಂದ ಸ್ವಚ್ಛಗೊಳಿಸಬೇಕೆಂದು ಹೇಳಿದರು.

ಪ್ರಾಸ್ತಾವಿಕವಾಗಿ ಸಿದ್ಧು ಯಾಪಲಪರವಿ ಮಾತನಾಡಿ, ದಾವಣಗೆರೆಯ ಶೃಂಗಸಭೆಯಿಂದ ಗೊಂದಲ ಉಂಟಾಗಿದೆ. ಲಿಂಗಾಯತ ಧರ್ಮದ ಸ್ವತಂತ್ರ ಮಾನ್ಯತೆಗೆ ಎಲ್ಲ ಅರ್ಹತೆ, ಆಧಾರಗಳಿದ್ದರೂ ಪಂಚಪೀಠಾಧೀಶ್ವರರು ಗೊಂದಲವೆಬ್ಬಿಸುತ್ತಿದ್ದಾರೆ. ಇದು ಬಸವಾಭಿಮಾನಿಗಳಿಗೆ ಘಾಸಿಗೊಳಿಸಿದೆ ಎಂದು ಅಭಿಪ್ರಾಯಿಸಿದರು.

ಶಿವಸಂಚಾರದ ಎಚ್.ಎಸ್. ನಾಗರಾಜ್ ತಬಲಾ ಸಾಥಿಯೊಂದಿಗೆ ಶರಣ ವಚನ ಗೀತೆಗಳನ್ನು ಹಾಡಿದರು. ರಾಷ್ಟ್ರೀಯ ಬಸವ ಪ್ರತಿಷ್ಠಾನದ ಅಧ್ಯಕ್ಷ ಎಸ್.ಎಂ. ಸುರೇಶ್ ಸ್ವಾಗತಿಸಿದರು. ಮರಬಘಟ್ಟದ ರುದ್ರಾಚಾರ್ ನಿರೂಪಿಸಿದರು.

ಕಾರ್ಯಕ್ರಮದ ನಂತರ ಸಾಣೇಹಳ್ಳಿ ಶಿವಕುಮಾರ

# ಮೊಳಕಾಲ್ಮೂರು ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ಖಾಯಂ ಹೆರಿಗೆ ಪ್ರಸೂತಿ ವೈದ್ಯರನ್ನು ನೇಮಿಸಲು ಆಗ್ರಹ

**ಮೊಳಕಾಲ್ಮೂರು :** ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ಖಾಯಂ ಹೆರಿಗೆ ಪ್ರಸೂತಿ ವೈದ್ಯರನ್ನು ನೇಮಿಸಬೇಕೆಂದು ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯೆ ಕೆ.ಜೆ. ಜಯಲಕ್ಷ್ಮಿ ಆಗ್ರಹಿಸಿದ್ದಾರೆ.

ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಆವರಣದಲ್ಲಿ ವೈದ್ಯರು ಹಾಗೂ ಸಿಬ್ಬಂದಿಗಳನ್ನು ನೇಮಿಸಬೇಕೆಂದು ಒತ್ತಾಯಿಸಿ ಪ್ರತಿಭಟನೆ ನಡೆಸಿ ಮಾತನಾಡಿದ, ಅವರು ಈ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ವೈದ್ಯರು ವರ್ಗಾವಣೆಯಾಗಿದ್ದು ಹೆರಿಗೆ ವೈದ್ಯರ ಸಮಸ್ಯೆ ಕಾಡುತ್ತಿದೆ. ಹೆಸರಿಗೆ ಮಾತ್ರ ನೂರು ಹಾಸಿಗೆಗಳ ಆಸ್ಪತ್ರೆಯಾಗಿದ್ದು, ಸಮರ್ಪಕವಾದ ಮಹಿಳಾ ಪ್ರಸೂತಿ ತಜ್ಞರು ಸೇರಿದಂತೆ ಹಲವಾರು ವೈದ್ಯರು ಮತ್ತು ಸಿಬ್ಬಂದಿಗಳಿಲ್ಲದೆ ಈ ಭಾಗದ ಗುಡ್ಡಗಾಡು ಪ್ರದೇಶದ ಬಡ ಕುಟುಂಬಗಳ ಹೆಣ್ಣು ಮಕ್ಕಳು ಆತಂಕದಲ್ಲಿದ್ದಾರೆ. ಗುಡ್ಡಗಾಡು ಪ್ರದೇಶದ ಹೆಣ್ಣು ಮಕ್ಕಳು ಆಸ್ಪತ್ರೆಗೆ ಹಾಗೂ ಇನ್ನಿತರ ಕೆಲಸ ಕಾರ್ಯಗಳಿಗಾಗಿ ಸಂಚರಿಸಲು ಬಡ ಜನತೆಗೆ ಸಾರಿಗೆ ಸೌಲಭ್ಯವಿಲ್ಲದಂತಾಗಿದ್ದರಿಂದ ಮುಖ್ಯಮಂತ್ರಿಗಳು ಸಾರಿಗೆ ಸೌಲಭ್ಯ ಕಲ್ಪಿಸಬೇಕಾಗಿದೆ. ಹಿಂದುಳಿದ ಈ ತಾಲೂಕಿನ ದೂರದ ಗುಡ್ಡಗಾಡು ಪ್ರದೇಶದಿಂದ ಸರ್ಕಾರಿ ಆಸ್ಪತ್ರೆಗೆ ಹೆರಿಗೆಗೆಂದು ಬರುವ ಬಹುತೇಕ ಬಡ ಕುಟುಂಬದ ಹೆಣ್ಣುಮಕ್ಕಳು ಹೆರಿಗೆ ವೈದ್ಯರಿಲ್ಲದೆ ಪ್ರಾಣ ಭೀತಿಯಲ್ಲಿರುವಂತಾಗಿದೆ. ಈ ಆಸ್ಪತ್ರೆಯಲ್ಲಿ ಹೆರಿಗೆ ಪ್ರಸೂತಿ ತಜ್ಞರಿಲ್ಲದ ಹಿನ್ನೆಲೆ ದೂರದ ಬಳ್ಳಾರಿ, ಚಿತ್ರದುರ್ಗ, ಬೆಂಗಳೂರು ಸೇರಿದಂತೆ ಇನ್ನಿತರ ನಗರ ಪ್ರದೇಶಗಳ ಆಸ್ಪತ್ರೆಗೆ ಕಳುಹಿಸುತ್ತಿರುವುದರಿಂದ ಬಡ ಕುಟುಂಬದ ಹೆಣ್ಣು ಮಕ್ಕಳಿಗೆ ನಗರ ಪ್ರದೇಶದ ಆಸ್ಪತ್ರೆಗಳಿಗೆ ಹೋಗಲಾಗದೆ ಗಂಭೀರ ಸಮಸ್ಯೆ ಅನುಭವಿಸುವಂತಾಗಿದೆ.

ರಾಜ್ಯದಲ್ಲಿ ಮುಖ್ಯಮಂತ್ರಿಯವರು ಸಾಕಷ್ಟು ಭಾಗ್ಯಗಳನ್ನು ನೀಡಿದಂತೆ ತಾಲೂಕಿಗೆ ಹೆರಿಗೆ



ಪ್ರಸೂತಿ ವೈದ್ಯರ ಭಾಗ್ಯ ನೀಡಬೇಕಾಗಿದೆ. ಈ ಭಾಗದವರು ಆರ್ಥಿಕವಾಗಿ ಹಿಂದುಳಿದಿರುವುದರಿಂದ ದೂರದ ನಗರ ಪ್ರದೇಶದ ಆಸ್ಪತ್ರೆಗಳಿಗೆ ಹೋಗಲಾಗದೆ ಅಶಕ್ತರಾಗುರುವುದರಿಂದ ಬಡ ಹೆಣ್ಣು ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ಈ ಆಸ್ಪತ್ರೆಗೆ ಹೆರಿಗೆ ಪ್ರಸೂತಿ ತಜ್ಞರನ್ನು ನೀಡಬೇಕಾಗಿದೆ. ಹಾಗೆಯೇ ಈ ನೂರು ಹಾಸಿಗೆಗಳ ಆಸ್ಪತ್ರೆಯಲ್ಲಿ ಹೆರಿಗೆ ಪ್ರಸೂತಿ ತಜ್ಞರು ಸೇರಿದಂತೆ ಇನ್ನಿತರ ವೈದ್ಯರು ಹಾಗೂ ಸಿಬ್ಬಂದಿಗಳ ಕೊರತೆಯಿದ್ದು, ಕೂಡಲೇ ಖಾಲಿಯಿರುವ ಹುದ್ದೆಗಳಿಗೆ ನೇಮಿಸಬೇಕಾಗಿದೆ. ನಮ್ಮ ಸರ್ಕಾರವಿದ್ದು, ಸರ್ಕಾರಕ್ಕೆ ಮುಜುಗರ ಉಂಟು ಮಾಡುವ ಉದ್ದೇಶವಿರುವುದಿಲ್ಲ. ಬಡ ಹೆಣ್ಣು ಮಕ್ಕಳ ಧ್ವನಿಯಾಗಿ ಮನವಿ ಮಾಡಿಕೊಳ್ಳಲಾಗುತ್ತಿದ್ದು, ಗಂಭೀರವಾಗಿ ಪರಿಗಣಿಸಿ ಗಡಿ ತಾಲೂಕಿಗೆ ಕೂಡಲೇ ಹೆರಿಗೆ ಪ್ರಸೂತಿ ವೈದ್ಯರ ಸೌಲಭ್ಯ ಕಲ್ಪಿಸಬೇಕೆಂದು ಒತ್ತಾಯಿಸಿದರು.

ಆಸ್ಪತ್ರೆಯ ಮಹಿಳಾ ಪ್ರಸೂತಿ ವೈದ್ಯರಿಗಾಗಿ ಮಹಿಳೆಯರೇ ಹೋರಾಟ ಮಾಡಲಾಗುತ್ತಿದ್ದು, ಮಹಿಳೆಯರ ಆರೋಗ್ಯದ ಹಿತದೃಷ್ಟಿಯಿಂದ ಕೂಡಲೇ ಹೆರಿಗೆ ಪ್ರಸೂತಿ ವೈದ್ಯರನ್ನು ನೇಮಿಸಬೇಕು. ಹೆಣ್ಣು ಮಕ್ಕಳೆಂದು ನಿರ್ಲಕ್ಷವಹಿಸದೆ ಹೆಣ್ಣು ಮಕ್ಕಳ ಆರೋಗ್ಯಕ್ಕಾಗಿ ಹೆರಿಗೆ ವೈದ್ಯರನ್ನು ನೀಡಬೇಕಾಗಿದೆ. ಈ ಆಸ್ಪತ್ರೆಯಲ್ಲಿ ಹೆರಿಗೆ ಪ್ರಸೂತಿ ವೈದ್ಯರಿಲ್ಲದಿರುವುದರಿಂದ ಬೇರೆ ದೂರದ ನಗರ ಪ್ರದೇಶದ ಆಸ್ಪತ್ರೆಗೆ ಕಳುಹಿಸಲಾಗುತ್ತಿದೆ. ಬಡ ಕೂಲಿ ಕಾರ್ಮಿಕರಾಗಿರುವ ನಮಗೆ ಹೆಚ್ಚಿನ ಹಣ ಖರ್ಚ ಮಾಡಲು ಸಾಧ್ಯವಾಗದೆ ಪ್ರಾಣ ಕಳೆದುಕೊಳ್ಳುವಂತಾಗಿದೆ. ಹಾಗಾಗಿ ಸಂಬಂಧಿತ ಅಧಿಕಾರಿಗಳು ಸರ್ಕಾರದ ಗಮನ ಸೆಳೆದು ಕೂಡಲೇ ಮಹಿಳಾ ಹೆರಿಗೆ ವೈದ್ಯರನ್ನು ನೇಮಿಸಬೇಕೆಂದು ಒತ್ತಾಯಿಸಿದರು.

ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ.ಗಿರೀಶ್ ಅವರಿಗೆ ಬೇಡಿ–ಕೆಯ ಮನವಿ ಸಲ್ಲಿಸಿದರು. ಈ ಪ್ರತಿಭಟನೆಯಲ್ಲಿ ಬಹುಜನ ಒಕ್ಕೂಟದ ಎಸ್.ಪರಮೇಶ್, ಗ್ರಾ.ಪಂ.ನ ಸದಸ್ಯ ಪಾಲಯ್ಯ, ಪ್ರತಿಭಟನಾಕಾರರಾದ ಶಿವು, ದುರುಗಮ್ಮ, ರೂಪಕ್ಕ, ಮಾರಕ್ಕ, ಕಮಲಮ್ಮ, ಮೀನಾಕ್ಷಿ, ರಾಧಮ್ಮ, ಸವಿತ, ಕೆ.ಲಕ್ಷ್ಮಿ, ತಿಪ್ಪಕ್ಕ, ಹೊನ್ನೂರಮ್ಮ, ತಿಪ್ಪಮ್ಮ ಹಾಗೂ ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು

# ನ್ಯಾಮತಿ: ಜಾನುವಾರು ಕಳ್ಳರ ಬಂಧನ: 1.20 ಲಕ್ಷ ರೂ. ವಶ

**ನ್ಯಾಮತಿ:** ಸರಣಿ ಜಾನುವಾರು ಕಳವು ಪ್ರಕರಣಗಳ ಆರೋಪಿತರನ್ನು ಬಂಧಿಸಿರುವ ನ್ಯಾಮತಿ ಪೊಲೀಸರು ಆರೋಪಿತರಿಂದ 1,20,000 ರೂ. ನಗದು ಹಣ ಹಾಗೂ ಕೃತ್ಯಕ್ಕೆ ಬಳಸಿದ ಎರಡು ಅಶೋಕ್ ಲೇಲ್ಯಾಂಡ್ ಗೂಡ್ಸ್ ವಾಹನಗಳು ಮತ್ತು ಒಂದು ದ್ವಿಚಕ್ರ ವಾಹನವನ್ನು ವಶಪಡಿಸಿಕೊಂಡಿದ್ದಾರೆ.

ನ್ಯಾಮತಿ ಪೊಲೀಸ್ ಠಾಣಾ ವ್ಯಾಪ್ತಿಯ ಚಿ. ಕಡದಕಟ್ಟೆ, ಮರಿಗೊಂಡನಹಳ್ಳಿ, ಮಾಚಿಗೊಂಡನಹಳ್ಳಿ, ಕೆಂಗಟ್ಟೆ, ದೊಡ್ಡೇರಿ, ಕಂಕನಹಳ್ಳಿ ತಾಂಡಾ ಗ್ರಾಮಗಳಲ್ಲಿ ಸರಣಿ ಜಾನುವಾರು ಕಳ್ಳತನಗಳು ನಡೆದಿದ್ದು, 3 ಎತ್ತುಗಳು, 8 ಹಸುಗಳು, 2 ಕರುಗಳು ಸೇರಿ ಒಟ್ಟು 13 ಜಾನುವಾರುಗಳು ಕಳವಾಗಿವೆ. ಈ ಸಂಬಂಧ ನ್ಯಾಮತಿ ಪೊಲೀಸ್ ಠಾಣೆಯಲ್ಲಿ 6 ಕಳ್ಳತನ ಪ್ರಕರಣಗಳು ದಾಖಲಾಗಿವೆ.

ಮೋಹನ್, ನಾಗರಾಜ್ ನಾಯಕ್, ಮನ್ಸೂರ್, ಕುಶಾಲ್, ಅಮಿತ್, ಪ್ರವೀಣ್ ಬಂಧಿತರಾಗಿದ್ದಾರೆ.

ಈ ಕಾರ್ಯಾಚರಣೆಯಲ್ಲಿ ಚನ್ನಗಿರಿ ಉಪವಿಭಾಗದ ಸಹಾಯಕ ಪೊಲೀಸ್ ಅಧೀಕ್ಷಕ ಸ್ಯಾಮ್ ವರ್ಗೀಸ್, ಐ.ಪಿ.ಎಸ್., ನ್ಯಾಮತಿ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕ ರವಿ ಎನ್.ಎಸ್., ಪಿಎಸ್ಐ ಹೊಳಬಸಪ್ಪ ಹೊಳಿ, ಸಿಬ್ಬಂದಿಗಳಾದ ಮಲ್ಲೇಶಪ್ಪ ಎಎಸ್ಐ, ಮಂಜಪ್ಪ ಕೆ., ವಿಕ್ರಂ, ಶಿವರಾಜ್, ಮಹೇಶನಾಯಕ್, ಆನಂದ, ಸುನೀಲ್ ಕುಮಾರ್, ದೇವರಾಜ್ ಡಿ.ಎನ್., ಬಸವರಾಜ್, ಯಶವಂತಚಾರಿ, ಪ್ರವೀಣ್, ಪ್ರಶಾಂತ್, ಹೇಮರಾಜ್, ರಾಮಪ್ಪ, ಚನ್ನೇಶ್ ಯಶಸ್ವಿಯಾಗಿದ್ದಾರೆ.

# ವಿವಿಧೆಡೆ ದಾಳಿ: 06 ಬಾಲಕಾರ್ಮಿಕ, ಕಿಶೋರ ಕಾರ್ಮಿಕ ಮಕ್ಕಳ ರಕ್ಷಣೆ

**ಬಳ್ಳಾರಿ:** ನಗರದ ರೂಪನಗುಡಿ ರಸ್ತೆ, ಕೋಲ್ಮಿ ಬಜಾರ್, ಎ.ಪಿ.ಎಂ.ಸಿ, ಮಿಲ್ಲರಪೇಟೆ, ಕಣೆಕಲ್ ಬಸ್ ನಿಲ್ದಾಣ ಮುಂತಾದ ವಿವಿಧ ಸ್ಥಳಗಳಲ್ಲಿನ ಗ್ಯಾರೇಜ್, ಮೆಕ್ಯಾನಿಕ್ ಶಾಪ್, ಬೇಕರಿ ಇತ್ಯಾದಿ ಉದ್ದಿಮೆಗಳ ಮೇಲೆ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್‌ಫೋರ್ಸ್ ಸಮಿತಿಯು ದಾಳಿ ನಡೆಸಿ 06 ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳನ್ನು ರಕ್ಷಿಸಲಾಗಿದೆ.

ಮಕ್ಕಳ ಹೇಳಿಕೆಗಳನ್ನು ಸ್ಥಳದಲ್ಲಿ ಪಡೆದುಕೊಂಡು ಎಲ್ಲಾ ಮಕ್ಕಳನ್ನು ಪುನರ್ವಸತಿಗಾಗಿ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸಲಾಗಿದೆ. ಎಲ್ಲಾ ಉದ್ದಿಮೆಗಳ ಮಾಲೀಕರಿಗೆ ಕರಪತ್ರ ಹಾಗೂ ಪೋಸ್ಟರ್‌ಗಳನ್ನು ನೀಡಿ ಜಾಗೃತಿ ಮೂಡಿಸಲಾಯಿತು.

ಜಿಲ್ಲಾಧಿಕಾರಿಯವರ ನಿರ್ದೇಶನದ ಮೇರೆಗೆ ಹಾಗೂ ಪ್ಯಾನ್–ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಅಭಿಯಾನ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಹೊಸಮನೆ ಇವರ ಅಧ್ಯಕ್ಷತೆಯಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್ ಫೋರ್ಸ್ ಸಮಿತಿ ಸಭೆ ನಡೆಸಿ ಈ ದಾಳಿ ಕೈಗೊಳ್ಳಲಾಗಿದೆ.

# ಶಾಸಕರ ಮಾತಿಗೂ – ಕೃತಿಗೂ ಸಾಕಷ್ಟು ವ್ಯತ್ಯಾಸವಿದೆ

## ಜಗಳೂರು ಶಾಸಕರ ವಿರುದ್ಧ ಮಾಜಿ ಶಾಸಕ ಎಚ್.ಪಿ. ರಾಜೇಶ್ ವಾಗ್ದಾಳಿ

**ಜಗಳೂರು:** ಪಟ್ಟಣದ ಸಾರ್ವಜನಿಕ ಆಸ್ಪತ್ರೆ ಮುಂಭಾಗದ ಕಳಪೆ ಸಿ.ಸಿ.ರಸ್ತೆ ಕಾಮಗಾರಿ, ಕುಡಿಯುವ ನೀರು, ಭದ್ರಾ ಮೇಲ್ದಂಡೆ ಯೋಜನೆ ಬಗ್ಗೆ ನಾನೂ ಮತ್ತು ಮಾಜಿ ಶಾಸಕ ರಾಮಚಂದ್ರ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಶ್ನಿಸಿದ್ದೇವೆ. ಇದರಿಂದ ಹತಾಶೆಗೊಂಡ ಶಾಸಕ ದೇವೇಂದ್ರಪ್ಪ ಅವರು ನಾವು ಕೇಳಿದ್ದು ತಪ್ಪು ಎನ್ನುವಂತೆ ಶಾಸಕರು ಪ್ರಶ್ನೆ ಮಾಡುತ್ತಾರೆ. ವ್ಯಕ್ತಿಯ ವಾಕ್ ಸ್ವಾತಂತ್ರ್ಯ ಮೊಟಕುಗೊಳಿಸುವ ಕಾರ್ಯ ಮಾಡುತ್ತಿರುವುದು ಸರಿ ಅಲ್ಲ ಎಂದು ಮಾಜಿ ಶಾಸಕ ಎಚ್.ಪಿ. ರಾಜೇಶ್ ಹಾಲಿ ಶಾಸಕರ ವಿರುದ್ದ ವಾಗ್ದಾಳಿ ಮಾಡಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಜವಾಬ್ದಾರಿ ಸ್ಥಾನದಲ್ಲಿ ಇರುವ ನೀವು ಆಲೋಚನೆ ಮಾಡಿ ಮಾತನಾಡಿ.



ನಿಮ್ಮ ಮಾತಿಗೂ ಕೃತಿಗೂ ಸಾಕಷ್ಟು ವ್ಯತ್ಯಾಸವಿದೆ ಎಂದು ಕಿಡಿಕಾರಿದರು.

ವೇದಿಕೆ ಕಾರ್ಯಕ್ರಮಗಳಲ್ಲಿ ಬಸವಣ್ಣ, ಮಹಾಭಾರತ, ರಾಮಾಯಣದ ಬಗ್ಗೆ ಮಾತನಾಡುತ್ತೀರಿ. ವೇದಿಕೆಯಲ್ಲಿ ಇಳಿದ ಮೇಲೆ ಯಾರಿಗೆ ಹೇಗೆ ಮಾತನಾಡಿದ್ದೀರಿ ಎಂಬುದು ನನ್ನ ಬಳಿ ಆಡಿಯೋ ರೆಕಾರ್ಡ್ ಇದೆ. ನನಗೆ ಮಾತಿನ ಚಪಲವಿಲ್ಲ. ರಾಮಚಂದ್ರ, ನಾನು ಜನರ ಮಧ್ಯೆ ಇದ್ದು 5 ಚುನಾವಣೆಗಳಲ್ಲಿ ಗೆದ್ದು ಸೋತು ಜನರ ಸೇವೆ ಮಾಡಿದ್ದೇವೆ. ಪ್ರಸ್ತುತ ಕ್ಷೇತ್ರದಲ್ಲಿ ಉಸಿರು ಗಟ್ಟಿದ ವಾತಾವರಣವಿದೆ. ಇನ್ನೂ ಮೂರು ವರ್ಷ ಅಧಿಕಾರವಿದೆ. ನಿಮ್ಮ ವರ್ತನೆ ಬದಲಿಸಿಕೊಳ್ಳಿ. ನೀವು ಸಹ ಪಕ್ಷೇತರರಾಗಿ ಚುನಾವಣೆಗೆ ನಿಲ್ಲಿ, ನಾನೂ ಪಕ್ಷೇತರನಾಗಿ ನಿಲ್ಲುತ್ತೇನೆ. ಯಾರು ಗೆಲ್ಲುತ್ತಾರೋ ನೋಡೋಣ ಎಂದು ಸವಾಲು ಹಾಕಿದರು.

ಜನರ ಮನಸ್ಸನ್ನು ನಾನು ಗೆದ್ದಿದ್ದೇನೆ, ತಾಂತ್ರಿಕವಾಗಿ ನೀವು ಗೆದ್ದಿದ್ದೀರಿ ಅಷ್ಟೇ, ಸರ್ಕಾರಿ ಕಾರ್ಯಕ್ರಮದಲ್ಲಿ ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ಎದು–ರೇ ನನ್ನ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಶಾಸಕರು, ಅವರಿಗೆ ಮುಜುಗರ ಉಂಟಾಗುವಂತೆ ಮಾತನಾಡಿದ್ದನ್ನು ವಿಡಿಯೋಗಳಲ್ಲಿ ನೋಡಿದ್ದೇನೆ.

ಕ್ಷೇತ್ರದಲ್ಲಿ ಭದ್ರಾ ಮೇಲ್ದಂಡೆ ಯೋಜನೆ ಬಗ್ಗೆ ಶಾಸಕರು ಇದುವರೆಗೂ ಮಾತನಾಡಿಲ್ಲ. ಕ್ಷೇತ್ರದ ಜನ ನಿಮಗೆಷ್ಟು ಮತ ಹಾಕಿದ್ದಾರೋ ನಮಗೂ ನಿಮಗಿಂತ ಜಾಸ್ತಿ ಮತ ಹಾಕಿದ್ದಾರೆ. ಜನರ ಮನಸ್ಸನ್ನು ನಾನು ಗೆದ್ದಿದೇನೆ, ತಾಂತ್ರಿಕವಾಗಿ ನೀವು ಗೆದ್ದಿದ್ದೇನೆ ಅಷ್ಟೇ ಎಂದರು.

ರಾಜ್ಯದಲ್ಲಿ ನಿಮ್ಮದೇ ಸರ್ಕಾರವಿದೆ. 600 ಕೋಟಿ ಅನುದಾನದ ಬಗ್ಗೆ ಶ್ವೇತ ಪತ್ರ ಹೊರಡಿಸಿ. ಬಾಯಿ ಮಾತಿನಲ್ಲಿ ಹೇಳಿದರೆ ಆಗುತ್ತಾ. ನೀವು ಅಭಿವೃದ್ಧಿ ಕೆಲಸ ಮಾಡಿ. ನಿಮಗೆ ನಾನು ಮತ್ತು ಎಸ್.ವಿ. ರಾಮಚಂದ್ರ ಬೆಂಬಲಿಸುತ್ತೇವೆ. ಸ್ಥಳೀಯವಾಗಿ ಸಾಕಷ್ಟು ಸಮಸ್ಯೆಗಳಿವೆ. ಅವುಗಳನ್ನು ಬಗೆಹರಿಸುವ ಕೆಲಸ ಮಾಡಿ. ಭದ್ರಾ ಮೇಲ್ದಂಡೆ ಯೋಜನೆ ಯಾವ ಹಂತದಲ್ಲಿದೆ, ಅಧಿಕಾರಿಗಳು ಏನು ಮಾಡುತ್ತಿದ್ದಾರೆ ಎಂದು ಮಾತನಾಡಿದ್ದೀರಾ? ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಏನಾಗುತ್ತಿದ್ದೆ ಕೇಳಿದ್ದೀರಾ? ಎಂದು ಪ್ರಶ್ನಿಸಿದರು.

ಈ ವೇಳೆ ಪ.ಪಂ. ಅಧ್ಯಕ್ಷ ಕೆ.ಎಸ್. ನವೀನ್‌ಕುಮಾರ್, ಸದಸ್ಯರಾದ ರೇವಣ್ಣ, ಶಿವಕುಮಾರ ಸ್ವಾಮಿ, ಮುಖಂಡರಾದ ಕ್ಯಾಂಪ್ ರೇವಣ್ಣ, ಬನ್ನಿಹಟ್ಟಿ ರೇವಣ್ಣ, ಸಿದ್ದೇಶ್, ರಾಜು, ಬೋರಣ್ಣ, ಸೂರಲಿಂಗಪ್ಪ, ಓಬಳೇಶ್, ಕುಬೇರಪ್ಪ, ಮಾರಪ್ಪ, ಬಾಲರಾಜ್ ಸೇರಿದಂತೆ ಅನೇಕರು ಇದ್ದರು.

# ರಾಷ್ಟ್ರಪತಿ ಪದಕಕ್ಕೆ ಆಯ್ಕೆಯಾದ 1090 ಅಧಿಕಾರಿಗಳು

**ನವದೆಹಲಿ, ಆ.14 :** ಸ್ವತಂತ್ರ ದಿನಾಚರಣೆಯ ಸಂದರ್ಭದಲ್ಲಿ ಒಂದು ಸಾವಿರಕ್ಕೂ ಹೆಚ್ಚು ಪೊಲೀಸ್, ಅಗ್ನಿಶಾಮಕ ಸೇವೆಗಳು, ಗೃಹರಕ್ಷಕ ದಳ ಮತ್ತು ನಾಗರಿಕ ರಕ್ಷಣೆ ಮತ್ತು ತಿದ್ದುಪಡಿ ಸೇವೆಗಳಿಗೆ ಪದಕಗಳನ್ನು ಪಡೆದವರ ಅಧಿಕೃತ ಪಟ್ಟಿಯನ್ನು ಗೃಹ ಸಚಿವಾಲಯ ಪ್ರಕಟಿಸಿದೆ. ಈ ಗೌರವಗಳಲ್ಲಿ ಶೌರ್ಯ ಪ್ರಶಸ್ತಿಗಳು, ರಾಷ್ಟ್ರಪತಿಗಳ ವಿಶಿಷ್ಟ ಸೇವೆಗಾಗಿ ಪದಕ ಮತ್ತು ಪ್ರತಿಭಾನ್ವಿತ ಸೇವೆಗಾಗಿ ಪದಕ ಸೇರಿವೆ.

ಈ ವರ್ಷ, ಒಟ್ಟು 1,090 ಪದಕಗಳನ್ನು ನೀಡಲಾಗುವುದು, ಇದರಲ್ಲಿ 233 ಶೌರ್ಯ ಪದಕಗಳು, 99 ರಾಷ್ಟ್ರಪತಿಗಳ ವಿಶಿಷ್ಟ ಸೇವೆಗಾಗಿ ಪದಕಗಳು ಮತ್ತು 758 ಪ್ರತಿಭಾನ್ವಿತ ಸೇವೆಗಾಗಿ ಪದಕಗಳು ಸೇರಿವೆ.

ಪೊಲೀಸ್ ವಿಭಾಗದಲ್ಲಿ 226 ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಶೌರ್ಯ ಪದಕಕ್ಕೆ ಆಯ್ಕೆಯಾಗಿದ್ದು, 89 ಜನರಿಗೆ ರಾಷ್ಟ್ರಪತಿಗಳ ವಿಶಿಷ್ಟ ಸೇವೆಗಾಗಿ ಪದಕವನ್ನು ನೀಡಲಾಗುವುದು ಮತ್ತು 635 ಜನರಿಗೆ ಪ್ರತಿಭಾನ್ವಿತ ಸೇವೆಗಾಗಿ ಪದಕವನ್ನು ನೀಡಲಾಗುವುದು.ಜಮ್ಮು ಮತ್ತು ಕಾಶ್ಮೀರದ ಸಿಬ್ಬಂದಿಗೆ ಅತಿ ಹೆಚ್ಚು ಶೌರ್ಯ ಪದಕಗಳು ಬಂದಿವೆ, ನಂತರ ಕೇಂದ್ರ ಮೀಸಲು ಪೊಲೀಸ್ ಪಡೆ ಮತ್ತು ಗಡಿ ಭದ್ರತಾ ಪಡೆ ಸದಸ್ಯರಿದ್ದಾರೆ.

ಅಗ್ನಿಶಾಮಕ ಸೇವೆಗಳಿಗೆ ಸಂಬಂಧಿಸಿದಂತೆ 62 ಪ್ರಶಸ್ತಿಗಳನ್ನು ಘೋಷಿಸಲಾಗಿದ್ದು, ಇದರಲ್ಲಿ ಆರು ಶೌರ್ಯ ಪದಕಗಳು, ಐದು ರಾಷ್ಟ್ರಪತಿಗಳ ವಿಶಿಷ್ಟ ಸೇವಾ ಪದಕಗಳು ಮತ್ತು 51 ಪ್ರತಿಭಾನ್ವಿತ ಸೇವಾ ಪದಕಗಳು ಸೇರಿವೆ.ಗೃಹರಕ್ಷಕ ದಳ ಮತ್ತು ನಾಗರಿಕ ರಕ್ಷಣಾ ವಿಭಾಗದಲ್ಲಿ, ಗೌರವಗಳು ಒಂದು ಶೌರ್ಯ ಪದಕ, ಮೂರು ರಾಷ್ಟ್ರಪತಿಗಳ ವಿಶಿಷ್ಟ ಸೇವಾ ಪದಕಗಳು ಮತ್ತು 41 ಪ್ರತಿಭಾನ್ವಿತ ಸೇವಾ ಪದಕಗಳನ್ನು ಒಳಗೊಂಡಿರುತ್ತವೆ.

ತಿದ್ದುಪಡಿ ಸೇವೆಗಳಿಗಾಗಿ, ಇಬ್ಬರು ಅಧಿಕಾರಿಗಳಿಗೆ ರಾಷ್ಟ್ರಪತಿಗಳ ವಿಶಿಷ್ಟ ಸೇವಾ ಪದಕವನ್ನು ನೀಡಲಾಗುತ್ತದೆ, ಆದರೆ 31 ಅಧಿಕಾರಿಗಳಿಗೆ ಪ್ರತಿಭಾನ್ವಿತ ಸೇವಾ ಪದಕವನ್ನು ನೀಡಲಾಗುತ್ತದೆ.ಈ ವಾರ್ಷಿಕ ಮನ್ನಣೆಯು ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳು ಮತ್ತು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳಾದ್ಯಂತ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಶೌರ್ಯ, ಸಮರ್ಪಣೆ ಮತ್ತು ವಿಶಿಷ್ಟ ಸೇವೆಗೆ ಗೌರವವಾಗಿದೆ.ದೇಶದಲ್ಲಿ ಕಾನೂನು, ಸುವ್ಯವಸ್ಥೆ ಮತ್ತು ಸಾರ್ವಜನಿಕ ಸುರಕ್ಷತೆಯನ್ನು ಕಾಪಾಡುವಲ್ಲಿ ಈ ವ್ಯಕ್ತಿಗಳ ಅಸಾಧಾರಣ ಕೊಡುಗೆಯನ್ನು ಗುರುತಿಸಲು ಸ್ವಾತಂತ್ರ್ಯ ದಿನಾಚರಣೆಯ ಭಾಗವಾಗಿ ಪದಕಗಳನ್ನು ನೀಡಲಾಗುತ್ತದೆ.

<u>ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವ ರಹೀಂ ಖಾನ್ ಸೂಚನೆ</u>

# ನಗರೋತ್ಥಾನ ಹಂತ–4 ರ ಬಾಕಿ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಿ

**ಬಳ್ಳಾರಿ :** ಜಿಲ್ಲೆಯಲ್ಲಿ ನಗರ, ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನಗರೋತ್ಥಾನ ಹಂತ–4 ರಲ್ಲಿ ಕೈಗೊಂಡಿರುವ ವಿವಿಧ ಬಾಕಿ ಕಾಮಗಾರಿಗಳನ್ನು ಶೀಘ್ರವೇ ಪೂರ್ಣಗೊಳಿಸಬೇಕು ಎಂದು ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಗೆ ನಗರೋತ್ಥಾನ ಯೋಜನೆಯಡಿ 4ನೇ ಹಂತದಲ್ಲಿ ವಿವಿಧ ಕಾಮಗಾರಿಗಳಿಗೆ 68 ಕೋಟಿ ರೂ. ಬಿಡುಗಡೆ ಮಾಡಲಾಗಿದ್ದು, ಅದರಲ್ಲಿ 31 ಕೋಟಿ ರೂ. ಖರ್ಚು ಮಾಡಲಾಗಿದೆ. ಇನ್ನೂ ಪೂರ್ಣಗೊಳ್ಳದ ಕಾಮಗಾರಿಗಳನ್ನು ನಿಗದಿತ ಕಾಲಾವಧಿಯೊಳಗೆ ಪೂರ್ಣಗೊಳಿಸುವಂತೆ ಕಟ್ಟುನಿಟ್ಟಾಗಿ ಸೂಚಿಸಿ ಗುಣಮಟ್ಟದ ಕಾಮಗಾರಿಗಳನ್ನು ನಿರ್ವಹಿಸಬೇಕು. ಈ ಕುರಿತು ಅಧಿಕಾರಿಗಳು ಗುತ್ತಿಗೆದಾರರಿಗೆ ಸೂಕ್ತ ನಿರ್ದೇಶನ ನೀಡಬೇಕು ಎಂದರು.

ನಗರೋತ್ಥಾನ ಹಂತ–4 ರಲ್ಲಿ ಮಂಜೂರಾದ 104 ಕಾಮಗಾರಿಗಳಲ್ಲಿ 38 ಕಾಮಗಾರಿಗಳು ಪೂರ್ಣಗೊಂಡಿದ್ದು, 45 ಕಾಮಗಾರಿಗಳು ಪ್ರಗತಿಯಲ್ಲಿವೆ. ಅದರಲ್ಲಿ 32 ವೈಯಕ್ತಿಕ ಕಾಮಗಾರಿಗಳಿಗೆ ಹಾಗೂ 02 ವಂತಿಕೆ ಕಾಮಗಾರಿಗಳಿಗೆ ಹಣ ಬಿಡುಗಡೆಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ. ಇನ್ನೂ ಪ್ರಾರಂಭಿಸಬೇಕಾದ 22 ಕಾಮಗಾರಿಗಳಲ್ಲಿ 04 ಕಾಮಗಾರಿಗಳು ಟೆಂಡರ್ ಪ್ರಕ್ರಿಯೆಯಲ್ಲಿವೆ ಎಂದು ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಿ.ಅಬ್ದುಲ್ ರೆಹಮಾನ್ ಅವರು ಸಭೆಗೆ ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ರಹೀಂ



ಖಾನ್ ಅವರು, ಅನುದಾನಕ್ಕಾಗಿ ಬೇಡಿಕೆ ಸಲ್ಲಿಸಿದಾಗ ಮುಖ್ಯಮಂತ್ರಿಯವರು, ಬಾಕಿ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿದ್ದು, ಮೂರು ತಿಂಗಳೊಳಗಾಗಿ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು. ಅನುದಾನ ಬಿಡುಗಡೆಗಾಗಿ ಗುತ್ತಿಗೆದಾರರನ್ನು ಕಚೇರಿಗೆ ಅಲೆದಾಡಿಸುವಂತಿಲ್ಲ. ಸಂಬಂಧಿಸಿದ ಇಂಜಿನಿಯರ್ ಗಳ ಸಭೆ ನಡೆಸಿ ಸೂಕ್ತ ವರದಿ ಸಲ್ಲಿಸಬೇಕು ಎಂದು ಸೂಚಿಸಿದರು.

ಜಿಲ್ಲೆಯಲ್ಲಿನ ವಿವಿಧ ಆಸ್ತಿ, ನೀರಿನ ಶುಲ್ಕ ಮತ್ತು ಅಂಗಡಿ ಶುಲ್ಕ, ಟ್ರೇಡ್ ಲೈಸೆನ್ಸ್ ಗಳ ತೆರಿಗೆ ಹಣವನ್ನು ನಿಗದಿಪಡಿಸಿದ ಗುರಿಗೆ ಅನುಗುಣವಾಗಿ ವಸೂಲಿ ಮಾಡಿ ಶೇಕಡವಾರು ಪ್ರಗತಿ ಸಾಧಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಮಾತನಾಡಿ, ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಸೇರಿದಂತೆ ಗ್ರಾಪಂ ವ್ಯಾಪ್ತಿಗಳಲ್ಲಿ ಜನರಿಗೆ ಶುದ್ಧ ಕುಡಿಯುವ ನೀರು ಸರಬರಾಜಿಗೆ ಆದ್ಯತೆ ನೀಡಲಾಗಿದೆ. ನೀರು ಸರಬರಾಜು ಪೈಪ್ ಲೈನ್ ಗಳಲ್ಲಿ ಚರಂಡಿ ನೀರು ಸೇರಿದಂತೆ ಯಾವುದೇ ಕಲುಷಿತ ನೀರು ಸೇರದಂತೆ ಜಾಗ್ರತೆ ವಹಿಸಲಾಗಿದೆ. ಓವರ್ ಹೆಡ್ ಟ್ಯಾಂಕ್ ಗಳನ್ನು ಪ್ರತಿ 6 ತಿಂಗಳಿಗೊಮ್ಮೆ ಸ್ವಚ್ಛಗೊಳಿಸುವಂತೆ, ಬಳಿಕ ನೀರಿನ ಮಾದರಿಯನ್ನು ಪರೀಕ್ಷೆಗೆ ಒಳಪಡಿಸಿ ಕುಡಿಯಲು ಸರಬರಾಜು ಮಾಡಲಾಗುತ್ತಿದೆ ಮತ್ತು ಈ ಕುರಿತು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಸಭೆಗೆ ತಿಳಿಸಿದರು.

ಈ ಭಾಗದಲ್ಲಿ ಕುಡಿಯುವ ನೀರಿಗೆ ತುಂಗಭದ್ರಾ ಜಲಾಶಯ ಅವಲಂಬಿತವಾಗಿದ್ದು, ಕಾಲುವೆಗಳ ಮುಖಾಂತರ ನೀರು ಶುದ್ದೀಕರಿಸಿ ಸರಬರಾಜು ಮಾಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಕುಡಿಯುವ ನೀರಿಗೆ ಯಾವುದೇ ರೀತಿಯ ಸಮಸ್ಯೆಯಾಗದಂತೆ ಕ್ರಮ ವಹಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಪೌರಕಾರ್ಮಿಕರ ಗೃಹಭಾಗ್ಯ ಯೋಜನೆಯಡಿ ನಿವೇಶನ ಕಲ್ಪಿಸಲು ಪೌರಕಾರ್ಮಿಕ ಫಲಾನುಭವಿಗಳಿಗೆ ಜಾಗ ಗುರುತಿಸಿರುವ ಆಯಾ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ನನಗೆ ಪ್ರಸ್ತಾವನೆ ಸಲ್ಲಿಸಿ ಎಂದು ಜಿಲ್ಲಾಧಿಕಾರಿಯವರು ಹೇಳಿದರು.

ಬಡ ಜನರಿಗೆ ಕಡಿಮೆ ದರದಲ್ಲಿ ಆಹಾರ ಒದಗಿಸುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕನಸಿನ ಯೋಜನೆಯಾದ ಇಂದಿರಾ ಕ್ಯಾಂಟೀನ್‌ಗಳಲ್ಲಿ ಸ್ವಚ್ಛತೆಗೆ ಮೊದಲ ಆದ್ಯತೆ ನೀಡಬೇಕು. ಉತ್ತಮ ಗುಣಮಟ್ಟದ ಆಹಾರ ಪದಾರ್ಥಗಳನ್ನು ಸರ್ಕಾರ ನಿಗದಿಪಡಿಸಿರುವ ಗುಣಮಟ್ಟದಲ್ಲಿ ವಿತರಣೆ ಆಗುವಂತೆ ನೋಡಿಕೊಳ್ಳಬೇಕು ಎಂದು ಸಚಿವರು ತಿಳಿಸಿದರು.

ಜಿಲ್ಲೆಯಲ್ಲಿ ಇ–ಖಾತಾ ವಿತರಣೆ ಸಂಬಂಧಿಸಿದಂತೆ, ಪ್ರಗತಿ ಸಾಧಿಸಬೇಕು. ಖಾತಾ ವಿತರಣೆಯಲ್ಲಿ ಯಾವುದೇ ಗೊಂದಲ ಮತ್ತು ಸಮಸ್ಯೆಗಳಿದ್ದಲ್ಲಿ ಗಮನಕ್ಕೆ ತಂದ–ರೆ ಚರ್ಚಿಸಲಾಗುವುದು ಎಂದರು.

ಜಿಲ್ಲೆಯ ಎಲ್ಲಾ ನಗರ ಮತ್ತು ಪಟ್ಟಣಗಳ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಿ ವೈಜ್ಞಾನಿಕ ಘನತ್ಯಾಜ್ಯ ನಿರ್ವಹಣೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು ಎಂದರಲ್ಲದೇ, ಸಾರ್ವಜನಿಕ ಶೌಚಾಲಯಗಳ ನಿರ್ವಹಣೆಯು ಅಗತ್ಯವಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ನಿರ್ವಹಣೆ ಕುರಿತು ಭೇಟಿ ನಡೆಸಬೇಕು ಎಂದರು.

ಸಭೆಯಲ್ಲಿ 24*7 ಕುಡಿಯುವ ನೀರು ಸರಬರಾಜು, ಯುಜಿಡಿ ಸೇರಿದಂತೆ ವಿವಿಧ ಯೋಜನೆಗಳ ಪ್ರಸ್ತುತ ಸ್ಥಿತಿಗತಿ ವರದಿಗಳ ಕುರಿತು ಮಾಹಿತಿ ಪಡೆದ ಸಚಿವರು ಹಲವು ಸಲಹೆ–ಸೂಚನೆ ಅಧಿಕಾರಿಗಳಿಗೆ ನೀಡಿದರು.

ಈ ಸಂದರ್ಭದಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್.ಬಸವರಾಜ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್. ಎನ್., ಸಚಿವರ ಆಪ್ತ ಕಾರ್ಯದರ್ಶಿ ಮುರಳಿಧರ್ ಸೇರಿದಂತೆ ವಿವಿಧ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ಎಂಜಿನಿಯರ್ ಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಟ್ರಂಪ್ ವಿರುದ್ಧ ಮೋದಿ ಗುಡುಗು



**ನವದೆಹಲಿ,ಆ.7–** ಭಾರತದ ಮೇಲೆ ಹೆಚ್ಚುವರಿ ಸುಂಕ ವಿಧಿಸಿರುವ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡೆಯನ್ನು ತೀವ್ರವಾಗಿ ತರಾಟೆ–ಗೆ ತೆಗೆದುಕೊಂಡಿರುವ ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ರೈತರ ಹಿತರಕ್ಷಣೆಗಾಗಿ ಸುಂಕದ ಯುದ್ಧದಲ್ಲಿ ಎಂದಿಗೂ ರಾಜೀ ಮಾಡಿಕೊಳ್ಳುವುದಿಲ್ಲ ಎಂದು ಗುಡುಗಿದ್ದಾರೆ.

ರೈತರು, ಮೀನುಗಾರರು, ಹೈನುಗಾರರ ಹಿತಾಸಕ್ತಿಗಳಲ್ಲಿ ಭಾರತ ಎಂದಿಗೂ ರಾಜಿ ಮಾಡಿಕೊಳ್ಳುವುದಿಲ್ಲ. ಇದಕ್ಕಾಗಿ ಯಾವುದೇ ಬೆಲೆ ತೆರಲು ಸಿದ್ಧವಿದೆ, ಟ್ರಂಪ್ ಸುಂಕಾಸ್ತ್ರಕ್ಕೆ ತಾವು ಮಣಿಯುವುದಿಲ್ಲ ಎಂದು ಅವರು ತಿರುಗೇಟು ನೀಡಿದ್ದಾರೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾರತದ ವಿರುದ್ಧ ಈಗಾಗಲೇ ಏರಿಕೆ ಮಾಡಿದ್ದ ಶೇಕಡಾ 25 ರಷ್ಟು ಸುಂಕದ ಜೊತೆಗೆ ಮತ್ತೆ ಶೇಕಡಾ 25 ರಷ್ಟು ಸುಂಕ ವಿಧಿಸುವ ನಿರ್ಧಾರ ಕೈಗೊಂಡ ಒಂದು ದಿನದ ನಂತರ ಪ್ರಧಾನಿ ನರೇಂದ್ರ ಮೋದಿ ಅಮೆರಿಕಾಕ್ಕೆ ಬಲವಾದ ಸಂದೇಶ ರವಾನಿಸಿದ್ದಾರೆ.

ದೆಹಲಿಯಲ್ಲಿ ನಡೆದ ಎಂ.ಎಸ್. ಸ್ವಾಮಿನಾಥನ್ ಶತಮಾನೋತ್ಸವ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ,ದೇಶದ ರೈತರು ಮತ್ತು ಮೀನುಗಾರರ ಹಿತಾಸಕ್ತಿಗಳೊಂದಿಗೆ ಎಂದಿಗೂ ರಾಜಿ ಮಾಡಿಕೊಳ್ಳುವುದಿಲ್ಲ. ಈ ವಿಷಯದಲ್ಲಿ ಯಾರಾದರೂ ಅಡ್ಡಿ ಪಡಿಸಲು ಮುಂದಾದರೆ ಅದಕ್ಕೆ ಅವರು ಬಾರಿ ಬೆಲೆ ತೆರಬೇಕಾಗುತ್ತದೆ ಎಂದು ಅವರು ಕಿಡಿಕಾರಿದ್ದಾರೆ.

ರೈತರ ಕಲ್ಯಾಣ ಮತ್ತು ಅಭಿವೃದ್ದಿಗಾಗಿ ಎಲ್ಲವನ್ನೂ ಮಾಡಲು ಸರ್ಕಾರ ಸಿದ್ದ, "ರೈತರ ಹಿತಾಸಕ್ತಿ ನಮ್ಮ ಪ್ರಮುಖ ಆದ್ಯತೆಯಾಗಿದೆ.ದೇಶದ ರೈತರು, ಜಾನುವಾರು ಮಾಲೀಕರು ಮತ್ತು ಮೀನುಗಾರರ ಹಿತಾಸಕ್ತಿಗಳೊಂದಿಗೆ ಎಂದಿಗೂ ರಾಜಿ ಮಾಡಿಕೊಳ್ಳುವುದಿಲ್ಲ ಎಂದಿದ್ದಾರೆ

ಈ ರೀತಿಯ ನಿರ್ಧಾರ ತೆಗೆದುಕೊಂಡರೆ ಅದರಿಂದ ಆಗುವ ಪರಿಣಾಮಗಳ ಬಗ್ಗೆಯೂ ಗೊತ್ತಿದೆ, ಆದರೂ ತಾವು ಕಠಿಣ ಕ್ರಮ ಕೈಗೊಳ್ಳಲು ಹಿಂಜರಿಯುವುದಿಲ್ಲ ಎಂದಿದ್ದಾರೆ.

ದೇಶದ ರೈತರು, ಮೀನುಗಾರರು ಮತ್ತು ಜಾನುವಾರು ಮಾಲೀಕರ ಹಿತದೃಷ್ಟಿಗೆ ಭಾರತ ಸಿದ್ಧವಾಗಿದೆ" ಎನ್ನುವ ಮೂಲಕ ಭಾರತದ ಮೇಲೆ ಶೇಕಡಾ 25 ರಷ್ಟು ಹೆಚ್ಚುವರಿ ಸುಂಕ ಸೇರಿದಂತೆ ಒಟ್ಟು ಶೇಕಡಾ 50 ರಷ್ಟು ಸುಂಕ ವಿಧಿಸಿರುವ ಅಮೆರಿಕಾ ಅಧ್ಯಕ್ಷ ನಡೆಗೆ ಪರೋಕ್ಷವಾಗಿ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಭಾರತ ಅಮೆರಿಕಕ್ಕೆ ವಿವಿಧ ರೀತಿಯ ಕೃಷಿ ಉತ್ಪನ್ನಗಳನ್ನು ರಫ್ತು ಮಾಡುತ್ತದೆ ಮತ್ತು ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಸುಂಕದ ಹೊರೆ ವಿಧಿಸಿದ್ದಾರೆ. ರೈತರ ವಿಷಯದಲ್ಲಿ ರಾಜೀ ಮಾಡಿಕೊಳ್ಳುವುದಿಲ್ಲ ಎಂದು ಅಬ್ಬರಿಸಿದ್ದಾರೆ

ನವದೆಹಲಿ ರಷ್ಯಾದ ಕಚ್ಚಾ ತೈಲವನ್ನು ಆಮದು ಮಾಡಿಕೊಳ್ಳುವುದನ್ನು ಮುಂದುವರಿಸಿದ್ದಕ್ಕಾಗಿ 'ದಂಡ'ವಾಗಿ ಭಾರತೀಯ ರಫ್ತಿನ ಮೇಲೆ ಶೇಕಡಾ 25 ರಷ್ಟು ಹೆಚ್ಚುವರಿ ಸುಂಕವನ್ನು ಡೊನಾಲ್ಡ್ ಟ್ರಂಪ್ ನಿನ್ನೆ ಘೋಷಿಸಿದ್ದರು.

ಅಮೆರಿಕಕ್ಕೆ ಭಾರತೀಯ ರಫ್ತಿನ ಮೇಲಿನ ಒಟ್ಟು ಸುಂಕಗಳು ಶೇಕಡಾ 50 ಕ್ಕೆ ಏರಿದ ನಂತರ, ರಷ್ಯಾದ ತೈಲ ಆಮದಿನ ಮೇಲೆ ಅಮೆರಿಕ ಭಾರತವನ್ನು ಗುರಿಯಾಗಿಸಿಕೊಂಡಿರುವುದು "ಅನ್ಯಾಯ, ನ್ಯಾಯಸಮ್ಮತವಲ್ಲದ ಮತ್ತು ಅಸಮಂಜಸ" ಎಂದು ವಿದೇಶಾಂಗ ಸಚಿವಾಲಯ ಪ್ರತಿಕ್ರಿಯಿಸಿದೆ.

"ನಮ್ಮ ಆಮದುಗಳು ಮಾರುಕಟ್ಟೆ ಅಂಶಗಳನ್ನು ಆಧರಿಸಿವೆ ಮತ್ತು ಭಾರತದ 1.4 ಶತಕೋಟಿ ಜನರ ಇಂಧನ ಸುರಕ್ಷತೆ ಖಾತರಿಪಡಿಸುವ ಒಟ್ಟಾರೆ ಉದ್ದೇಶದಿಂದ ಮಾಡಲ್ಪಟ್ಟಿವೆ ಎಂಬ ಅಂಶ ಸೇರಿದಂತೆ ಈ ವಿಷಯಗಳ ಬಗ್ಗೆ ನಮ್ಮ ನಿಲುವನ್ನು ಈಗಾಗಲೇ ಸ್ಪಷ್ಟಪಡಿಸಿದ್ದೇವೆ ಎಂದು ತಿಳಿಸಿದೆ.

# ಚಿರತೆಗಳ ದಾಳಿ : 21 ಕುರಿ ಬಲಿ, 9 ಕುರಿಗಳಿಗೆ ಗಾಯ

**ಮಲೇಬೆನ್ನೂರು :** ಹೊಳೆಸಿರಿಗೆರೆ ಕ್ರಾಸ್ ಬಳಿ ಹೊಲದಲ್ಲಿ ಬೀಡು ಬಿಟ್ಟಿದ್ದ ಕುರಿಗಳ ಹಿಂಡಿನ ಮೇಲೆ ಚಿರತೆಗಳು ದಾಳಿ ಮಾಡಿ 21 ಕುರಿಗಳನ್ನು ಬಲಿ ತೆಗೆದುಕೊಂಡ ದಾರುಣ ಘಟನೆ ಮಂಗಳವಾರ ತಡರಾತ್ರಿ ನಡೆದಿದೆ. ಈ ಘಟನೆಯಿಂದಾಗಿ ಹೊಳೆಸಿರಿಗೆರೆ, ಯಲವಟ್ಟಿ ಸೇರಿದಂತೆ ಸುತ್ತಮುತ್ತಲಿನ ಜನ ಭಯಭೀತಿ ಗೊಂಡಿದ್ದಾರೆ.

ಹೊಳೆಸಿರಿಗೆರೆ ಗ್ರಾಮದ ಬೀರಪ್ಪ ಅವರಿಗೆ ಸೇರಿದ ಅಡಿಕೆ ತೋಟದಲ್ಲಿ ಚಿಕ್ಕೋಡಿ ತಾಲ್ಲೂಕಿನ ಸದಲಗ ಗ್ರಾಮದ ಬಿಳಿಕುರಿ ಸೋಮಣ್ಣ ತಮ್ಮ 159 ಕುರಿಗಳ ಹಿಂಡಿನೊಂದಿಗೆ ಬಿಡಾರ ಹಾಕಿದ್ದರು. ಚಿರತೆಗಳು ಕುರಿಗಳ ಮೇಲೆ ದಾಳಿ ಮಾಡಿದ ಸಂದರ್ಭದಲ್ಲಿ ಕುರಿಗಳು ವದರಿದವು. ನಿದ್ರೆಯಲ್ಲಿದ್ದ ನಮಗೆ ಎಚ್ಚರವಾಯಿತು. ನಾವು ಬ್ಯಾಟರಿಗಳನ್ನು ಹಾಕಿದ ತಕ್ಷಣ ಚಿರತೆಗಳು ಓಡಿ ಹೋದವು. ಅಷ್ಟೊತ್ತಿಗೆ 21 ಕುರಿಗಳು ಬಲಿಯಾಗಿ, 9 ಕುರಿಗಳು ಗಾಯಗೊಂಡಿದ್ದವು ಎಂದು ಕುರಿ ಹಿಂಡಿನ ಮಾಲೀಕ ಸೋಮಣ್ಣ ಭಾವುಕರಾಗಿ 'ಜನತಾವಾಣಿ'ಗೆ ತಿಳಿಸಿದರು.



ಬೆಳಿಗ್ಗೆ ವಿಷಯ ತಿಳಿಯುತ್ತಿದಂತೆಯೇ ಕಾಂಗ್ರೆಸ್ ಮುಖಂಡ ನಂದಿಗಾವಿ ಶ್ರೀನಿವಾಸ್, ಬಿಜೆಪಿ ಮುಖಂಡ ಚಂದ್ರಶೇಖರ್ ಪೂಜಾರ್, ಜಿಪಂ ಮಾಜಿ ಸದಸ್ಯ ಬಿ.ಎಂ. ವಾಗೀಶ್ ಸ್ವಾಮಿ ಹಾಗೂ ಹೊಳೆಸಿರಿಗೆರೆ, ಯಲವಟ್ಟಿ, ಕೆ.ಎನ್. ಹಳ್ಳಿ, ಕಮಲಾಪುರ, ಭಾನುವಳ್ಳಿ ಮತ್ತಿತರೆ ಗ್ರಾಮಗಳಿಂದ ನೂರಾರು ಜನ ಸ್ಥಳಕ್ಕೆ ಆಗಮಿಸಿ ಜೀವ ಕಳೆದುಕೊಂಡು ಬಿದ್ದಿದ್ದ ಕುರಿಗಳನ್ನು ನೋಡಿ ಮರುಗಿದರು.

ಈ ವೇಳೆ ಮಾತನಾಡಿದ ಉಪ ವಿಭಾಗಾಧಿಕಾರಿ ಸಂತೋಷ್ ಕುಮಾರ್, ಅರಣ್ಯ ಇಲಾಖೆ, ಕಂದಾಯ ಇಲಾಖೆ ಮತ್ತು ಪಶುಸಂಗೋಪನೆ ಇಲಾಖೆಯಿಂದ ಜಂಟೀ ಸಮೀಕ್ಷೆ ನಡೆಸಿ ಸರ್ಕಾರದ ಮಾರ್ಗ ಸೂಚಿಯಂತೆ ಪರಿಹಾರ ನೀಡಲಾ ಗುವುದೆಂದು ಭರವಸೆ ನೀಡಿ–ದರು.ತಹಶೀಲ್ದಾರ್ ಗುರುಬಸವರಾಜ್, ಉಪ ತಹಸೀಲ್ದಾರ್ ಆರ್. ರವಿ ಸೇರಿದಂತೆ ಅರಣ್ಯ ಇಲಾಖೆ ಮತ್ತು ಪಶು ಇಲಾಖೆಯ ಅಧಿಕಾರಿಗಳು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಎಸಿ ಕಛೇರಿಯ ರಾಘವೇಂದ್ರ, ಹೇಮಂತ್ ಕುಮಾರ್, ಪ್ರಭಾರ ಕಂದಾಯ ನಿರೀಕ್ಷಕ ಅಣ್ಣಪ್ಪ. ಗ್ರಾಮಲೆಕ್ಕಾಧಿಕಾರಿ ಷರೀಫ್ ಈ ಸಂದರ್ಭದಲ್ಲಿ ಹಾಜರಿದ್ದರು.

ಶಾಸಕ ಹರೀಶ್ ಭೇಟಿ : ಬೆಂಗಳೂರಿನಲ್ಲಿದ್ದ ಶಾಸಕ ಬಿ.ಪಿ. ಹರೀಶ್, ಚಿರತೆ ದಾಳಿಯಿಂದ 20 ಕ್ಕೂ ಹೆಚ್ಚು ಕುರಿಗಳ ಮಾರಣ ಹೋಮ ನಡೆದಿರುವ ವಿಷಯ ತಿಳಿದ ತಕ್ಷಣ ಅಲ್ಲಿಂದ ಹೊರಟು ಸಂಜೆ ವೇಳೆಗೆ ಅರಣ್ಯ ಇಲಾಖೆಯ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿ, ಕುರಿ ಹಿಂಡಿನ ಮಾಲೀಕರಿಗೆ ಸಾಂತ್ವನ ಹೇಳಿ ಸರ್ಕಾರದಿಂದ ಪರಿಹಾರ ಕೊಡಿಸುವ ಭರವಸೆ ನೀಡಿ–ದರು. ಈ ಭಾಗದಲ್ಲಿ ಚಿರತೆಗಳು ಇರುವ ಬಗ್ಗೆ ಈ ಹಿಂದೆಯೇ ಪತ್ರಿಕೆಗಳಲ್ಲಿ ವರದಿ ಆಗಿದ್ದರೂ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿರುವ ಬಗ್ಗೆ ಬೇಸರ ವ್ಯಕ್ತಪಡಿಸಿದ ಶಾಸಕ ಹರೀಶ್, ಆದಷ್ಟು ಬೇಗ ಚಿರತೆಗಳನ್ನು ಸೆರೆ ಹಿಡಿಯುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಡಿಎಫ್ಓ ಹರ್ಷವರ್ಧನ್, ಎಸಿಎಫ್ ಭಾಗ್ಯಲಕ್ಷ್ಮೀ, ವಲಯ ಅರಣ್ಯಾಧಿಕಾರಿ ಡಿ.ಎಂ. ಷಣ್ಮುಖ, ಉಪ ವಲಯ ಅರಣ್ಯಾಧಿಕಾರಿ ಹಸನ್ ಬಾಷಾ, ಹೊಳೆಸಿರಿಗೆರೆ ಪಶುವೈದ್ಯಾಧಿಕಾರಿ ಬುಡೇನ್ ಸಾಬ್, ಮುಖಂಡರಾದ ಯಲವಟ್ಟಿ ಚನ್ನಬಸಪ್ಪ, ಹೊಳೆಸಿರಿಗೆರೆ ಶೇಖರಪ್ಪ, ಹನುಮಂತಪ್ಪ, ಮಾಳಗಿ ಪಾಲಾಕ್ಷಪ್ಪ, ಯರೇಸೀಮೆ ಈರಪ್ಪ, ಭಜನಿ ಮಂಜಪ್ಪ ಉಪಸ್ಥಿತರಿದ್ದರು.

## ಧರ್ಮಸ್ಥಳದಲ್ಲಿ ಎರಡು ಗುಂಪುಗಳ ನಡುವೆ ಘರ್ಷಣೆ

# ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು

**ಬೆಂಗಳೂರು:** ಧರ್ಮಸ್ಥಳದ ಬಳಿ ಎರಡು ಗುಂಪುಗಳ ನಡುವಿನ ಘರ್ಷಣೆಗೆ ಕಾರಣರಾದವರ ವಿರುದ್ಧ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಗುರುವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಯಾರೇ ತಪ್ಪು ಮಾಡಿದ್ದರೂ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು' ಎಂದು ಹೇಳಿದರು.

ಧರ್ಮಸ್ಥಳದಲ್ಲಿ ನಡೆದಿದೆ ಎನ್ನಲಾದ ಸಾಮೂಹಿಕ ಅಂತ್ಯಕ್ರಿಯೆ ಪ್ರಕರಣದ ಕುರಿತು ಎಸ್ಐಟಿ ತನಿಖೆ ನಡೆಸುತ್ತಿರುವ ನಡುವೆ, ಬುಧವಾರ ಸಂಜೆ ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳದ ಬಳಿ ವ್ಯಕ್ತಿಯೊಬ್ಬರನ್ನು ಸಂದರ್ಶಿಸುತ್ತಿದ್ದಾಗ, ಕ್ಯಾಮೆರಾಮನ್ ಸೇರಿದಂತೆ ಮೂವರು ಯೂಟ್ಯೂಬ್ ಚಾನೆಲ್‌ಗಳನ್ನು ಪ್ರತಿನಿಧಿಸುವ ನಾಲ್ವರು ವ್ಯಕ್ತಿಗಳ ಮೇಲೆ ಗುಂಪೊಂದು ಹಲ್ಲೆ ನಡೆಸಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಧರ್ಮಸ್ಥಳ ಗ್ರಾಮದ ಪಾಂಗಾಳ ಗ್ರಾಮದ ರಸ್ತೆ ಬಳಿ ಯೂಟ್ಯೂಬರ್‌ಗಳ ಮೇಲೆ ನಡೆದ ಹಲ್ಲೆ ನಂತರ, ಎರಡು ಗುಂಪುಗಳು ಪರಸ್ಪರ ನಿಂದನೆ ಮತ್ತು ಕಲ್ಲು ತೂರಾಟ ನಡೆಸಲು ಪ್ರಾರಂಭಿಸಿದವು. ಪೊಲೀಸರು ಗುಂಪನ್ನು ಚದುರಿಸಲು ಪ್ರಯತ್ನಿಸಿದರು.



ಆದರೆ, ಪರಿಸ್ಥಿತಿ ಉಲ್ಬಣಗೊಳ್ಳುವ ಪರಿಸ್ಥಿತಿ ಉಂಟಾದಾಗ, ಗುಂಪನ್ನು ಚದುರಿಸಲು ಲಘು ಲಾಠಿ ಪ್ರಹಾರ ನಡೆಸಿದರು.

ಧರ್ಮಸ್ಥಳ ಪೊಲೀಸ್ ಠಾಣೆಯ ಮುಂದೆ ರಾತ್ರಿ ವೇಳೆ ಗುಂಪೊಂದು 'ಪವಿತ್ರ ಸ್ಥಳದ ಪ್ರತಿಷ್ಠೆಗೆ ಕಳಂಕ ತರುವ' ಜನರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಪ್ರತಿಭಟನೆ ನಡೆಸಿತು.

**ದೂರುಗಳು, ಪ್ರತಿದೂರುಗಳು ದಾಖಲು :** ಬುಧವಾರ ನಡೆದ ಘಟನೆಗೆ ಸಂಬಂಧಿಸಿದಂತೆ ದೂರುಗಳು ಮತ್ತು ಪ್ರತಿದೂರುಗಳು ದಾಖಲಾಗಿದ್ದು, ಪೊಲೀಸರು ಕೂಲಂಕಷವಾಗಿ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ ಎಂದು ಗೃಹ ಸಚಿವ ಜಿ ಪರಮೇಶ್ವರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳದ ಬಳಿ ಎರಡು ಗುಂಪುಗಳ ನಡುವೆ ಘರ್ಷಣೆ ನಡೆದಿರುವ ಬಗ್ಗೆ ಮಾಹಿತಿ ಸಿಕ್ಕಿದ್ದು, ಅದು ಏಕೆ ಸಂಭವಿಸಿತು, ಯಾರು ಹೊಣೆಗಾರರು ಮತ್ತು ಅವರ ಉದ್ದೇಶವೇನು ಎಂಬುದರ ಕುರಿತು ವಿಚಾರಣೆ ನಡೆಸಿ ವರದಿ ಸಲ್ಲಿಸುವಂತೆ ಕೇಳಿದ್ದೇನೆ. ಅಲ್ಲಿ ಯಾವುದೋ ಸಂಘರ್ಷ ನಡೆಯುತ್ತಿರುವಂತೆ ತೋರುತ್ತಿದೆ. ಅದು ಏಕೆ ನಡೆಯುತ್ತಿದೆ? ನಮಗೆ ತಿಳಿದಿಲ್ಲ ಎಂದು ಹೇಳಿದರು.

ಸರ್ಕಾರವು ಎಚ್ಚರಿಕೆಯಿಂದ ಪರಿಶೀಲಿಸಿದ ನಂತರ, ಬೇಡಿಕೆಗಳನ್ನು ಅನುಸರಿಸಿ, 'ಸಾಮೂಹಿಕ ಅಂತ್ಯಕ್ರಿಯೆ' ಆರೋಪದ ಕುರಿತು ತನಿಖೆ ಮಾಡಲು ವಿಶೇಷ ತನಿಖಾ ತಂಡವನ್ನು (SIT) ರಚಿಸಲಾಗಿದೆ. ಮ್ಯಾಜಿಸ್ಟ್ರೇಟ್ ಸೂಚನೆಗಳೂ ಇವೆ ಎಂದು ಹೇಳಿದರು.

ಸಾಕ್ಷಿ–ದೂರುದಾರ 13 ಸ್ಥಳಗಳನ್ನು ಗುರುತಿಸಿದ್ದು, ಆ ಸ್ಥಳಗಳನ್ನು ಅಗೆಯುವ ಕಾರ್ಯವನ್ನು ಖಖಖಿ ನಡೆಸಿದೆ.

ಆರನೇ ಸ್ಥಳದಲ್ಲಿ ಪುರುಷನ ಅಸ್ಥಿಪಂಜರದ ಅವಶೇಷಗಳು ಪತ್ತೆಯಾಗಿವೆ ಮತ್ತು ಅದು ಈಗಾಗಲೇ ಮಾಧ್ಯಮಗಳಲ್ಲಿ ವರದಿಯಾಗಿದೆ. ಗುಡ್ಡದ ಬಳಿ ಬೇರೆಡೆ ಕೆಲವು ಅಸ್ಥಿಪಂಜರದ ಅವಶೇಷಗಳು ಕಂಡುಬಂದಿರುವುದನ್ನು ಹೊರತುಪಡಿಸಿ, ಬೇರೆ ಸ್ಥಳಗಳಲ್ಲಿ ಏನೂ ಕಂಡುಬಂದಿಲ್ಲ. ಆ ಎಲ್ಲ ಅವಶೇಷಗಳನ್ನು ಎಸ್ಐಟಿಯು FSL ಗೆ ಕಳುಹಿಸಿದೆ' ಎಂದು ಅವರು ಹೇಳಿದರು.

ನಿನ್ನೆ ಧರ್ಮಸ್ಥಳದ ಬಳಿ ಎರಡು ಗುಂಪುಗಳ ನಡುವೆ ಘರ್ಷಣೆ ನಡೆದಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಎರಡೂ ಕಡೆಯಿಂದ ದೂರುಗಳು ಮತ್ತು ಪ್ರತಿದೂರುಗಳು ಬಂದಿವೆ. ಪ್ರಕರಣಗಳನ್ನು ದಾಖಲಿಸಲಾಗುವುದು, ವಿಚಾರಣೆ ನಡೆಸಲಾಗುವುದು ಮತ್ತು ಅದಕ್ಕೆ ಅನುಗುಣವಾಗಿ ಕ್ರಮ ಕೈಗೊಳ್ಳಲಾಗುವುದು' ಎಂದರು.

ತನಿಖೆ ನಡೆಯುತ್ತಿರುವಾಗ ಪ್ರಕರಣ–ಕ್ಕೆ ಸಂಬಂಧಿಸಿದಂತೆ ಸುಳ್ಳು ಮಾಹಿತಿ ಹರಡಲಾಗುತ್ತಿದೆ ಮತ್ತು ಪ್ರಚೋದನಕಾರಿ ಹೇಳಿಕೆಗಳನ್ನು ನೀಡಲಾಗುತ್ತಿದೆ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಗೃಹ ಸಚಿವರು, ಇತರರು ಏನು ಹೇಳುತ್ತಾರೆ ಎಂಬುದು ಮುಖ್ಯವಲ್ಲ. ಮುಖ್ಯವಾದ ವಿಷಯವೆಂದರೆ ಎಸ್ಐಟಿ ತಾಂತ್ರಿಕವಾಗಿ ತನಿಖೆ ನಡೆಸಿ ಸತ್ಯವನ್ನು ಹೊರತರಬೇಕು ಮತ್ತು ಅವರು ತಮ್ಮ ಕೆಲಸವನ್ನು ಮಾಡುತ್ತಿದ್ದಾರೆ. ತನಿಖೆಯ ಮುಂದಿನ ಹಾದಿಯನ್ನು ಎಸ್ಐಟಿ ನಿರ್ಧರಿಸುತ್ತದೆ ಮತ್ತು ಸರ್ಕಾರ ಮಧ್ಯಪ್ರವೇಶಿಸುವುದಿಲ್ಲ ಮತ್ತು ಯಾವುದೇ ಸೂಚನೆಗಳನ್ನು ನೀಡುವುದಿಲ್ಲ ಎಂದು ತಿಳಿಸಿದರು.

# ಕ್ರಿಕೆಟ್ ಮ್ಯಾಚ್ ಕೆಡಿಟ್ ತಗೋಳಕೆ ಮುಂದಾಗೋರು ಈಗ ಮೆಟ್ರೋ ಕ್ರೆಡಿಟ್‌ಗೆ ಬರದೇ ಇರ್ತಾರೆ? : ಸಂಸದ ತೇಜಸ್ವಿ ಸೂರ್ಯ




**ಬೆಂಗಳೂರು:** ಬಹು ನಿರೀಕ್ಷಿತ ನಮ್ಮ ಮೆಟ್ರೋ ಹಳದಿ ಮಾರ್ಗ ಉದ್ಘಾಟನೆಗೆ ಸಜ್ಜಾಗಿರುವಂತೆಯೇ ಇದರ ಕ್ರೆಡಿಟ್ ವಿಚಾರದಲ್ಲಿ ಇದೀಗ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದ ನಡುವೆ ಜಟಾಪಟಿ ಶುರುವಾಗಿದೆ.

ಮಂಗಳವಾರ ಹಳದಿ ಮಾರ್ಗದಲ್ಲಿ ಸಂಚರಿಸಿ ಪರಿಶೀಲನೆ ನಡೆಸಿದ್ದ ಡಿಸಿಎಂ ಡಿಕೆ ಶಿವಕುಮಾರ್ ಇದು ಕೇವಲ ಕೇಂದ್ರ ಸರ್ಕಾರದ ಯೋಜನೆಯಲ್ಲ. ಕೇಂದ್ರ ಹಾಗೂ ರಾಜ್ಯ ಸರ್ಕಾರ ಎರಡೂ ಶೇ.50 ರಷ್ಟು ಪಾಲನ್ನು ಹೊಂದಿವೆ. ಮುಖ್ಯಮಂತ್ರಿಯವರು ಹಾಗೂ ನಾನು ಉದ್ಘಾಟನೆ ಮಾಡಿ ಎಂದು ಪ್ರಧಾನಿಗಳ ಬಳಿ ಮನವಿ ಮಾಡಿದ್ದೆವು. ಈಗ ಸಮಯ ನೀಡಿದ್ದಾರೆ ಎಂದು ಹೇಳಿದ್ದರು.

ಈ ನಡುವೆ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಂಸದ ತೇಜಸ್ವಿ ಸೂರ್ಯ, ಬೆಂಗಳೂರಿನ ಮೆಟ್ರೋ ಛಿಂಟಿಜಛಿಣುತುಣಥಿ 100 ಕಿ.ಮೀ ಆಗಿದೆ. ಮೋದಿ ಪ್ರಧಾನಿ ಆಗುವ ಮುನ್ನ 7 ಕಿ.ಮೀ ಇತ್ತು. ಕಳೆದ ಎರಡೂವರೆ ವರ್ಷದಲ್ಲಿ ಈ ಸರ್ಕಾರ ಹಳದಿ ಮೆಟ್ರೋ ಮಾರ್ಗದ ಬಗ್ಗೆ ತಲೆ ಕೆಡಿಸಿಕೊಂಡಿರಲಿಲ್ಲ ಎಂದು ಹೇಳಿದರು.

2018ರಲ್ಲಿ ಹಳದಿ ಮಾರ್ಗದ ಯೋಜನೆ ಪ್ರಾರಂಭವಾಯಿತು. ಭೂಸ್ವಾಧೀನ ಪ್ರಕ್ರಿಯೆಯಲ್ಲಿ ತೊಂದರೆ ಆಯ್ತು. ಆದ್ರೆ ಆಗ ರಾಜ್ಯ ಸರ್ಕಾರ ಸಹಾಯಕ್ಕೆ ಬರಲಿಲ್ಲ. ಕಾಂಗ್ರೆಸ್ ಸರ್ಕಾರ ಬಂದ ಮೇಲೆ ಃಒಖಅಐ ಗೆ ಪೂರ್ಣಾವಧಿಯ ವ್ಯವಸ್ಥಾಪಕ ನಿರ್ದೇಶಕರನ್ನು ನೇಮಕ ಮಾಡಿರಲಿಲ್ಲ. ವೀಸಾ ಸಮಸ್ಯೆ ಆಯ್ತು ಇವ್ರು ಯಾರೂ ಒಂದು ದಿನವೂ ಮಾತನಾಡಿಲ್ಲ. ಕ್ರಿಕೆಟ್ ಮ್ಯಾಚ್ ಛಿಡಿಜಜಟಣ ತಗೋಳೋಕೆ ಮುಂದಾಗೋರು ಈಗ ಮೆಟ್ರೋ ಕ್ರೆಡಿಟ್ ತಗೋಳೋಕೆ ಬರದೇ ಇರ್ತಾರ? ಎಂದು ಟೀಕಾ ಪ್ರಹಾರ ನಡೆಸಿದರು.

# ನನ್ನ ರೇಷ್ಮೆ ನನ್ನ ಹೆಮ್ಮೆ ಅಭಿಯಾನ: ರೇಷ್ಮೆ ಬೆಳೆಗಾರರಿಗೆ ತಂತ್ರಜ್ಞಾನದ ಆಭಿಯಾನ

**ದಾವಣಗೆರೆ :** ನನ್ನ ರೇಷ್ಮೆ ನನ್ನ ಹೆಮ್ಮೆ ಎಂಬ ಮಹಾ ತಂತ್ರಜ್ಞಾನ ಹಂಚಿಕೆ ಅಭಿಯಾನವನ್ನು ಕೇಂದ್ರ ರೇಷ್ಮೆ ಮಂಡಳಿಯಿಂದ ದೇಶವ್ಯಾಪ್ತಿ ಅಭಿಯಾನ ಆರಂಭಿಸಿದೆ ಎಂದು ರೇಷ್ಮೆ ಇಲಾಖೆ ಉಪನಿರ್ದೇಶಕ ಪಿ.ಎಲ್.ಚಂದ್ರಪ್ಪ ತಿಳಿಸಿದ್ದಾರೆ.

ಕೇಂದ್ರ ರೇಷ್ಮೆ ಮಂಡಳಿಯಿಂದ ಅಭಿವೃದ್ಧಿಪಡಿಸಲಾದ ಅತ್ಯಾಧುನಿಕ ತಂತ್ರಜ್ಞಾನಗಳು ಲಭ್ಯವಿದ್ದರೂ ಸಹ, ರೇಷ್ಮೆ ಕೃಷಿಯಲ್ಲಿ ನಿರತರಾಗಿರುವ ರೈತರು ಇನ್ನೂ ಹಳೆಯ ಪದ್ಧತಿಗಳ ಮೇಲೆ ಅವಲಂಭಿತರಾಗಿದ್ದಾರೆ. ಇದಕ್ಕೆ ಪ್ರಮುಖ ಕಾರಣ ತಂತ್ರಜ್ಞಾನಗಳ ಬಗ್ಗೆ ಪರಿಚಯದ ಕೊರತೆ. ಈ ಅಂತರವನ್ನು ದೂರ ಮಾಡುವ ಉದ್ದೇಶದಿಂದ ಈ ಅಭಿಯಾನದಡಿಯಲ್ಲಿ ಕೇಂದ್ರ ರೇಷ್ಮೆ ಸಂಶೋಧನಾ ಮತ್ತು ತರಬೇತಿ ಸಂಸ್ಥೆ, ಮೈಸೂರಿನಲ್ಲಿ ಅಭಿವೃದ್ಧಿಪಡಿಸಲಾದ ನೂತನ ತಂತ್ರಜ್ಞಾನಗಳನ್ನು ಫಲಪ್ರದವಾಗಿ ಅನುಷ್ಠಾನಗೊಳಿಸಲು ದಾವಣಗೆರೆ ಜಿಲ್ಲೆಯನ್ನು ಆಯ್ಕೆ ಮಾಡಲಾಗಿದೆ. ಸಿಎಸ್‌ಆರ್‌ಟಿಐ ವಿಜ್ಞಾನಿಗಳು ಮತ್ತು ರಾಜ್ಯ ರೇಷ್ಮೆ ಇಲಾಖೆಯ ಸಹಯೋಗದೊಂದಿಗೆ ಈ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ. ವಿಜ್ಞಾನಿ ಡಾ. ಮಂಜಪ್ಪ ಅವರನ್ನು ದಾವಣಗೆರೆ ಜಿಲ್ಲಾ ಸಂಯೋಜಕರಾಗಿ ನೇಮಕ ಮಾಡಲಾಗಿದೆ. ಅವರು ಜಿಲ್ಲೆಯಲ್ಲಿ ಎಂಟು ತಂತ್ರಜ್ಞಾನ ವಿಸ್ತರಣಾ ಕಾರ್ಯಕ್ರಮಗಳನ್ನು ನಡೆಸಲಿದ್ದಾರೆ.

ಈ ಚಟುವಟಿಕೆಯ ಭಾಗವಾಗಿ, ಆಗಸ್ಟ್ 5 ರಂದು ದಾವಣಗೆರೆ ತಾಲ್ಲೂಕಿನ ಕರಿಲಕ್ಕೆನಹಳ್ಳಿಯಲ್ಲಿ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. 43 ರೇಷ್ಮೆ ಬೆಳೆಗಾರರಿಗೆ ನೂತನ ತಂತ್ರಜ್ಞಾನಗಳು, ಉತ್ತಮ ಗುಣಮಟ್ಟದ ಮಲ್ಬರಿ ಸೊಪ್ಪನ್ನು ಉತ್ಪಾದಿಸಲು ರೈತರು ಅನುಸರಿಸಬೇಕಾದ ತಂತ್ರಜ್ಞಾನಗಳಾದ ಮಣ್ಣಿನ ಪರೀಕ್ಷೆ, ಹನಿ ನೀರಾವರಿ, ಸಾವಯವ ಗೊಬ್ಬರಗಳ ಬಳಕೆ, ಹೊಸ ಹಿಪ್ಪುನೇರಳೆ ತಳಿ, ಹಿಪ್ಪುನೇರಳೆ ಬೇಸಾಯ ಪದ್ಧತಿ, ಹಿಪ್ಪುನೇರಳೆಗೆ ಮತ್ತು ರೇಷ್ಮೆ ಹುಳುವಿಗೆ ತಗುಲುವ ಪೀಡೆಗಳು ಮತ್ತು ರೋಗಗಳು, ಅವುಗಳ ನಿರ್ವಹಣೆ ವಿಷಯಗಳ ಕುರಿತು ಮಾಹಿತಿ ನೀಡಲಾಯಿತು.

# ಶಿಕ್ಷಣದ ಜತೆಗೆ ಸಂಗೀತ ನೃತ್ಯದ ಹವ್ಯಾಸ ಬೆಳಸಿಕೊಳ್ಳಲು ಕರೆ



**ಚಿತ್ರದುರ್ಗ :** ಶಿಕ್ಷಣದ ಜತೆಗೆ ಮಕ್ಕಳು ಸಂಗೀತ ನೃತ್ಯ ಅಭಿರುಚಿಯನ್ನು ಬೆಳಸಿಕೊಳ್ಳಬೇಕೆಂದು ಶ್ರೀ ಬಸವೇಶ್ವರ ಪ್ರೌಢಶಾಲಾ ಮುಖ್ಯ ಶಿಕ್ಷಕಿ ಸುಧಾ ನಾಯಕ ತಿಳಿಸಿದರು.

ತಾಲ್ಲೂಕಿನ ಭರಮಸಾಗರ ಹೋಬಳಿಯ ಚಿಕ್ಕಬೆನ್ನೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅಕ್ಷರ ಗ್ರಾಮೀಣ ವಿಕಾಸ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪ್ರಾಯೋಜಿತ ಶ್ರಾವಣ ಸಂಭ್ರಮ ಕಾರ್ಯಕ್ರಮವನ್ನು ಬುಧವಾರ ಉದ್ಘಾಟಿಸಿ ಮಾತನಾಡಿದರು.

ಬಾಲ್ಯದಲ್ಲಿ ಮಕ್ಕಳಿಗೆ ಸಂಗೀತವನ್ನು ಕಲಿತರೆ ಮುಂದೆ ಪ್ರತಿಭಾವಂತರಾಗಿ ಬೆಳೆಯಲು ಸಾಧ್ಯ ಹೀಗಾಗಿ ವ್ಯಾಸಂಗದ ಜತೆ ಜತೆಗೆ ಕಲೆಗಳಲ್ಲಿ ಸಹ ಪಾಲ್ಗೊಳ್ಳಬೇಕೆಂದು ತಿಳಿಸಿದರು. ಗಾಯಕ ಡಿ.ಓ. ಮುರಾರ್ಜಿ ಮಾತನಾಡಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಲೆ ಮತ್ತು ಸಂಸ್ಕೃತಿ ಉಳಿವಿಗೆ ಕಾರ್ಯ ನಿರ್ವಹಿಸುತ್ತಿದೆ ಕಲಾವಿದರಿಗೆ ವೇದಿಕೆ ಕಲ್ಪಿಸುವ ಜತೆಗೆ ಸಾಮಾಜಿಕವಾಗಿ ಅಕ್ಷರ ಗ್ರಾಮೀಣ ವಿಕಾಸ ಸಂಸ್ಥೆ ಕಳೆದ ಹದಿನಾರು ವರ್ಷಗಳಿಂದ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದರು.

ಕಲಾವಿದರಾದ ಸಿ.ಕೆ. ಗೀತಾ ಮತ್ತು ಸಂಗಡಿಗರು ಸುಗಮ ಸಂಗೀತ ಹಾಗೂ ಶುಭ ಪಿ. ಮತ್ತು ತಂಡದವರು ಸಮೂಹ ನೃತ್ಯ ಕಾರ್ಯಕ್ರಮ ನಡೆಸಿಕೊಟ್ಟರು.

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಖ್ಯ ಶಿಕ್ಷಕ ಷಡಾಕ್ಷರಯ್ಯ ಅಧ್ಯಕ್ಷತೆ ವಹಿಸಿದ್ದರು. ಕ್ಯಾಷಿಯೋ ವಾದಕ ಚನ್ನಬಸಪ್ಪ, ತಬಲ ವಾದಕ ಜಯಣ್ಣ, ಗಾಯಕ ಭಟ್ರಹಳ್ಳಿ ಧನಂಜಯ, ಪ್ರೌಢಶಾಲಾ ಶಿಕ್ಷಕರಾದ ಎನ್.ಹೆಚ್. ಕರಿಯಪ್ಪ, ಗಣೇಶ್ ರಾಯ್ಕರ್, ಮೋನಿಕಾ, ತನುಜ, ಶ್ರೀಧರ್ ನಾಯ್ಕ ಪ್ರಾಥಮಿಕ ಶಾಲಾ ಶಿಕ್ಷಕರಾದ ಶಾರದಾ ಜೆ.ಸಿ, ಮಂಜುಳಾ, ಶೃತಿ ಬಿ.ಕೆ. ಸರೋಜ, ಸಾಮಾಜಿಕ ಕಾರ್ಯಕರ್ತೆ ಮೇಘನಾ, ಎಸ್.ಡಿ.ಎಂ.ಸಿ ಉಪಾಧ್ಯಕ್ಷೆ ಇಂದಿರಮ್ಮ ಉಪಸ್ಥಿತರಿದ್ದರು.

# ಹಾಸ್ಟೆಲ್‌ನಲ್ಲಿ ಅವ್ಯವಸ್ಥೆ : ಅಧಿಕಾರಿಗಳಿಂದ ಪರಿಶೀಲನೆ



**ಹರಿಹರ:** ನಗರದ ಜೆ.ಸಿ.ಬಡಾವಣೆಯಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕಿಯರ ಹಾಸ್ಟೆಲ್‌ಗೆ ಬುಧವಾರ ಭೇಟಿ ನೀಡಿದ್ದ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಅಧಿಕಾರಿಗಳ ಮುಂದೆ ವಿದ್ಯಾರ್ಥಿನಿಯರು ಹಾಸ್ಟೆಲ್‌ನ ಅವ್ಯವಸ್ಥೆಯ ಅನಾವರಣ ಮಾಡಿದರು.

ಹಾಸ್ಟೆಲ್‌ನಲ್ಲಿ ಹುಳ ಭರಿತ ಆಹಾರ ವಿತರಣೆ ಮಾಡಿದ್ದಾರೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಆರೋಪದ ಹಿನ್ನೆಲೆಯಲ್ಲಿ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಇನ್ಸ್‌ಪೆಕ್ಟರ್ ಮೇಘರಾಜ್, ಸಬ್ ಇನ್ಸ್‌ಪೆಕ್ಟರ್ ಸಂಜೀವ್ ಕುಮಾರ್ ಸಂಜೆ ಭೇಟಿ ನೀಡಿದ್ದರು.

ವಿದ್ಯಾರ್ಥಿನಿಯರ ಸಭೆಯಲ್ಲಿ ಮಾತನಾಡಿದ ಮೇಘರಾಜ್ ಅವರು, ಹಾಸ್ಟೆಲ್‌ನಲ್ಲಿರುವ ಲೋಪಗಳ ಬಗ್ಗೆ ನಿರ್ಭಯವಾಗಿ ಮಾಹಿತಿ ನೀಡಿರಿ ಎಂದಾಗ, ಒಬ್ಬೊಬ್ಬರೆ ವಿದ್ಯಾರ್ಥಿನಿಯರು ತಾವು ಅನುಭವಿಸುತ್ತಿರುವ ಸಂಕಷ್ಟಗಳನ್ನು ಎಳೆ, ಎಳೆಯಾಗಿ ಹೇಳಿಕೊಂಡರು.

ಒಬ್ಬ ವಿದ್ಯಾರ್ಥಿನಿ ಮಾತನಾಡಿ, ಕಳೆದ ವಾರದ ಶನಿವಾರ ಮಾಡಿಟ್ಟಿದ್ದ ವಗ್ಗರಣೆಯನ್ನು ಬುಧವಾರದ ಊಟ ತಯಾರಿಕೆಗೆ ಬಳಿಸಿದ್ದಾರೆಂದರೆ, ಇನ್ನೊಬ್ಬ ವಿದ್ಯಾರ್ಥಿನಿ ಮಾತನಾಡಿ, ಹುಳ ಇದ್ದ ಅನ್ನ ನಮಗೆ ನೀಡಿದ್ದು ನಿಜ, ಡಿಎಸ್‌ಎಸ್‌ನವರು ಬಂದು ಹೋದ ನಂತರ ಹುಳ ಇಲ್ಲದ ಅಕ್ಕಿಯ ಊಟ ನೀಡುತ್ತಿದ್ದಾರೆಂದರು.

ಉಳಿದಂತೆ ಹಾಸ್ಟೆಲ್‌ನಲ್ಲಿ ತಾವು ಎದುರಿಸುತ್ತಿರುವ ವಿವಿಧ ಸಮಸ್ಯೆಗಳನ್ನು ವಿದ್ಯಾರ್ಥಿನಿಯರು ಹೇಳಿಕೊಂಡರು. ನಂತರ ಮಾತನಾಡಿದ ಮೇಘರಾಜ್, ಹಾಸ್ಟೆಲ್‌ನಲ್ಲಿ ಏನೆ ಸಮಸ್ಯೆ ಇದ್ದರೂ ನಮಗೆ ತಿಳಿಸಿರಿ ಎಂದು ತಮ್ಮ ಮೊ.ಫೋನ್ ನಂ. ನೀಡಿದರು.

ನಂತರ ಕೊಠಡಿಗಳಲ್ಲಿ ಸಂಚರಿಸಿದ ಅವರು, ಬೆಡ್‌ಶೀಟ್ ಹಾಗು ಹಾಸಿಗೆಗಳು ಕೊಳಕಾಗಿವೆ, ಇಂತಹ ಹಾಸಿಗೆಗಳನ್ನು ಬಳಸಿದರೆ ಕಾಯಿಲೆ ಪೀಡಿತರಾಗುತ್ತಾರೆ. ಹಾಸಿಗೆ ಸ್ವಚ್ಛವಾಗಿರುವಂತೆ ನೋಡಿಕೊಳ್ಳಿ, ಗುಣಮಟ್ಟದ ಊಟ ಸರಬರಾಜು ಮಾಡಿರಿ, ಇಲ್ಲಿನ ಲೋಪಗಳ ಕುರಿತು ನಿರ್ದೇಶನಾಲಯದ ಹಿರಿಯ ಅಧಿಕಾರಿಗಳಿಗೆ ವರದಿ ನೀಡುವುದಾಗಿ ಹಾಸ್ಟೆಲ್ ಸಿಬ್ಬಂದಿಗೆ ತಿಳಿಸಿದರು.

**ಲೋಕಾಯುಕ್ತ ಡಿವೈಎಸ್‌ಪಿ ಭೇಟಿ:** ಬುಧವಾರ ಬೆಳಿಗ್ಗೆ ಲೋಕಾಯುಕ್ತ ಡಿವೈಎಸ್‌ಪಿ ಕಲಾವತಿ ನೇತೃತ್ವದ ತಂಡವು ಭೇಟಿ ನೀಡಿ ಹಾಸ್ಟೆಲ್‌ನ ಸ್ಥಿತಿಗತಿಗಳನ್ನು ಪರಿಶೀಲಿಸಿ, ಸಿಬ್ಬಂದಿಗಳಿಂದ ಮಾಹಿತಿ ಪಡೆದರು.

ದಾಸ್ತಾನು ಕೊಠಡಿಗೆ ತೆರಳಿ ಅಕ್ಕಿಯನ್ನು ಪರಿಶೀಲಿಸಿದಾಗ ಅಕ್ಕಿಯಲ್ಲಿ ಹುಳ ಹಾಗೂ ಕಸವನ್ನು ಕಂಡು, ಈ ಅಕ್ಕಿಯನ್ನು ಅಡುಗ–'ಗೆ ಬಳಸಬೇಡಿ, ಬೇರೆ ಅಕ್ಕಿ ತರಿಸಿ ಬಳಸಿ, ಸ್ವಚ್ಛತೆಗೆ ಗಮನ ಕೊಡಿ, ಇಲ್ಲಿನ ಸಮಸ್ಯೆಗಳ ಕುರಿತು ಹಿರಿಯ ಅಧಿಕಾರಿಗಳಿಗೆ ವರದಿ ನೀಡುವುದಾಗಿ ಕಲಾವತಿ ತಿಳಿಸಿದರು.

ಹಾಸ್ಟೆಲ್ ಕಟ್ಟಡ ಶಿಥಿಲಗೊಂಡಿದೆ, 190 ವಿದ್ಯಾರ್ಥಿನಿಯರಿದ್ದು, ಕೂಡಲೆ ಕಟ್ಟಡ ದುರಸ್ತಿ ಮಾಡಿಸಿ ಅಥವಾ ಬೇರೆಡೆಗಾದರೂ ಸ್ಥಳಾಂತರಿಸಿ ಎಂದು ಲೋಕಾಯುಕ್ತ ಪಿಎಸ್‌ಐ ಗುರುಬಸವರಾಜ್ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಹನುಮಂತಪ್ಪನವರಿಗೆ ಸೂಚಿಸಿದರು.

ಹನುಮಂತಪ್ಪ ಮಾತನಾಡಿ, ಎಪಿಎಂಸಿ ಆವರಣದಲ್ಲಿ ಕೆಲವು ಕಟ್ಟಡ ಗಳಿದ್ದು, ಅಲ್ಲಿಗೆ ಈ ಹಾಸ್ಟೆಲ್ ಸ್ಥಳಾಂತ ರಿಸಲು ಪರಿಶೀಲಿಸುತ್ತಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪ್ರೊ.ಬಿ.ಕೃಷ್ಣಪ್ಪ ಸ್ಥಾಪಿತ) ತಾಲ್ಲೂಕು ಸಂಚಾಲಕ ಪಿ.ಜೆ.ಮಹಾಂತೇಶ್, ಸಾಮಾಜಿಕ ಕಾರ್ಯಕರ್ತ ಬಿ.ಮಗ್ದುಮ್ ಹಾಗೂ ಇತರರಿದ್ದರು.

## ಭೂಮಿ ನೀಡದ ರಾಜ್ಯ ಸರ್ಕಾರ

# ಶಿವಮೊಗ್ಗ–ಹರಿಹರ ನಡುವಿನ ರೈಲ್ವೆ ಯೋಜನೆ ಸ್ಥಗಿತ..!

**ನವದೆಹಲಿ:** ಕರ್ನಾಟಕದ ಆಡಳಿತಾರೂಢ ಕಾಂಗ್ರೆಸ್ ಸರ್ಕಾರವು ಉಚಿತವಾಗಿ ಭೂಮಿ ನೀಡಲು ಹಾಗೂ ಯೋಜನಾ ವೆಚ್ಚದ ಶೇ 50:50 ವೆಚ್ಚ ಭರಿಸಲು ನಿರಾಕರಿಸಿದ ಕಾರಣಕ್ಕೆ ಶಿವಮೊಗ್ಗ–ಹರಿಹರ ನಡುವಿನ ರೈಲ್ವೆ ಯೋಜನೆಯನ್ನು ಸ್ಥಗಿತಗೊಳಿಸಲಾಗಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಹೇಳಿದ್ದಾರೆ.

ಲೋಕಸಭೆಯಲ್ಲಿ ಪ್ರಶ್ನೋತ್ತರ ಅವಧಿಯಲ್ಲಿ ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಕೇಳಿರುವ ಪ್ರಶ್ನೆಗೆ ಸಚಿವರು ಉತ್ತರ ನೀಡಿದರು.

ಕರ್ನಾಟಕದ ರೈಲ್ವೇ ಯೋಜನೆಗಳಿಗೆ ಅಗತ್ಯವಿರುವ ಒಟ್ಟು 8,969 ಹೆಕ್ಟೇರ್ ಭೂಮಿಯಲ್ಲಿ ಕೇವಲ 5,657 ಹೆಕ್ಟೇರ್ (ಶೇ.63) ಭೂಮಿಯನ್ನು ಮಾತ್ರ ಸ್ವಾಧೀನಪಡಿಸಿಕೊಳ್ಳಲಾಗಿದೆ. ಯೋಜನೆಗಳಿಗೆ ಒಟ್ಟು 3,312 ಹೆಕ್ಟೇರ್ ಭೂಮಿಯನ್ನು ಇನ್ನೂ ಸ್ವಾಧೀನಪಡಿಸಿಕೊಳ್ಳಬೇಕಾಗಿದೆ ಎಂದು ಹೇಳಿದರು.

ರಾಜ್ಯ ಸರಕಾರ 832 ಕೋಟಿ ವೆಚ್ಚದಲ್ಲಿ ಭೂಮಿ ವಶಪಡಿಸಿಕೊಳ್ಳಬೇಕಿತ್ತು. ಆದ–ರೆ, ಸರಕಾರ ಅಸಮರ್ಥತೆ ತೋರಿದ್ದರಿಂದ ಯೋಜನೆ ಸ್ಥಗಿತಗೊಂಡಿದೆ. ಶಿವಮೊಗ್ಗ–ರಾಣೆಬೆನ್ನೂರು, ಧಾರವಾಡ, ವೈಟ್‌ಫೀಲ್ಡ್–ಕೋಲಾರ, ಹಾಸನ–ಬೇಲೂರು ಮಾರ್ಗಗಳು ಸಹ ಸ್ಥಗಿತಗೊಂಡಿವೆ ಎಂದು ತಿಳಿಸಿದರು.

ಹರಿಹರ –ಶಿವಮೊಗ್ಗ (79 ಕಿಮೀ) ರೈಲು ಯೋಜನೆಯನ್ನು ಶೇ.50ರ ಅನುಪಾತದ ಯೋಜನೆಯಡಿ ಮಂಜೂರು ಮಾಡಲಾಗಿತ್ತು. ರಾಜ್ಯ ಸರಕಾರ 832 ಕೋಟಿ ವೆಚ್ಚದಲ್ಲಿ ಯೋಜನೆಗೆ ಬೇಕಾದ



ಭೂಮಿಯನ್ನು ವಶಪಡಿಸಿಕೊಂಡು ಒದಗಿಸಬೇಕಿದೆ. ಒಟ್ಟು 488 ಹೆ. ಭೂಮಿಯನ್ನು ಒದಗಿಸಲು ರೈಲ್ವೆ ಇಲಾಖೆ ಕರ್ನಾಟಕ ಸರಕಾರವನ್ನು ಕೋರಿತ್ತು. ಆದರೆ, ಈ ವೆಚ್ಚವನ್ನು ಹಂಚಿಕೊಳ್ಳಲು ಮತ್ತು ಉಚಿತವಾಗಿ ಭೂಮಿಯನ್ನು ಒದಗಿಸಲು ಕರ್ನಾಟಕ ಸರಕಾರ ಅಸಮರ್ಥತೆ ತೋರಿಸಿದೆ, ಈ ಕಾರಣಕ್ಕೆ ಯೋಜನೆ ಸ್ಥಗಿತಗೊಂಡಿದೆ ಎಂದರು.

ಇದೇ ವೇಳೆ ಕರ್ನಾಟಕದಲ್ಲಿ ಈ ರೀತಿ ಭೂಮಿ ಸಮಸ್ಯೆಯಿಂದ ಸ್ಥಗಿತಗೊಂಡಿರುವ ಯೋಜನೆಗಳ ವಿವರಗಳನ್ನು ಸಚಿವರು ನೀಡಿದರು.

ಶಿವಮೊಗ್ಗ–ರಾಣೆಬೆನ್ನೂರು ಹೊಸ ಮಾರ್ಗಕ್ಕಾಗಿ (96 ಕಿಮೀ) 226 ಹೆಕ್ಟೇರ್ ಸ್ವಾಧೀನಪಡಿಸಿಕೊಂಡರೆ, 333 ಹೆಕ್ಟೇರ್ ಬಾಕಿ ಇದೆ. ಬೆಳಗಾವಿ – ಧಾರವಾಡ ಹೊಸ ಮಾರ್ಗಕ್ಕೆ (73 ಕಿ.ಮೀ.), 531 ಹೆಕ್ಟೇರ್ ಭೂಮಿ ಅಗತ್ಯವಿದ್ದು, ವೈಟ್‌ಫೀಲ್ಡ್ – ಕೋಲಾರ ಹೊಸ ಮಾರ್ಗಕ್ಕೆ (53 ಕಿ.ಮೀ.) 337 ಹೆಕ್ಟೇರ್ ಭೂಮಿ ಅಗತ್ಯವಿದೆ. ಅದೇ ರೀತಿ 206 ಹೆಕ್ಟೇರ್ ಅಗತ್ಯವಿರುವ ಹಾಸನ – ಬೇಲೂರು ಹೊಸ ಮಾರ್ಗಕ್ಕೆ (27 ಕಿ.ಮೀ.) ಒಂದೇ ಒಂದು ಹೆಕ್ಟೇರ್ ಭೂಮಿಯನ್ನೂ ಸ್ವಾಧೀನಪಡಿಸಿಕೊಂಡಿಲ್ಲ ಎಂದು ಮಾಹಿತಿ ನೀಡಿದರು.

ರೈಲ್ವೆ ಯೋಜನೆಗಳನ್ನು ಪೂರ್ಣಗೊಳಿಸಬೇಕೆಂದರೆ ಅದು, ರಾಜ್ಯ ಸರ್ಕಾರದ ತ್ವರಿತ ಭೂಸ್ವಾಧೀನ, ಅರಣ್ಯ ಇಲಾಖೆಯ ಅಧಿಕಾರಿಗಳಿಂದ ಅರಣ್ಯ ತೆರವು, ಸ್ಥಳಾಂತರ, ವಿವಿಧ ಅಧಿಕಾರಿಗಳಿಂದ ಶಾಸನಬದ್ಧ ಅನುಮತಿಗಳು, ಪ್ರದೇಶದ ಭೌಗೋಳಿಕ ಮತ್ತು ಭೌಗೋಳಿಕ ಪರಿಸ್ಥಿತಿಗಳು, ಯೋಜನಾ ಸ್ಥಳಗಳ ಪ್ರದೇಶದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಪರಿಸ್ಥಿತಿ, ನಿರ್ದಿಷ್ಟ ಯೋಜನೆಗಳ ಕುರಿತ ಮಾಹಿತಿ ಸೇರಿದಂತೆ ಹಳವು ಅಂಶಗಳನ್ನು ಅವಲಂಬಿಸಿರುತ್ತದೆ. ಈ ಎಲ್ಲಾ ಅಂಶಗಳು ಯೋಜನೆಗಳ ಪೂರ್ಣಗೊಳಿಸುವ ಸಮಯ ಮತ್ತು ವೆಚ್ಚದ ಮೇಲೆ ಪರಿಣಾಮ ಬೀರುತ್ತವೆ ಎಂದು ಹೇಳಿದರು.

# ಬಾಲಕನ ಅಪಹರಣ, ಹತ್ಯೆ: ಆರೋಪಿಗಳ ಕಾಲಿಗೆ ಗುಂಡು

ಬೆಂಗಳೂರಿನ ಅರಕೆರೆಯ ಶಾಂತಿನಿಕೇತನ ಬಡಾವಣೆಯಲ್ಲಿ ಟ್ಯೂಷನ್ ಮುಗಿಸಿಕೊಂಡು ರಾತ್ರಿ ಮನೆಗೆ ತೆರಳುತ್ತಿದ್ದ ಬಾಲಕನನ್ನು ಅಪಹರಿಸಿ ಕೊಲೆ ಮಾಡಲಾಗಿದ್ದು, ಇಬ್ಬರು ಆರೋಪಿಗಳನ್ನು ಹುಳಿಮಾವು ಠಾಣೆಯ ಪೊಲೀಸರು ಬಂಧಿಸಿದ್ದಾರೆ. ಗುರುಮೂರ್ತಿ ಹಾಗೂ ಗೋಪಾಲಕೃಷ್ಣ ಬಂಧಿತರಾಗಿದ್ದು, ಆರೋಪಿಗಳು ಕಗ್ಗಲಿಪುರ ಅರಣ್ಯದಲ್ಲಿ ಅಡಗಿ ಕುಳಿತ್ತಿದ್ದರು. ಖಚಿತ ಮಾಹಿತಿ ಆಧರಿಸಿ ಗುರುವಾರ ತಡರಾತ್ರಿ ನಡೆದ ಕಾರ್ಯಾಚರಣೆಯಲ್ಲಿ ಇಬ್ಬರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ. ಕಾರ್ಯಾಚರಣೆ ವೇಳೆ ಪೊಲೀಸರ ಮೇಲೆ ಆರೋಪಿಗಳು ಹಲ್ಲೆಗೆ ಯತ್ನಿಸಿ ಪರಾರಿಯಾಗಲು ಪ್ರಯತ್ನಿಸಿದ್ದರು.

ಹುಳಿಮಾವು ಠಾಣೆಯ ಪೊಲೀಸರು ಆತ್ಮರಕ್ಷಣೆಗಾಗಿ ಆರೋಪಿಗಳ ಕಾಲಿಗೆ ಗುಂಡು ಹಾರಿಸಿದ್ದಾರೆ. ಬಾಲಕನನ್ನು ಅಪಹರಣ ಮಾಡಿ ಆತನ ತಂದೆಗೆ ಕರೆ ಮಾಡಿದ್ದ ಆರೋಪಿಗಳು, ?5 ಲಕ್ಷಕ್ಕೆ ಬೇಡಿಕೆ ಇಟ್ಟಿದ್ದರು.

# ಗುಣಗಳ ಗಣಿ ಗಣಪತಿ

ಗಣೇಶ ಹಿಂದೂ ಧರ್ಮದ ಪ್ರಮುಖ ದೇವತೆಗಳಲ್ಲಿ ಒಬ್ಬ, ಭಾರತ ಮತ್ತು ನೇಪಾಳದಲ್ಲಿ ಪೂಜಿಸುವ ದೇವರು, ಭಾದ್ರಪದ ಮಾಸದಲ್ಲಿ ಬರುವ ಚೌತಿಯ ದಿನ ಗಣೇಶನ ಹಬ್ಬವನ್ನು ಸಂಭ್ರಮ ಸಡಗರದಿಂದ ಆಚರಿಸಲಾಗುತ್ತದೆ. 'ಓಂ ಗಣೇಶಾಯ ನಮೋ, ಓಂ ಗಂಗಣಪತೆಯೇ ನಮ:' ಎಂಬ ಮಂತ್ರವನ್ನು ಅವನಿಗೋಸ್ಕರ ಹಾಡಲಾಗುತ್ತದೆ. ಅವನ ಕೈಗಳಲ್ಲಿ ಪರಶು, ಪಾಶ, ಅಂಕುಶ ಮತ್ತು ಕಮಲವನ್ನು ತೋರಿಸಲಾಗುತ್ತದೆ. ಅವನೊಂದಿಗೆ ಬುದ್ಧಿ–ರಿದ್ಧಿ–ಸಿದ್ಧಿಯನ್ನು ತೋರಿಸಲಾಗುತ್ತದೆ. ಅವನ ವಾಹನ ಇಲಿ. ಹಿಂದೂ ಪುರಾಣದ ಪ್ರಕಾರ ಗಣೇಶ ಶಿವ ಮತ್ತು ಪಾರ್ವತಿಯ ಮಗ. ಗಣೇಶನಿಗೆ ಕನ್ನಡದಲ್ಲಿ 'ಗಣೇಶ' ಮಲೆಯಾಳಂ ಮತ್ತು ಮರಾಠಿ ಭಾಷೆಗಳಲ್ಲಿ 'ವಿನಾಯಕ', ತಮಿಳು ಭಾಷೆಯಲ್ಲಿ 'ವಿನಾಯಗರ್', 'ಪಿಳ್ಳಾಯರ್', ತೆಲುಗಿನಲ್ಲಿ 'ವಿನಾಯಕುಡು' ಎಂದು ಕರೆಯಲಾಗುತ್ತದೆ. ಭಾರತದ ಅನೇಕ ನಗರಗಳಲ್ಲಿ, ಅದರಲ್ಲಿಯೂ ವಿಶೇಷವಾಗಿ ಮುಂಬಯಿ, ಪೂನ, ಬೆಳಗಾವಿ, ಹುಬ್ಬಳ್ಳಿ–ಧಾರವಾಡದಲ್ಲಿ 5–7–11 ದಿನಗಳವರೆಗೆ ಗಣೇಶೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಗುತ್ತದೆ.

ಹೆಚ್ಚು ಜನಪ್ರಿಯನಾಗಿ ಪೂಜೆಯಲ್ಲಿ ಅಗ್ರಸ್ಥಾನ ಪಡೆದ ದೇವತೆ ಗಣೇಶನಾಗಿದ್ದಾನೆ. ಎಲ್ಲಾ ಶುಭಕಾರ್ಯಗಳಲ್ಲೂ ಪ್ರಥಮ ಪೂಜೆ ಗಣಪತಿಗೆ ಸಲ್ಲುತ್ತದೆ. ಬೇರೆ ದೇವತಾ ಕಾರ್ಯವನ್ನು ಮಾಡುವಾಗ ನಿರ್ವಿಘ್ನ ಸಿದ್ಧಿಗಾಗಿ ಪ್ರಥಮ ಪೂಜೆ ಗಣೇಶನಿಗೆ ಸಲ್ಲಿಸಲಾಗುತ್ತದೆ.

ಗಣಪತಿಯ ಶರೀರವು ವಿಚಿತ್ರವಾಗಿದೆ. ತನ್ನದೇ ಆದ ಮೌಲ್ಯ ಮತ್ತು ವೈಶಿಷ್ಟತೆಯನ್ನು ಹೊಂದಿದೆ. ಆನೆಯ ತಲೆ ನಂಬಿಕೆ, ಬುದ್ಧಿವಂತಿಕೆ ಮತ್ತು ವಿವೇಚನಾಶಕ್ತಿ ಪ್ರತೀಕವಾಗಿದೆ. ಏಕದಂತವು ಎಲ್ಲಾ ದ್ವಂದಗಳನ್ನು ಮೀರಿ ನಿಲ್ಲುವ ಸಾಮರ್ಥ್ಯದ ಪ್ರತೀಕವಾಗಿದೆ. ವಿಶಾಲವಾದ ಕಿವಿಗಳು ವಿವೇಕ, ನೆರವು, ಸಹಾಯ ಕೋರುವ ಜನಗಳ ಮೊರೆಯನ್ನು ಆಲಿಸುವ ಸಾಮರ್ಥ್ಯವನ್ನು ಸೂಚಿಸುವುದಲ್ಲದೇ, ಆಧ್ಯಾತ್ಮಿಕ ಸತ್ಯಗಳ ಬಗ್ಗೆ ಚಿಂತನೆ ಮಾಡುವುದನ್ನು ಸೂಚಿಸುತ್ತದೆ. ಶ್ರೇಷ್ಠ ಚಿಂತನೆಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಲು ಶ್ರವಣ–ಶಕ್ತಿಯ ಪ್ರಾಮುಖ್ಯತೆಯನ್ನು ವಿಶಾಲವಾದ ಕಿವಿಗಳು ಸೂಚಿಸುತ್ತವೆ. ವಕ್ರವಾದ ಸೊಂಡಿಲು ಸತ್ಯ ಮತ್ತು ಮಿಥ್ಯಗಳ ನುಡುವಿನ ವ್ಯತ್ಯಾಸವನ್ನು ಗುರುತಿಸುವಂತಹ ಬುದ್ಧಿಶಕ್ತಿಯ ಸಾಮರ್ಥ್ಯವನ್ನು ಸೂಚಿಸುತ್ತದೆ. ಹಣೆಯ ಮೇಲೆ ಚಿತ್ರಿಸಲ್ಪಟ್ಟ ತ್ರಿಶೂಲವು ಭೂತ, ವರ್ತಮಾನ ಮತ್ತು ಭವಿಷ್ಯತ್ ಕಾಲವನ್ನು ಸೂಚಿಸುತ್ತಾ, ಅವುಗಳ ಮೇಲೆ ಗಣೇಶನ ಪ್ರಭುತ್ವವನ್ನು ತೋರಿಸುತ್ತದೆ. ಗಣೇಶನ ದೊಡ್ಡ ಹೊಟ್ಟೆ ಪ್ರಪಂಚದ ದು:ಖ, ಸಂಕಟಗಳನ್ನೆಲ್ಲವನ್ನು ನುಂಗಿ ಜಗತ್ತನ್ನು ರಕ್ಷಿಸುವ ಸಾಮರ್ಥ್ಯವನ್ನು ಸೂಚಿಸುತ್ತದೆ. ಗಣೇಶನ ಪಾದಗಳು ಇಹ ಮತ್ತು ಪರಲೋಕಗಳಲ್ಲಿ ಬಾಳುವ ಸಾಮರ್ಥ್ಯವನ್ನು ಸೂಚಿಸುತ್ತವೆ.

ಅವನ ದೇಹ ದೇವನಾಗರಿ ಅಕ್ಷರದ 'ಓಂ' ಅಕ್ಷರದಂತಿದೆ. ಹಾಗಾಗಿ ಗಣೇಶನನ್ನು 'ಓಂಕಾರ' ಎಂದು ಕರೆಯುತ್ತಾರೆ. ಅವನ ವಿಶ್ವಕಲ್ಯಾಣದ ಸೇವೆಗಾಗಿ ಅವನಿಗೆ ವಿಶ್ವೋದ್ಧಾರಕ, ಜಗದೋದ್ಧಾರಕ ಎಂದು ಕರೆಯುತ್ತಾರೆ.

ಮಂಗಳಮೂರ್ತಿ ಗಣೇಶನ ಮೂರ್ತಿಯನ್ನು ತಂದು



ಪ್ರತಿಷ್ಠಾಪನೆ ಮಾಡಿ, ಪೂಜಿಸಿ, ಆರಾಧಿಸಿ, ಕೊನೆಗೆ ವಿರ್ಸಜನೆ ಮಾಡುತ್ತಾರೆ. ಗಣಪತಿ ಎಂದರೆ 'ಗಣಗಳ–ಸಮೂಹಗಳ ಅಧಿಪತಿ'. ಗಣೇಶನನ್ನು ವಿಶ್ವದ ಮಾನವ ಸಮಾಜಕ್ಕೆ ಒಡೆಯ, ಸರ್ವಗುಣಗಳಧಾರಿ, ಸರ್ವವಿದ್ಯಾ ಪಾರಂಗತ, ಏಕದಂತ, ಮಂಗಳಮೂರ್ತಿ, ವಿಘ್ನೇಶ್ವರ, ದು:ಖಹರ, ಸುಖಕರ, ಲಂಬೋದರ, ವಿನಾಯಕ, ಗಜಮುಖ, ಮೂಷಕವಾಹನ, ಮೋದಕಪ್ರಿಯ ಇತ್ಯಾದಿ ಹೆಸರುಗಳಿಂದ ಕರೆಯುತ್ತಾರೆ. ಸರ್ವರ ಮಂಗಳಕಾರಿ ಆಗಿರುವುದರಿಂದ ಅವನಿಗೆ 'ಮಂಗಳಮೂರ್ತಿ' ಎಂದು, ವಿಘ್ನಗಳನ್ನು ವಿನಾಶ ಮಾಡುವುದರಿಂದ 'ವಿಘ್ನೇಶ್ವರ' ಎಂದು, ದು:ಖವನ್ನು ದೂರಮಾಡಿ ಸುಖವನ್ನು ನೀಡುವುದರಿಂದ ದು:ಖಹರ–ಸುಖಕರನೆಂದು ಮಹಿಮೆ ಮಾಡಲಾಗುತ್ತದೆ. ಲಂಬೋದರ ಎಂದರೆ 'ವಿಶಾಲ ಹೊಟ್ಟೆ' ಅರ್ಥಾತ್ ಎಲ್ಲರ ತಪ್ಪುಗಳನ್ನು ತನ್ನ ಹೊಟ್ಟೆಗೆ ಹಾಕಿಕೊಂಡು ಕ್ಷಮಿಸುವವನು ಎಂದರ್ಥ. ಹೀಗೆ ಅವನ ಅನೇಕ ನಾಮಗಳು ಗುಣಗಳವಾಚಕಗಳಾಗಿವೆ. ಇಲಿ ಚಂಚಲ ಮನಸ್ಸಿನ ಸಂಕೇತವಾಗಿದೆ. ಇಲಿಯ ಮೇಲಿನ ಸವಾರಿಯು ಮನಸ್ಸು–ಬುದ್ಧಿಯ ಮೇಲೆ ನಿಯಂತ್ರಣ ಹೊಂದಿರುವುದನ್ನು ಸೂಚಿಸುತ್ತದೆ. ಗಜಮುಖವು ಬಲಶಾಲಿ ಅಥವಾ ಶಕ್ತಿಯ ಪ್ರತೀಕವಾಗಿದೆ. ಮೋದಕವು ಸ್ನೇಹ ಮತ್ತು ಮಧುರತೆಯ ಸಂಕೇತವಾಗಿದೆ.

ಬದಲಾಗುತ್ತಿರುವ ಈ ವಿದ್ಯುನ್ಮಾನ ಯುಗದಲ್ಲಿ ಒಂದೆಡೆ ಭಕ್ತಿಯಲ್ಲಿ ಭಾವನೆ ಜಾಸ್ತಿ ಆಗುತ್ತಿದೆ. ಗಣೇಶನ ರೂಪವು ಬದಲಾಗುತ್ತಿದೆ. ಅಶ್ಲೀಲ ಹಾಡುಗಳು ಎಲ್ಲೆಡೆ ಕೇಳಿಬರುತ್ತಿವೆ. ಇದರಿಂದ ಶಬ್ದಮಾಲಿನ್ಯ ಹೆಚ್ಚಾಗುತ್ತಿದೆ. ಸಾಮರಸ್ಯ, ಏಕತೆ, ಸಂಘಟನೆಯ ಉದ್ದೇಶದಿಂದ 'ಲೋಕಮಾನ್ಯ ತಿಲಕರು' ಪ್ರಾರಂಭಿಸಿದ ಸಾರ್ವಜನಿಕ ಗಣಪನ ಉತ್ಸವ ಇಂದು ಕರಾಳ ರೂಪವನ್ನು ತಾಳಿದೆ. ಗಣಪನ ಸ್ಥಾಪನೆ–ವಿರ್ಸಜನೆಯ ಸಮಯದಲ್ಲಿ ಅನೇಕ ಪ್ರಕಾರದ ಘರ್ಷಣೆ, ಗಲಾಟೆ, ಹಿಂಸೆಯು ನಡೆಯುತ್ತಿವೆ. ಗಣಪತಿಯ ಮೂರ್ತಿಗಳನ್ನು ಪ್ಲಾಸ್ಟರ್ ಆಫ್ ಪ್ಯಾರೀಸ್‌ನಿಂದ ಮಾಡುತ್ತಾರೆ. ಅನೇಕ ರಾಸಾಯನಿಕ ಬಣ್ಣ ಮತ್ತು ಸಿಡಿಮದ್ದುಗಳಿಂದ ಪರಿಸರಕ್ಕೆ ಹಾನಿಯಾಗುತ್ತಿದೆ. ಇದಕ್ಕೆ ವಿಚಾರವಂತರು, ಬುದ್ಧಿವಾದಿಗಳು, ಚಿಂತಕರು ಎಲ್ಲರೂ ಸೇರಿದರೆ ಕಡಿವಾಣ ಹಾಕಬಹುದು.

ವಾಸ್ತವವಾಗಿ ಗಣಪತಿಯ ಹಬ್ಬವು ನಮಗೆ ಸುಖ, ಶಾಂತಿ ಸಮೃದ್ಧಿ ತರುವ ಹಬ್ಬವಾಗಬೇಕು. ಈಶ್ವರೀಯ ವಿಶ್ವ ವಿದ್ಯಾಲಯದಲ್ಲಿ ಪ್ರತಿಯೊಂದು ಹಬ್ಬವನ್ನು ಅಲೌಕಿಕ ರೀತಿಯಲ್ಲಿ ಆಚರಿಸಲಾಗುತ್ತದೆ. ಅದರ ಸತ್ಯಾಂಶವನ್ನು ನಿರಾಕಾರ ಪರಮಾತ್ಮನ ಜ್ಞಾನದ ಆಧಾರದಿಂದ ತಿಳಿಸಿ ಆಚರಣೆಯಲ್ಲಿ ತರುವುದಕ್ಕೆ ಮಹತ್ವ ನೀಡಲಾಗುತ್ತದೆ.

ಗಣೇಶನ ಮೂರ್ತಿಯನ್ನು ಮಣ್ಣಿನಿಂದ ತಯಾರಿಸಿ, ಅದಕ್ಕೆ ಬಣ್ಣವನ್ನು ಹಚ್ಚಿ ಶೃಂಗಾರ ಮಾಡುತ್ತಾರೆ. ನಂತರ ಅದಕ್ಕೆ ಪೂಜೆಯನ್ನು ಸಲ್ಲಿಸಲಾಗುತ್ತದೆ. ಕೆಲವು ದಿನಗಳವರೆಗೆ ಪೂಜಿಸಿದ ನಂತರ ಗಣಪನ ವಿರ್ಸಜನೆ ಮಾಡುವರು. ಆಧ್ಯಾತ್ಮಿಕ ಜ್ಞಾನದಲ್ಲಿ ದೇಹವನ್ನು ಮಣ್ಣಿಗೆ ಹೋಲಿಸಲಾಗುತ್ತದೆ. ಈ ದೇಹವು ಪಂಚತತ್ವಗಳಿಂದ ಆಗಿದ್ದು, ಆತ್ಮವು ದೇಹ ತ್ಯಜಿಸಿದ ನಂತರ ಮತ್ತೆ ಪಂಚತತ್ವಗಳಲ್ಲಿ ಲೀನವಾಗುತ್ತದೆ. ಇದರ ಪ್ರತೀಕವಾಗಿಯೇ ಗಣೇಶನನ್ನು ಮಣ್ಣಿನಿಂದ ತಯಾರಿಸಿ ಮತ್ತೆ ಮಣ್ಣಿಗೆ ಸೇರಿಸಲಾಗುತ್ತದೆ. ನಾವು ಈ ದೇಹವಲ್ಲ, ನಾವು ಆತ್ಮ–ಜ್ಯೋತಿಗಳಾಗಿದ್ದೇವೆ. ನಮಗೆ ಜಾತಿಭೇದಗಳಿಲ್ಲ. ನಾವೆಲ್ಲರೂ ದಿವ್ಯಗುಣಗಳ ಶೃಂಗಾರ ಮಾಡಿಕೊಂಡಾಗ ಪೂಜೆಗೆ ಯೋಗ್ಯರಾಗುವೆವು. ಪಂಚ ವಿಕಾರಿಗುಣಗಳ ತ್ಯಾಗದಿಂದ ಮಾತ್ರ ದಿವ್ಯಗುಣಗಳ ಶೃಂಗಾರ ಮಾಡಿಕೊಳ್ಳಲು ಸಾಧ್ಯವಿದೆ. ಬ್ರಹ್ಮಚಾರಿ ವಿನಾಯಕನಿಗೆ ಸಿದ್ಧಿ ಮತ್ತು ಬುದ್ಧಿ ಎಂಬ ಇಬ್ಬರು ಪತ್ನಿಯರನ್ನು ತೋರಿಸಲಾಗುತ್ತದೆ. ವಾಸ್ತವಿಕ ಇವರೆಬ್ಬರೂ ಗಣೇಶನ ವಿಶಾಲ ಬುದ್ಧಿ ಮತ್ತು ಸಿದ್ಧಿ ಪ್ರತೀಕವಾಗಿದ್ದಾರೆ.

ಸದ್ಗುಣಗಳ ಮೂರ್ತಿ, ಗುಣಗಳ ಗಣಿ, ದಿವ್ಯ ಬುದ್ಧಿದಾತ ಗಣೇಶನಾಗಿರುವುದರಿಂದ ಪ್ರತಿಯೊಂದು ಕಾರ್ಯವು ಸೂಸುತ್ರವಾಗಲು, ಪ್ರಾರಂಭದಲ್ಲಿ ಗಣೇಶನ ಪೂಜೆಯನ್ನು ಮಾಡುವ ವಾಡಿಕೆ ಇದೆ. ಪೂಜೆಯ ಜೊತೆಗೆ ನಾವು ನಮ್ಮ ಜೀವನದಲ್ಲಿ ಗಣೇಶನ ವಿಶೇಷತೆಗಳನ್ನು ಅಳವಡಿಸಿಕೊಂಡರೆ ನಮ್ಮ ಜೀವನ ಸಾರ್ಥಕವಾಗುವುದು. ಅದಕ್ಕೆ ಆತ್ಮಜ್ಞಾನದ ಅವಶ್ಯಕತೆ ಇದೆ. ಇಲ್ಲಿ ಗಣಪತಿ ವ್ಯಕ್ತಿವಾಚಕ ಶಬ್ದ ಅಲ್ಲ, ಅದು ಗುಣವಾಚಕ ಶಬ್ದ. ಆತ್ಮವು ಶರೀರ ಬಿಟ್ಟು ಹೋದ ಮೇಲೆ, ದೇಹವು ಪಂಚ ತತ್ವಗಳಲ್ಲಿ ವಿಲೀನವಾಗುತ್ತದೆ. ನಮ್ಮ ಜೀವನವು ಗಣಪತಿಯಂತೆ ನಾಲ್ಕು ದಿನಗಳ ಜೀವನವಾಗಿದೆ. ಆದ್ದರಿಂದ ಈ ಅಲ್ಪ ಸಮಯದಲ್ಲಿ ಗಣೇಶನ ಗುಣಗಳನ್ನು ಅಳವಡಿಸಿಕೊಂಡು, ನಮ್ಮ ಬಾಳನ್ನು ಬಂಗಾರ ಮಾಡಿಕೊಳ್ಳಬೇಕು.

ವಕ್ರ ತುಂಡ ಮಹಾಕಾಯ ಸೂರ್ಯ ಕೋಟಿ ಸಮಪ್ರಭ!

ನಿರ್ವಿಘ್ನಂ ಕುರುಮೇ ದೇವ ಸರ್ವ ಕಾರ್ಯೇಷು ಸರ್ವದ!!

––ವಿಶ್ವಾಸ. ಸೋಹೋನಿ.
ಬ್ರಹ್ಮಾಕುಮಾರೀಸ್, ಮೀಡಿಯಾ ವಿಂಗ್,
9483937106

# ಎಸ್ಸಿ– ಎಸ್ಟಿ ದೌರ್ಜನ್ಯ ನಡೆದ್ರೆ 60 ದಿನದಲ್ಲಿ ಚಾರ್ಜ್‌ಶೀಟ್

## ಅಧಿಕಾರಿಗಳಿಗೆ ಸಿಎಂ ಸಿದ್ದರಾಮಯ್ಯ ಖಡಕ್ ಸೂಚನೆ



**ಬೆಂಗಳೂರು:** ಪರಿಶಿಷ್ಟ ಜಾತಿ, ಪಂಗಡಗಳ ಜನರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ಇನ್ನು ಮುಂದೆ 60 ದಿನದ ಒಳಗೆ ತನಿಖೆ ನಡೆಸಿ ಕೋರ್ಟ್‌ಗೆ ದೋಷಾರೋಪಪಟ್ಟಿ ಸಲ್ಲಿಸುವಂತೆ ಸಿದ್ದರಾಮಯ್ಯ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ್ದಾರೆ.

ಸೋಮವಾರ 2025–26 ನರದ ಸಾಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ನಿಯಂತ್ರಣ) ಜಾಗೃತ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಈ ಸೂಚನೆ ನೀಡಿದರು. ಎಸ್‌ಸಿ, ಎಸ್‌ಟಿ ದೌರ್ಜನ್ಯ ಪ್ರಕರಣ ಸಂಬಂಧ ಕಳೆದ 6 ತಿಂಗಳಲ್ಲಿ ಶೇ.84 ಪ್ರಕರಣಗಳಲ್ಲಿ ಮಾತ್ರ ನಿಗದಿತ ಸಮಯದಲ್ಲಿ ಆರೋಪಪಟ್ಟಿ ಸಲ್ಲಿಸಲಾಗಿದೆ. ಆದರೆ, ಶೇ.100 ಫಲಿತಾಂಶ ನೀಡಬೇಕು. ಈ ವಿಚಾರದಲ್ಲಿ ನೆಪ ಸಹಿಸಲ್ಲ ಎಂದು ಪೊಲೀಸರಿಗೆ ಸಿಎಂ ಎಚ್ಚರಿಕೆ ನೀಡಿದರು.

ನ್ಯಾಯಾಲಯದಲ್ಲಿ ಪಕರಣಗಳಲ್ಲಿ ತಡೆಯಾನ ಇದೆ. ತೆರವುಗೊಳಿಸಲು ಕಾನೂನು ತೆಗೆದುಕೊಳ್ಳಬೇಕು. ತ್ವರಿತ ವಿಚಾರಣೆಗಾಗಿ 11 ವಿಶೇಷ ಕೋರ್ಟ್ ಸ್ಥಾಪಿಸಿದ್ದು, ತ್ವರಿತವಾಗಿ ನ್ಯಾಯ ಒದಗಿಸಬೇಕು. ಪ್ರಸ್ತುತ ಇರುವ ಶೇ.10 ಶಿಕ್ಷೆಯ ಪ್ರಮಾಣ ಹೆಚ್ಚಾಗಬೇಕು. ಆರೋಪಿಗಳೊಂದಿಗೆ ಪೊಲೀಸರು ಶಾಮೀಲಾದರೆ ಕೈಗೊಳ್ಳಲಾಗುವುದು ಎಂದರು. ಕಠಿಣ ಕ್ರಮ

# ಉಚಿತ ಸಿಸಿಟಿವಿ ಅಳವಡಿಕೆ–ಸರ್ವೀಸಿಂಗ್ ತರಬೇತಿ

**ಚಿಕ್ಕಮಗಳೂರು:** ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಸೆಪ್ಟೆಂಬರ್ 8 ರಿಂದ 13 ದಿನಗಳ ಕಾಲ ನಿರುದ್ಯೋಗಿ ಪುರುಷರಿಗೆ ಉಚಿತ ಸಿಸಿಟಿವಿ ಅಳವಡಿಕೆ ಮತ್ತು ಸರ್ವೀಸಿಂಗ್ ತರಬೇತಿ ಶಿಬಿರ ಆಯೋಜಿಸಲಾಗಿದೆ.

ಸ್ವಯಂ ಉದ್ಯೋಗಿಗಳಾಗಲು ಬಯಸುವ 18 ರಿಂದ 35 ವರ್ಷ ವಯಸ್ಸಿನ ರಾಜ್ಯದ ಯಾವುದೇ ಜಿಲ್ಲೆಯ ನಿರುದ್ಯೋಗಿ ಪುರುಷರು ಈ ಶಿಬಿರದಲ್ಲಿ ಪಾಲ್ಗೊಳ್ಳಬಹುದು. ಶಿಬಿರದ ಸಮಯದಲ್ಲಿ ತರಬೇತಿ, ಊಟ ಹಾಗೂ ವಸತಿ ಸೌಕರ್ಯಗಳನ್ನು ಉಚಿತವಾಗಿ ಶಿಬಿರಾರ್ಥಿಗಳಿಗೆ ಕಲ್ಪಿಸಲಾಗುವುದು. ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು. ಅಭ್ಯರ್ಥಿಗಳು ಸ್ಥಳೀಯ ಭಾಷೆ ಬಲ್ಲವರಾಗಿದ್ದು, ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು. ತರಬೇತಿ ನಂತರ ಕೇಂದ್ರ ಸರ್ಕಾರದ ಗ್ರಾಮೀಣ ಸಚಿವಾಲಯದಿಂದ ಪ್ರಮಾಣ ಪತ್ರ ವಿತರಿಸಲಾಗುವುದು.

ಆಸಕ್ತರು ಸೆಪ್ಟಂಬರ್ 8 ರಂದು ಬೆಳಿಗ್ಗೆ 9 ಗಂಟೆಗೆ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ,

ಸೊಣ್ಣಹಳ್ಳಿಪುರ, ಹಸಿಗಾಳ (ಅಂಚೆ), ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ನಡೆಯುವ ನೇರ ಸಂದರ್ಶನಕ್ಕೆ ವಿದ್ಯಾರ್ಹತೆಗಳೊಂದಿಗೆ ಮತ್ತು ವಿಳಾಸ ದಾಖಲಾತಿಗಳೊಂದಿಗೆ ಹಾಜರಾಗಬಹುದು. ಹೆಚ್ಚಿನ ಮಾಹಿತಿಗೆ ಸಂಸ್ಥೆಯ (ದೂರವಾಣಿ ಸಂಖ್ಯೆ 8970476050, 9591514154, 9686248369, 8970446644, 9505894247)ನ್ನು ಸಂಪರ್ಕಿಸಬಹುದು ಎಂದು ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಾಣಿ ವಧೆ–ಮಾಂಸ ಮಾರಾಟ ನಿಷೇಧ

**ಚಿಕ್ಕಮಗಳೂರು:** ಗಣೇಶ ಚತುರ್ಥಿ ಪ್ರಯುಕ್ತ ಆಗಸ್ಟ್ 27 ರಂದು ಕಡ್ಡಾಯವಾಗಿ ಪ್ರಾಣಿ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಕೋಳಿ, ಕುರಿ, ಮೀನು ಮಾಂಸ ಮಾರಾಟಗಾರರು ಮತ್ತು ಮಾಂಸಾಹಾರಿ ಹೋಟೆಲ್‌ಗಳನ್ನು ಆ ದಿನದಂದು ತೆರೆಯಬಾರದು. ತಪ್ಪಿದಲ್ಲಿ ಅಂತಹ ಮಾಂಸ ಮಾರಾಟ ಮಾಡುವವರು ಮತ್ತು ಮಾಂಸಾಹಾರಿ ಹೋಟೆಲ್ ಮಾಲೀಕರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು. ನಗರಸಭೆ ವ್ಯಾಪ್ತಿಯಲ್ಲಿರುವ ಕುರಿ, ಕೋಳಿ, ಮೀನು ಮಾಂಸ ಮಾರಾಟಗಾರರು ಹಾಗೂ ಮಾಂಸಾಹಾರಿ ಹೋಟೆಲ್ ಮತ್ತು ರೆಸ್ಟೋರೆಂಟ್ ಮಾಲೀಕರಿಗೆ ಈ ಮೂಲಕ ತಿಳುವಳಿಕೆ ನೀಡಲಾಗಿದೆ ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆನ್‌ಲೈನ್ ಗೇಮಿಂಗ್ ಬ್ಯಾನ್ ಎಪಿಜಿಪಿ ಸ್ವಾಗತ

**ದಾವಣಗೆರೆ:** ಆನ್ಲೈನ್ ಗೇಮಿಂಗ್ ನಿಷೇಧಿಸಿರುವ ಕೇಂದ್ರಸರ್ಕಾರದ ನಿರ್ಧಾರವನ್ನು ಅಖಿಲ ಭಾರತೀಯ ಗ್ರಾಹಕ ಪಂಚಾಯತ್ (ಎಪಿಜಿಪಿ) ಸ್ವಾಗತಿಸಿದೆ.

ಆನ್ಲೈನ್ ಗೇಮ್ಸ್‌ಗಳಿಂದ ಬಹಳಷ್ಟು ಕುಟುಂಬಗಳು ನಾಶವಾಗಿವೆ. ವಿದ್ಯಾರ್ಥಿಗಳು ಆನ್ಲೈನ್ ಗೀಳಿಗೆ ಬಿದ್ದು ಆರ್ಥಿಕವಾಗಿ ಮಾತ್ರವಲ್ಲ ವಿದ್ಯಾಭ್ಯಾಸದಲ್ಲಿ ಕೂಡ ತೀವ್ರ ಹಾನಿಗೊಳಗಾಗಿದ್ದಾರೆ. ಈ ದಿಶೆಯಲ್ಲಿ ಆ ಕಳೆದ ನಾಲ್ಕು ವರ್ಷಗಳಿಂದ ಸತತವಾಗಿ ಎಪಿಜಿಪಿ ಕೇಂದ್ರ ಸರ್ಕಾರಕ್ಕೆ ಆನ್ಲೈನ್ ಗೇಮ್ಸ್ ನಿಷೇಧಿಸುವಂತೆ ಮನವಿ ಸಲ್ಲಿಸುತ್ತಾ ಬಂದಿತ್ತು ಎಂದು ಜಿಲ್ಲಾ ಕಾನೂನು ಸಲಹೆಗಾರರಾದ ಹಂಪಾಲಿ ನಾಗಮಣಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ರೀತಿಯ ಅವಶ್ಯಕ ನಿರ್ಧಾರಗಳಿಂದ ಸಮಾಜದಲ್ಲಿ ಬದಲಾವಣೆಗಳನ್ನು ತರಲು ಸಾಧ್ಯ. ಇದು ನಿರಂತರವಾಗಿ ಸಾಗಲು ಸಮಾಜದ ಜನತೆಯೂ ಗ್ರಾಹಕ ಪಂಚಾಯತಿಯೊಂದಿಗೆ ಕೈ ಜೋಡಿಸಿಕೊಳ್ಳುವುದು ಅವಶ್ಯಕ. ಆದ್ದರಿಂದ ಜನರು ಗ್ರಾಹಕ ಪಂಚಾಯತ್‌ನ ಸದಸ್ಯರಾಗಿ ಸಮಾಜದಲ್ಲಿ ಸೂಕ್ತ ಗ್ರಾಹಕ ಹಿತ ನಿರ್ಣಯಗಳಲ್ಲಿ ಸಹಭಾಗಿಗಳಾಗುವಂತೆ ಅವರು ಕೋರಿದ್ದಾರೆ.

# ನನ್ನಮ್ಮ ಗಿರಿಜಮ್ಮ ಕೃತಿ ಲೋಕಾರ್ಪಣೆ

**ದಾವಣಗೆರೆ:** ಅಕ್ಕಮಹಾದೇವಿ ಸಮಾಜ ಹಾಗೂ ಮಹಿಳಾ ಸೇವಾ ಸಮಾಜ ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ಅಕ್ಕಮಹಾದೇವಿ ಸಮಾಜದ ಮಾಜಿ ಅಧ್ಯಕ್ಷರಾದ ಲಿಂ. ಎಂ.ಸಿ. ಗಿರಿಜಮ್ಮನವರ ಪುತ್ರಿ ರೇಣುಕಾ ಶಿವಾನಂದಪ್ಪ ಅವರು ರಚಿಸಿರುವ 'ನನ್ನಮ್ಮ ಗಿರಿಜಮ್ಮ' ಕೃತಿಯ ಲೋಕಾರ್ಪಣೆ ಕಾರ್ಯಕ್ರಮವು ಆ.28ರಂದು ಮಧ್ಯಾಹ್ನ 12:30ಕ್ಕೆ ಇಲ್ಲಿನ ಮೋತಿ ಚನ್ನಬಸಮ್ಮ ವೀರಪ್ಪ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ.ಉಭಯ ಸಮಾಜದ ಅಧ್ಯಕ್ಷರಾದ ಕಂಚಿಕೇರಿ ಸುಶೀಲಮ್ಮ ಅಧ್ಯಕ್ಷತೆಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಬಿ. ವಾಮದೇವಪ್ಪ ಪುಸ್ತಕ ಬಿಡುಗಡೆಗೊಳಿಸಲಿದ್ದಾರೆ. ಖ್ಯಾತ ವ್ಯಂಗ್ಯಚಿತ್ರಕಾರ ಹೆಚ್.ಬಿ. ಮಂಜುನಾಥ್ ಕೃತಿಯ ಕುರಿತು ಮಾತನಾಡಲಿದ್ದು, ಕೃತಿಯ ಲೇಖಕಿ ರೇಣುಕಾ ಶಿವಾನಂದಪ್ಪ ಅವರ ತಾಯಿ ಗಿರಿಜಮ್ಮನವರ ಕುರಿತು ಮಾತನಾಡುವರು. ಅಕ್ಕಮಹಾದೇವಿ ಸಮಾಜದ ಕಾರ್ಯದರ್ಶಿ ದೊಗ್ಗಳ್ಳಿ ಸುವರ್ಣಮ್ಮ ಮತ್ತು ಮಹಿಳಾ ಸವಿವಾ ಸಮಾಜದ ಕಾರ್ಯದರ್ಶಿ ಜಯಮ್ಮ ನೀಲಗುಂದ ಉಪಸ್ಥಿತರಿರುವರು.

# ದೀಕ್ಷಾ ಭೂಮಿ ಯಾತ್ರೆಗೆ ಆಹ್ವಾನ

**ಹಾಸನ :** ಹೊಳೆನರಸೀಪುರ ತಾಲ್ಲೂಕಿನ ವ್ಯಾಪ್ತಿಯಲ್ಲಿನ ಡಾ॥ ಬಿ.ಆರ್ ಅಂಬೇಡ್ಕರ್ ರವರ ಅನುಯಾಯಿಗಳು ಮಹಾರಾಷ್ಟ್ರ ನಾಗಪುರದಲ್ಲಿನ ದೀಕ್ಷಾ ಭೂಮಿ ಯಾತ್ರೆಗೆ ದಿನಾಂಕ:30/09/2025 ರಿಂದ ದಿನಾಂಕ: 04/10/2025 ರ ವರೆಗೆ ಪ್ರಯಾಣಿಸಿ ಹಾಗೂ ಹಿಂದಿರುಗಿ ಬರುವ ಸಂಬಂಧ ಬಸ್ಸು ಮತ್ತು ರೈಲಿನ ಮೂಲಕ ವ್ಯವಸ್ಥೆ ಕಲ್ಪಿಸಲಾಗುತ್ತಿದ್ದು ಅರ್ಹ ಮತ್ತು ಆಸಕ್ತಿಯಿರುವ ಯಾತ್ರಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್ ಸೈಟ್ ಲಿಂಕ್ https://swd.karnataka.gov.in/website ಮೂಲಕ ಅರ್ಜಿಯನ್ನು ದಿನಾಂಕ:09/09/2025 ರೊಳಗೆ ಅರ್ಜಿ ಸಲ್ಲಿಸುವಂತೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು(ಗ್ರೇಡ್–2) ಸಮಾಜ ಕಲ್ಯಾಣ ಇಲಾಖೆ, ಹೊಳೆನರಸೀಪುರ ರವರ ಕಚೇರಿಯನ್ನು ಸಂಪರ್ಕಿಸುವಂತೆ ತಿಳಿಸಿರುತ್ತಾರೆ.

# ಸುಂಕ: ತೊಂದರೆ ಆಗುವ ಕ್ಷೇತ್ರಕ್ಕೆ ನೆರವು'

## ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಹೇಳಿಕೆ



**ನವದೆಹಲಿ:** ಅಮೆರಿಕವು ಭಾರತದ ಸರಕುಗಳ ಮೇಲೆ ವಿಧಿಸಿರುವ ಭಾರಿ ಪ್ರಮಾಣದ ಸುಂಕದ ಕಾರಣದಿಂದಾಗಿ ತೊಂದರೆಗೆ ಒಳಗಾಗಬಹುದಾದ ಹವಳ ಮತ್ತು ಆಭರಣ, ಜವಳಿ, ಸೀಗಡಿ ಹಾಗೂ ಎಂಎಸ್‌ಎಂಇ ವಲಯಕ್ಕೆ ಬೆಂಬಲವಾಗಿ ನಿಲ್ಲಲು ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಕ್ರಮ ಕೈಗೊಳ್ಳಲಿದೆ ಎಂದು ಗವರ್ನರ್ ಸಂಜಯ್ ಮಲ್ಹೋತ್ರಾ ಸೋಮವಾರ ಹೇಳಿದ್ದಾರೆ.

'ಈ ಬಗ್ಗೆ ಕೇಂದ್ರ ಸರ್ಕಾರವು ಪರಿಶೀಲನೆ ನಡೆಸುತ್ತಿದೆ. ನಾವು ಆರ್‌ಬಿಐ ಕಡೆಯಿಂದ ರೆಪೊ ದರ ಇಳಿಸುವ ಕೆಲಸ ಮಾಡುತ್ತಿದ್ದೇವೆ. ಅರ್ಥ ವ್ಯವಸ್ಥೆಯಲ್ಲಿ ನಗದು ಹರಿವು ಹೆಚ್ಚು ಮಾಡಲು ನಾವು ರೆಪೊ ದರವನ್ನು ಶೇಕಡ 1ರಷ್ಟು ತಗ್ಗಿಸಿದ್ದೇವೆ' ಎಂದು ಮಲ್ಹೋತ್ರಾ ಅವರು ಹೇಳಿದ್ದಾರೆ.

ತೊಂದರೆಗೆ ಸುಂಕದ ಕಾರಣದಿಂದಾಗಿ ಒಳಗಾಗಬಹುದಾದ ವಲಯಗಳಿಗೆ ನೆರವು ಒದಗಿಸಲು ಸರ್ಕಾರ ಎಷ್ಟರಮಟ್ಟಿಗೆ ಸಿದ್ಧವಾಗಿದೆ ಎಂಬ ಪ್ರಶ್ನೆಗೆ ಪ್ರತಿಯಾಗಿ ಅವರು ಈ ಉತ್ತರ ನೀಡಿದ್ದಾರೆ.

'ಅರ್ಥ ವ್ಯವಸ್ಥೆಯ ಬೆಳವಣಿಗೆಗೆ ಹಾಗೂ ಸುಂಕದಿಂದಾಗಿ ಹೆಚ್ಚಿನ ಪ್ರಮಾಣದಲ್ಲಿ ತೊಂದರೆಗೆ ಒಳಗಾಗುವ ವಲಯಗಳ ಬೆಳವಣಿಗೆಗೆ, ಒಂದುವೇಳೆ ತೊಂದರೆ ಉಂಟಾದಲ್ಲಿ, ನಮ್ಮಿಂದ ಅಗತ್ಯವಿರುವ ಬೆಂಬಲ ಕ್ರಮಗಳನ್ನು ಕೈಗೊಳ್ಳಲು ಹಿಂದೇಟು ಹಾಕುವುದಿಲ್ಲ'

ಎಂದು ಮುಂಬೈನಲ್ಲಿ ಕಾರ್ಯಕ್ರಮ–ವೊಂದರಲ್ಲಿ ಹೇಳಿದ್ದಾರೆ.

ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಭಾರತದಿಂದ ಆಮದು ಮಾಡಿಕೊಳ್ಳುವ ಸರಕುಗಳ ಮೇಲೆ ಶೇಕಡ 50ರಷ್ಟು ಸುಂಕ ವಿಧಿಸಿದ್ದಾರೆ. ಇದು ಭಾರತದಿಂದ ಅಮೆರಿಕಕ್ಕೆ ವಿವಿಧ ಸರಕುಗಳನ್ನು, ಉತ್ಪನ್ನಗಳನ್ನು ರಫ್ತು ಮಾಡುವ ವಹಿವಾಟಿನಲ್ಲಿ ತೊಡಗಿಸಿ–ಕೊಂಡವರಲ್ಲಿ ಆತಂಕ ಮೂಡಿಸಿದೆ.

'ಈಗ ನಡೆಯುತ್ತಿರುವ ವಾಣಿಜ್ಯ ಒಪ್ಪಂದ ಕುರಿತ ಮಾತುಕತೆಗಳು ಫಲ ನೀಡುತ್ತವೆ, ದುಷ್ಪರಿಣಾಮ ಕಡಿಮೆ ಇರುತ್ತದೆ ಎಂಬುದು ನಮ್ಮ ಭರವಸೆ' ಎಂದು ಅವರು ಹೇಳಿದ್ದಾರೆ.

ಅಂತರರಾಷ್ಟ್ರೀಯ ಮಟ್ಟದ ವಹಿವಾಟುಗಳಲ್ಲಿ ರೂಪಾಯಿ ಬಳಕೆ ಹೆಚ್ಚು ಮಾಡುವುದರ ಬಗೆಗಿನ ಪ್ರಶ್ನೆಗೆ ಅವರು, 'ಅಂತರರಾಷ್ಟ್ರೀಯ ಮಟ್ಟದ ವ್ಯಾಪಾರಗಳು ರೂಪಾಯಿ ಮೂಲಕ ನಡೆಯುವುದು ಸಾಧ್ಯವಾಗಲು ದಶಕಗಳ ಅವಧಿ ಬೇಕಾಗುತ್ತದೆ' ಎಂದು ಉತ್ತರಿಸಿದ್ದಾರೆ.

'ಈ ವಿಚಾರವಾಗಿ ಆರ್‌ಬಿಐ ಹಲವು ವರ್ಷಗಳಿಂದ ಕೆಲಸ ಮಾಡುತ್ತಿದೆ. ವ್ಯಾಪಾರ ವಹಿವಾಟುಗಳ ಸ್ಥಳೀಯ ಕರೆನ್ಸಿಯಲ್ಲಿ ನಡೆಯುವಂತೆ ಆಗುವುದು ದೇಶಕ್ಕೆ ಬಹಳ ಮುಖ್ಯ ಈ ರೀತಿ ಅದಾಗ ನಮಗೆ ವಿದೇಶಿ ವಿನಿಮಯದಲ್ಲಿನ ಏರಿಳಿತಗಳ ಸಮಸ್ಯೆಯಿಂದ ರಕ್ಷಣೆ ಪಡೆಯಲು ಸಾಧ್ಯವಾಗುತ್ತದೆ' ಎಂದು ಅವರು ಹೇಳಿದ್ದಾರೆ

# ಬಸವತತ್ವ ಪೀಠದಲ್ಲಿ ಐಸಿರಿ ಸ್ಟೀಲ್ ಬ್ಯಾಂಕ್ ಉದ್ಘಾಟನೆ : ರೋಹನ್ ಭಾರ್ಗವಪುರಿ

**ಚಿಕ್ಕಮಗಳೂರು:** ಕಲ್ಯಾಣ ನಗರದ ಬಸವತತ್ವ ಪೀಠದ ಆವರಣದಲ್ಲಿ ಬೆಂಗಳೂರಿನ ಅದಮ್ಯ ಚೇತನ ಹಾಗೂ ಐಸಿರಿ ಫೌಂಡೇಶನ್ ಸಂಯುಕ್ತಾಶ್ರಯದಲ್ಲಿ ಆ.28 ರಂದು ಸಂಜೆ 6 ಗಂಟೆಗೆ "ಐಸಿರಿ ಸ್ಟೀಲ್ ಬ್ಯಾಂಕ್:" ಉದ್ಘಾಟನೆ ಹಾಗೂ ಐಸಿರಿ ಸಾಧಕ ಪ್ರಶಸ್ತಿ ಪ್ರದಾನ ಸಮಾರಂಭ ಕೃತಿಗಳ ಲೋಕಾರ್ಪಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಐಸಿರಿ ಫೌಂಡೇಶನ್ ಅಧ್ಯಕ್ಷ ರೋಹನ್ ಭಾರ್ಗವಪುರಿ ತಿಳಿಸಿದರು.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಸಂಸ್ಥೆಯು ಭರವಸೆ ಮತ್ತು ಸುಧಾರಣೆ ಕಾರ್ಯದ ಜವಾಬ್ದಾರಿಯನ್ನು ತನ್ನ ಹೆಗಲಿಗೇರಿಸಿಕೊಂಡು ವಿವಿಧ ಆಯಾಮದಲ್ಲಿ ಈಗಾಗಲೇ ದಿಟ್ಟ ಹೆಜ್ಜೆಯನ್ನಿಟ್ಟಿದೆ. ಐಸಿರಿ 'ಪರ್ಸ್ಪೆಕ್ಟಿವ್'ಯೆಂಬ ಆಯಾಮದಡಿ ಜ್ಞಾನ ಶಿಬಿರ, 'ಐಸಿರಿ ಸಸ್ಟೇನೆಬಿಲಿಟಿ'ಯೆಂಬ ಆಯಾಮದಡಿಯಲ್ಲಿ 'ಹಸಿರು ಸಮರ್ಥನೀಯ ಭವಿಷ್ಯಕ್ಕೆ' ಐಸಿರಿ ಇಂಡಿಯಾ ಆಯಾಮದಡಿ 'ನಾಗರಿಕ ನಿರ್ಮಾಣ' ಎಂಬ ಧ್ಯೇಯದೊಂದಿಗೆ ಕಾರ್ಯನಿರ್ವಹಿಸುತ್ತಿದೆ ಎಂದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಬಸವತತ್ವ ಪೀಠದ ಡಾ. ಬಸವ ಮರುಳಸಿದ್ಧ ಸ್ವಾಮಿಗಳು ವಹಿಸಲಿದ್ದು, ತಮ್ಮ ನೇತೃತ್ವದಲ್ಲಿ ನಡೆಯುವ ಈ ಉದ್ಘಾಟನಾ ಸಮಾರಂಭ ತೇಜಸ್ವಿನಿ ಅನಂತಕುಮಾರ್ ಅವರ ಮಾರ್ಗದರ್ಶನದಲ್ಲಿ ಅನಂತ ಪ್ಲೇಟ್ ಬ್ಯಾಂಕ್‌ನ 27ನೇ ಘಟಕ ಇದಾಗಿದ್ದು, ಈಗಾಗಲೇ 2 ಸಾವಿರ ಸ್ಟೀಲ್ ತಟ್ಟೆಗಳನ್ನು ಕೊಡುಗೆಯಾಗಿ ನೀಡಿದ್ದಾರೆ ಎಂದು ವಿವರಿಸಿದರು.

ಈ ಕಾರ್ಯಕ್ರಮದಲ್ಲಿ ನಟ, ನಿರ್ಮಾಪಕ, ನಿರ್ದೇಶಕ ಮತ್ತು ರಂಗಕರ್ಮಿಯಾಗಿ ಕಲಾಸೇವೆಯನ್ನು ಸಲ್ಲಿಸುತ್ತಿರುವ ಟಿ.ಎಸ್.



ನಾಗಾಭರಣ ಹಾಗೂ ಸಾಮಾಜಿಕ ಕಾರ್ಯಕರ್ತೆ ಹಸಿರು ಭಾನುವಾರ ಸಮಾಜದ ಹಿತಕ್ಕಾಗಿ ನಿತ್ಯ ಅನ್ನದಾನ ಸೇವೆ ಸಲ್ಲಿಸುತ್ತಿರುವ ಅದಮ್ಯ ಚೇತನ ಸಂಸ್ಥೆಯ ಅಧ್ಯಕ್ಷರೂ, ಸಂಸ್ಥಾಪಕರೂ ಆದ ತೇಜಸ್ವಿನಿ ಅನಂತಕುಮಾರ್, ಶಾಸಕ ಹೆಚ್.ಡಿ. ತಮ್ಮಯ್ಯ, ಲೈಫ್‌ಲೈನ್ ಫೀಡ್ಸ್‌ನ ಸಂಸ್ಥಾಪಕ ಕಿಶೋರ್ ಕುಮಾರ್ ಹೆಗ್ಡೆ, ನಗರಸಭಾಧ್ಯಕ್ಷೆ ಶೀಲಾದಿನೇಶ್, ಪೌರಾಯುಕ್ತ ಬಿ.ಸಿ. ಬಸವರಾಜ್ ಮತ್ತಿತರರು ಭಾಗವಹಿಸಲಿದ್ದಾರೆಂದು ಹೇಳಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಐವರು ಸಾಧಕರಿಗೆ 'ಐಸಿರಿ ಸಾಧಕ' ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದೆಂದು ಹೇಳಿದ ಅವರು, ಟಿ.ಎಸ್. ನಾಗಾಭರಣ, ತೇಜಸ್ವಿನಿ ಅನಂತಕುಮಾರ್, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ನೈಸರ್ಗಿಕ ಕೃಷಿಕ ಚಂದ್ರಶೇಖರ್ ನಾರಣಾಪುರ, ವೈಲ್ಡ್ ಕ್ಯಾಟ್–ಸಿ ಸಂಸ್ಥಾಪಕ ಡಿ.ವಿ ಗಿರೀಶ್ ಹಾಗೂ ಶಿವಮೊಗ್ಗದ ಸಮನ್ವಯ ಟ್ರಸ್ಟ್ ಸಂಸ್ಥಾಪಕ ಸಮನ್ವಯ ಕಾಶಿ ಇವರುಗಳನ್ನು ಐಸಿರಿ ಪ್ರಶಸ್ತಿಗೆ ಆಯ್ಕೆಮಾಡಲಾಗಿದೆ ಎಂದರು.

ನಾಗಶ್ರೀ ತ್ಯಾಗರಾಜ್ ಅವರ 'ಪದ್ಮಪತ್ರೆ', ಹುಳಿಗೆರೆ ಮಲ್ಲಿಕಾರ್ಜುನ್ ಅವರ 'ಒನ್ ಮಿನಿಟ್ ಪ್ಲೀಸ್' ಕೃತಿಗಳು ಅಂದು ಲೋಕಾರ್ಪಣೆಯಾಗಲಿವೆ ಎಂದು ತಿಳಿಸಿದರು.

ಈ ಸ್ಟೀಲ್ ಬ್ಯಾಂಕಿನ ಸದುಪಯೋಗವನ್ನು ಜನತೆ ಪಡೆದುಕೊಳ್ಳಬೇಕೆಂದು ಮನವಿ ಮಾಡಿದ ಅವರು, ಆ.28 ರಂದು ನಡೆಯಲಿರುವ ಉದ್ಘಾಟನಾ ಕಾರ್ಯಕ್ರಮಕ್ಕೆ ಅತೀ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ವಿನಂತಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಐಸಿರಿ ಫೌಂಡೇಶನ್‌ನ ಟ್ರಸ್ಟಿಗಳಾದ ಬಿ.ತಿಪ್ಪೇರುದ್ರಪ್ಪ, ನಂಜೇಶ್ ಬೆಣ್ಣೂರ್, ಸದಾಶಿವಪ್ಪ, ಜಗದೀಶ್ ಬಾಬು, ಬಿ.ಎಂ ಶಶಿಧರ್ ಉಪಸ್ಥಿತರಿದ್ದರು.

# ಕುಂದು ಕೊರತೆ ಸಭೆ

**ಹಾಸನ :** ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸೆ.01 ರಂದು ಪೂರ್ವಹ್ನ 10 ಗಂಟೆಗೆ ಜಿಲ್ಲಾ ಪಂಚಾಯತ್ ಹೊಯ್ಸಳ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಲ್ಪಸಂಖ್ಯಾತ ಸಮುದಾಯದವರ ಕುಂದುಕೊರತೆ ಸಭೆಯನ್ನು ನಡೆಸಲಾಗುತ್ತದೆ.

ಈ ಸಂಬಂಧ ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ) ಜನಾಂಗದವರಿಗೆ/ ಸಮುದಾಯದವರಿಗೆ ಸಂಬಂಧಿಸಿದಂತೆ ಕುಂದುಕೊರತೆ/ ಆಹವಾಲು/ ಮನವಿಗಳು ಇದ್ದಲ್ಲಿ, ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಆಕಾಶವಾಣಿ ಹಿಂಭಾಗ, ಸಾಲಗಾಮೆ ರಸ್ತೆ, ಹಾಸನ ಇಲ್ಲಿಗೆ ಆ.29 ರವರೆಗೆ ಸಲ್ಲಿಸಲು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಆಕಾಶವಾಣಿ ಹಿಂಭಾಗ, ಹಾಸನ. ದೂರವಾಣಿ ಸಂಖ್ಯೆ: 08172–268373/08172–267373 ಗೆ ಸಂರ್ಪಕಿಸಬಹುದಾಗಿದೆ. ಹಾಗೂ ಆಯಾ ತಾಲ್ಲೂಕು ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಲು ತಿಳಿಸಿದ್ದಾರೆ.

# ಅರಸೀಕೆರೆ ತಾಲ್ಲೂಕಿನ ಅಪರ ಸರ್ಕಾರಿ ವಕೀಲರ ಹುದ್ದೆಗೆ ಅರ್ಜಿ ಆಹ್ವಾನ

**ಹಾಸನ :** ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕಿನ ಹಿರಿಯ ಶ್ರೇಣಿ ನ್ಯಾಯಾಲಯದ ಅಪರ ಸರ್ಕಾರಿ ವಕೀಲರ ಹುದ್ದೆಯ ಅವಧಿ ಮುಕ್ತಾಯವಾಗಿರುವ ಹಿನ್ನೆಲೆಯಲ್ಲಿ ಸದರಿ ಹುದ್ದೆಯನ್ನು ಹೊಸದಾಗಿ ಭರ್ತಿ ಮಾಡುವ ಸಂಬಂಧವಾಗಿ ಕರ್ನಾಟಕ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳು, 1977 ರ ನಿಯಮ 5 ಮತ್ತು 26(2) ಹಾಗೂ 12 (ಎ) (ಬಿ) ಮತ್ತು (ಸಿ) ರನ್ವಯ 07 ವರ್ಷಗಳ ಕಾಲ ವಕೀಲ ವೃತ್ತಿಯನ್ನು ಪೂರೈಸಿದ ಅರ್ಹ ವಕೀಲರುಗಳಿಗೆ ಅರಸೀಕೆರೆ ತಾಲ್ಲೂಕಿನ ಹಿರಿಯ ಶ್ರೇಣಿ ನ್ಯಾಯಾಲಯದ ಅಪರ ಸರ್ಕಾರಿ ವಕೀಲರ ಹುದ್ದೆಗೆ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 15–09–2025 ರ ಸಂಜೆ 5.30 ಗಂಟೆ ಆಗಿರುತ್ತದೆ. ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ಎಲ್ಲಾ ದಾಖಲಾತಿಗಳೊಂದಿಗೆ ಜಿಲ್ಲಾಧಿಕಾರಿ, ಕಚೇರಿ, ಹಾಸನ ಜಿಲ್ಲೆ, ಹಾಸನ. ಇಲ್ಲಿಗೆ ಕೊನೆಯ ದಿನಾಂಕದೊಳಗೆ ಸಲ್ಲಿಸಲು ತಿಳಿಸಿದೆ. ಕೊನೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ದೂರವಾಣಿ ಸಂಖ್ಯೆ:08172–253345

ದಾಖಲಾತಿಗಳು:– ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಪ್ರತಿ,ಎಲ್.ಎಲ್.ಬಿ. ಅಂಕಪಟ್ಟಿಗಳು. ವಕೀಲ ವೃತ್ತಿಯ ನೋಂದಣಿ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ವಕೀಲ ವೃತ್ತಿ ನಡೆಸಿದ ಅನುಭವದ ಕುರಿತು ಸಂಕ್ಷಿಪ್ತ ವಿವರಗಳು, ಅರ್ಜಿದಾರರು ಗಣಕ ಯಂತ್ರದ ಪರಿಣಿತಿ/ ಜ್ಞಾನವುಳ್ಳವರೇ, ಹೌದಾದಲ್ಲಿ ಈ ಬಗ್ಗೆ ಸಂಕ್ಷಿಪ್ತ ಮಾಹಿತಿ,(ಪ್ರಮಾಣ ಪತ್ರ). ಅರ್ಜಿದಾರರ ಭಾವಚಿತ್ರ, ಈ ದಾಖಲೆಗಳನ್ನು ಕಡ್ಡಾಯವಾಗಿ ಪತ್ರಾಂಕಿತ ಅಧಿಕಾರಿರವರಿಂದ ಧೃಢೀಕರಿಸಿ ಸಲ್ಲಿಸುವಂತೆ ಜಿಲ್ಲಾಧಿಕಾರಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

**ಹಾಸನ :** ಹಾಸನ ಜಿಲ್ಲೆಯ ಅರಕಲಗೂಡು ತಾಲ್ಲೂಕಿನ ಹಿರಿಯ ಶ್ರೇಣಿ ನ್ಯಾಯಾಲಯದ ಅಪರ ಸರ್ಕಾರಿ ವಕೀಲರ ಹುದ್ದೆಯ ಅವಧಿ ಮುಕ್ತಾಯವಾಗಿರುವ ಹಿನ್ನೆಲೆಯಲ್ಲಿ ಸದರಿ ಹುದ್ದೆಯನ್ನು ಹೊಸದಾಗಿ ಭರ್ತಿ ಮಾಡುವ ಸಂಬಂಧವಾಗಿ ಕರ್ನಾಟಕ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳು, 1977 ರ ನಿಯಮ 5 ಮತ್ತು 26(2) ಹಾಗೂ 12 (ಎ) (ಬಿ) ಮತ್ತು (ಸಿ) ರನ್ವಯ 07 ವರ್ಷಗಳ ಕಾಲ ವಕೀಲ ವೃತ್ತಿಯನ್ನು ಪೂರೈಸಿದ ಅರ್ಹ ವಕೀಲರುಗಳಿಗೆ ಅರಕಲಗೂಡು ತಾಲ್ಲೂಕಿನ ಹಿರಿಯ ಶ್ರೇಣಿ ನ್ಯಾಯಾಲಯದ ಅಪರ ಸರ್ಕಾರಿ ವಕೀಲರ ಹುದ್ದೆಗೆ ಅರ್ಜಿಯನ್ನು ಆಹ್ವಾನಿಸಲಾಗಿದೆ.

## ಜಿಲ್ಲೆಯ 4.5 ಲಕ್ಷ ಕುಟುಂಬಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ

# ಅಗತ್ಯ ಸಿದ್ಧತೆ ಕೈಗೊಳ್ಳಲು ಜಿಲ್ಲಾಧಿಕಾರಿ ವೆಂಕಟೇಶ್ ಸೂಚನೆ

**ಚಿತ್ರದುರ್ಗ :** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ರಾಜ್ಯಾದ್ಯಂತ ಕುಟುಂಬಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕೈಗೊಳ್ಳಲಿದ್ದು, ಇದಕ್ಕಾಗಿ ಅಗತ್ಯ ಸಿದ್ಧತೆಗಳನ್ನು ವ್ಯವಸ್ಥಿತ ರೀತಿಯಲ್ಲಿ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕೈಗೊಳ್ಳುವ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಏರ್ಪಡಿಸಿದ ಪೂರ್ವಸಿದ್ಧತಾ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಎಲ್ಲ ಕುಟುಂಬಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಕೈಗೊಳ್ಳುವ ಪ್ರಕ್ರಿಯೆಯನ್ನು ಆರಂಭಿಸಿದೆ. ಜಿಲ್ಲೆಯಲ್ಲಿ ಸುಮಾರು 4.5 ಲಕ್ಷ ಕುಟುಂಬಗಳಿದ್ದು, ಎಲ್ಲ ಕುಟುಂಬಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಆಗಬೇಕು, ಯಾವುದೇ ಕುಟುಂಬಗಳು ಸಮೀಕ್ಷೆಯಿಂದ ಹೊರಗುಳಿಯದಂತೆ ಎಚ್ಚರ ವಹಿಸಬೇಕು. ಸಾಮಾನ್ಯವಾಗಿ ಎಲ್ಲ ವಾಸದ ಮನೆಗಳಿಗೆ ವಿದ್ಯುತ್ ಸಂಪರ್ಕ ಇರುವುದರಿಂದ ವಾಸದ ಮನೆಗಳ ಆರ್.ಆರ್. ಮೀಟರ್ ಆಧಾರದ ಮೇಲೆ ಮನೆಗಳನ್ನು ಗುರುತಿಸಿ, ಅಲ್ಲಿರುವ ಜನರ ಸಮೀಕ್ಷೆ ಮಾಡುವುದರಿಂದ ಯಾವುದೇ ಮನೆಗಳು



ಸಮೀಕ್ಷಾ ವ್ಯಾಪ್ತಿಯಿಂದ ತಪ್ಪಿ ಹೋಗುವುದಿಲ್ಲ. ಹೀಗಾಗಿ ಮೊದಲ ಹಂತದಲ್ಲಿ ಜಿಲ್ಲೆಯಲ್ಲಿರುವ ಎಲ್ಲ ಮನೆಗಳ ವಿದ್ಯುತ್ ಮೀಟರ್ ರೀಡರ್‌ಗಳಿಂದ ಕುಟುಂಬಗಳ ಪಟ್ಟಿ ಮಾಡಿ, ಈ ಕುರಿತು ಮನೆಗಳಿಗೆ ಜಿಯೋ ಟ್ಯಾಗಿಂಗ್‌ಗಾಗಿ ಸ್ಟಿಕರ್‌ಗಳನ್ನು ಅಳವಡಿಸುವ ಕಾರ್ಯ ಆರಂಭವಾಗಿದೆ. ಜಿಲ್ಲೆಯಲ್ಲಿ ಯಾವುದೇ ಕುಟುಂಬಗಳು ಸಮೀಕ್ಷೆಯಿಂದ ಹೊರಗುಳಿಯಬಾರದು. ವಿದ್ಯುತ್ ಮೀಟರ್ ರೀಡರ್ ಸಿಬ್ಬಂದಿಯು ಆರ್‌ಆರ್ ನಂಬರ್ ಹೊಂದಿರುವ ಕುಟುಂಬಗಳ ಪಟ್ಟಿ ಮಾಡುವರು. ಹೀಗಾಗಿ ಸಮೀಕ್ಷೆ ಕಾರ್ಯ ಮುಗಿಯುವವರೆಗೂ ಸಾರ್ವಜನಿಕರು ತಮ್ಮ ಮನೆಗಳಿಗೆ ಅಂಟಿಸಲಾಗುವ ಜಿಯೋ ಟ್ಯಾಗಿಂಗ್ ಸ್ಟಿಕರ್ ಅನ್ನು ತೆಗೆದುಹಾಕಬಾರದು ಎಂದರು.

ಅನಧಿಕೃತ ಕಟ್ಟಡಗಳು, ಸ್ಲಂ ಗಳು ಮತ್ತಿತರ ಪ್ರದೇಶಗಳಲ್ಲಿ ಆರ್‌ಆರ್ ನಂಬರ್ ಹೊಂದಿರದ ಸುಮಾರು 60 ರಿಂದ 70 ಸಾವಿರ ಕುಟುಂಬಗಳು ಜಿಲ್ಲೆಯಲ್ಲಿವೆ, ಅಂತಹವರ ಕುಟುಂಬಗಳೂ ಕೂಡ ಸಮೀಕ್ಷೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕಿದೆ. ಹೀಗಾಗಿ ಅಂತಹ ಕುಟುಂಬಗಳ ಪ್ರತ್ಯೇ ಪಟ್ಟಿಯನ್ನು ಆಯಾ ನಗರ, ಸ್ಥಳೀಯ ಸಂಸ್ಥೆಗಳ ಸಹಯೋಗದಲ್ಲಿ ಮಾಡಿಕೊಳ್ಳಬೇಕು, ಇದಕ್ಕೆ ಆಯಾ ನಗರ, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಸಹಕಾರ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕಾರ್ಯ ದಸರಾ ರಜೆ ಅವಧಿಯಲ್ಲಿ ನಡೆಸಲಾಗುತ್ತಿದ್ದು, ಸೆಪ್ಟಂಬರ್ 22 ರಿಂದ ಕುಟುಂಬಗಳ ಸಮೀಕ್ಷೆ ಆರಂಭಗೊಂಡು ಅಕ್ಟೋಬರ್ 07 ರೊಳಗೆ ಪೂರ್ಣಗೊಳಿಸುವ ಗುರಿಯನ್ನು ನಿಗದಿಪಡಿಸಲಾಗಿದೆ. ಸಮೀಕ್ಷಾ ಕಾರ್ಯವನ್ನು ಶಿಕ್ಷಕರೇ ಕೈಗೊಳ್ಳಬೇಕಿರುತ್ತದೆ. ಸಮೀಕ್ಷೆಗಾಗಿಯೇ ವಿಶೇಷವಾದ ಆ್ಯಪ್ ಅಭಿವೃದ್ಧಿಪಡಿಸಲಾಗಿದ್ದು, ಸುಮಾರು 65 ಪ್ರಶ್ನಾವಳಿಗಳಿರುತ್ತವೆ. ಕುಟುಂಬಗಳಿಂದ ಮಾಹಿತಿ ಪಡೆದು, ಈ ಆ್ಯಪ್ ಮೂಲಕವೇ ಸಮೀಕ್ಷೆ ನಡೆಸಬೇಕು. ಜಿಲ್ಲೆಯಲ್ಲಿನ ಒಟ್ಟು ಕುಟುಂಬಗಳ ಸಂಖ್ಯೆಗೆ ಅನುಗುಣವಾಗಿ, ಪ್ರತಿ ಸಮೀಕ್ಷೆದಾರರು ಕನಿಷ್ಟ 80 ರಿಂದ 100 ಮನೆಗಳಿಗೆ ಖುದ್ದು ಭೇಟಿ ಮಾಡಿ ಸಮೀಕ್ಷೆ ಮಾಡಬೇಕಾಗುತ್ತದೆ. ಹೀಗಾಗಿ ಜಿಲ್ಲೆಯಲ್ಲಿ ಲಭ್ಯವಿರುವ ಒಟ್ಟು 6 ಸಾವಿರ ಶಿಕ್ಷಕರ ಹೆಸರು, ಕೆಜಿಐಡಿ ನಂಬರ್, ಮೊಬೈಲ್ ನಂಬರ್ ಸಹಿತ ವಿವರವನ್ನು ಪಂಚಾಯತಿವಾರು ಹಾಗೂ ಕ್ಲಸ್ಟರ್ ವಾರು ಮಾಡಿ ಸಲ್ಲಿಸಬೇಕು, 50 ಸಮೀಕ್ಷೆದಾರರಿಗೆ ಒಬ್ಬರು ಮಾಸ್ಟರ್ ಟ್ರೈನರ್ ಕಂ ಮೇಲ್ವಿಚಾರಕರನ್ನು ನೇಮಿಸಬೇಕು ಎಂದು ಡಿಡಿಪಿಐ ಮಂಜುನಾಥ್ ಅವರಿಗೆ ಸೂಚನೆ ನೀಡಿದ ಜಿಲ್ಲಾಧಿಕಾರಿಗಳು, ಸಮೀಕ್ಷೆ ಕಾರ್ಯಕ್ಕೆ ಸಹಕಾರ ತೋರದ ಶಿಕ್ಷಕರ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಜಿಲ್ಲೆಯಲ್ಲಿ ಜರುಗುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕಾರ್ಯ ಸಂಬಂಧ ಸರ್ಕಾರದಿಂದ ನೀಡಲಾಗುವ ಸೂಚನೆಗಳು, ಮಾರ್ಗಸೂಚಿಗಳನ್ನು ಸಂಬಂಧಪಟ್ಟ ಅಧಿಕಾರಿ, ಸಿಬ್ಬಂದಿಗಳಿಗೆ ನಿರಂತರವಾಗಿ ತಲುಪಿಸುವ ಕಾರ್ಯ ಆಗಬೇಕು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪುಷ್ಪಲತಾ ಅವರಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಶಿ, ಡಿಡಿಪಿಐ ಮಂಜುನಾಥ್, ಡಿಯುಡಿಸಿ ಯೋಜನಾ ನಿರ್ದೇಶಕಿ ರೇಷ್ಮಾ ಹಾನಗಲ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪುಷ್ಪಲತಾ, ಬೆಸ್ಕಾಂ ಚಿತ್ರದುರ್ಗ ವಿಭಾಗದ ಕಾರ್ಯಪಾಲಕ ಅಭಿಯಂತರ ತಿಮ್ಮರಾಯ, ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ನಿಗದಿತ ಸ್ಥಳದಲ್ಲಿಯೇ ಗಣಪತಿ ಮೂರ್ತಿಗಳನ್ನು ವಿಸರ್ಜಿಸಲು ಶಾಸಕ ತಮ್ಮಯ್ಯ ಮನವಿ

**ಚಿಕ್ಕಮಗಳೂರು:** ಜಿಲ್ಲಾಡಳಿತದ ಆದೇಶದಂತೆ ಪರಿಸರಕ್ಕೆ ಪೂರಕವಾಗಿ ತಯಾರಾಗಿರುವ ಮಣ್ಣಿನ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸಿ ವಿಸರ್ಜಿಸಬೇಕೆಂದು ಸಾರ್ವಜನಿಕರಲ್ಲಿ ಶಾಸಕ ಹೆಚ್.ಡಿ. ತಮ್ಮಯ್ಯ ಮನವಿ ಮಾಡಿದರು.

ಅವರು ನಗರಸಭೆ ವತಿಯಿಂದ ಕೋಟೆ–ಕೆರೆ ಸೇರಿದಂತೆ ನಗರದ ಮತ್ತಿತರೆಡೆ ಗಣಪತಿ ವಿಸರ್ಜಿಸಲು ಸಿದ್ಧತೆ ನಡೆಸಿರುವ ಬಗ್ಗೆ ಪರಿಶೀಲಿಸಿ ಮಾತನಾಡಿದರು.

ನಗರದ ಜನತೆ ಗೌರಿ ಗಣೇಶ ಹಬ್ಬಗಳ ಸಂದರ್ಭದಲ್ಲಿ ಶಾಂತಿ ಸೌಹಾರ್ದತೆ ಕಾಪಾಡಬೇಕು ಜೊತೆಗೆ ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಮೆರವಣಿಗೆ ನಡೆಸಬೇಕೆಂದು ವಿನಂತಿಸಿದರು.

ಇದೊಂದು ಧಾರ್ಮಿಕ ಕಾರ್ಯಕ್ರಮವಾಗಿದ್ದು, ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಸರ್ವರಲ್ಲಿ ಭಕ್ತಿಭಾವ ತುಂಬಿ ಬರಲಿ, ಇದ–ಕ್ಕೆ ಜಿಲ್ಲಾಡಳಿತ ಮತ್ತು ತಾವು ಎಲ್ಲಾ ರೀತಿಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಸ್ವತಂತ್ರ ಪೂರ್ವದಲ್ಲಿ ಬಾಲಗಂಗಾಧರ ತಿಲಕರು ಗಣಪತಿ ಪ್ರತಿಷ್ಠಾಪಿಸಿ ಎಲ್ಲರನ್ನೂ ಒಗ್ಗೂಡಿಸಿಕೊಂಡು ಹೋರಾಟ ನಡೆಸಿದ ಪರಿಣಾಮ ಸ್ವತಂತ್ರ ಸಂಗ್ರಾಮದಲ್ಲಿ ಯಶಸ್ವಿಯಾಗಿದ್ದರು ಎಂದ ಅವರು, ಹಬ್ಬದ ಅಂಗವಾಗಿ ಬೀದಿಬದಿ ಲೈಟ್ ಅಳವಡಿಸಿ ಕಲ್ಯಾಣಿ ಸುತ್ತ ಮುಂಜಾಗ್ರತಾ ಕ್ರಮವಾಗಿ ಭದ್ರತೆಯನ್ನು ಏರ್ಪಡಿಸುವಂತೆ ಸಣ್ಣ ನೀರಾವರಿ ಇಲಾಖೆ ಇಂಜಿನಿಯರ್‌ಗಳನ್ನು ಆಹ್ವಾನಿಸಿ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ಕೋಟೆಕೆರೆ ವೀಕ್ಷಣೆ ಮಾಡಿ ಗೌರಿ ಗಣೇಶ ಹಬ್ಬದ ಅಂಗವಾಗಿ ಗಣೇಶ ಮೂರ್ತಿಗಳನ್ನು ಪೂಜಿಸಿ 1–5 ದಿನಗಳವರೆಗೆ ಸಾರ್ವಜನಿಕರು, ಭಕ್ತಾದಿಗಳು ವಿಸರ್ಜಿಸುವ ಸಂಪ್ರದಾಯ



ಇದ್ದು, ಈ ಹಿಂದೆ ಬಸವನಹಳ್ಳಿ ಕೆರೆಯಲ್ಲಿ ವಿಸರ್ಜಿಸಲಾಗುತ್ತಿತ್ತು ಎಂದರು. ಈ ಕೆರೆ ಅಭಿವೃದ್ಧಿಪಡಿಸಲು 2022 ರ ನಂತರ ನಗರಸಭೆ ವತಿಯಿಂದ ಕೋಟೆಕೆರೆಯಲ್ಲಿ ಕಲ್ಯಾಣಿ ನಿರ್ಮಿಸಿ, ನಗರ ಸೇರಿದಂತೆ ಸುತ್ತಮುತ್ತಲ ನಾಗರಿಕರು ಗಣಪತಿ ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸಿ ವಿಸರ್ಜಿಸಲು ಅನುಕೂಲವನ್ನು ಕಲ್ಪಿಸಲಾಗಿದೆ ಎಂದು ಹೇಳಿದರು.

ಕೋಟೆಕೆರೆಯನ್ನು ಡಿಪಿಆರ್ ಮುಗಿಸಿ ಬೇಸಿಗೆಯಲ್ಲಿ ಸಂಪೂರ್ಣ ಅಭಿವೃದ್ಧಿ ಮಾಡುವುದಾಗಿ ಭರವಸೆ ನೀಡಿದ ಅವರು, ಬಸವನಹಳ್ಳಿ ಕೆರೆ ಅಭಿವೃದ್ಧಿಗೆ ಕೆಲವು ತಾಂತ್ರಿಕ ತೊಂದರೆಗಳಿದ್ದು, ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಸಭೆ ನಡೆಸಿ ಅಭಿವೃದ್ಧಿಪಡಿಸಲು ಗುರಿ ಹೊಂದಲಾಗಿದೆ ಎಂದರು.

ಪೌರಾಯುಕ್ತ ಬಿ.ಸಿ. ಬಸವರಾಜ್ ಮಾತನಾಡಿ, ಗಣೇಶ ವಿಸರ್ಜನೆ ಸಂಬಂಧ ಕೋಟೆಕೆರೆಯನ್ನು ಕಳೆದ ಒಂದು ವಾರದಿಂದ ನಗರಸಭೆ ಸಿಬ್ಬಂದಿ ಸ್ವಚ್ಚತೆ ಕಾರ್ಯ ನಡೆಸಿ ಕ್ರಮ ವಹಿಸುತ್ತಿದ್ದಾರೆಂದು ಹೇಳಿದರು.

ಗಣಪತಿ ವಿಸರ್ಜಿಸಲು ನಗರದ ನಾಗರಿಕರಿಗೆ ವಿಶೇಷ ಸೌಲಭ್ಯ ಕಲ್ಪಿಸಲಾಗಿದೆ. ನಗರದ ವಿವಿಧೆಡೆ ಆರು ಸ್ಥಳಗಳಲ್ಲಿ ಗಣಪತಿ ವಿಸರ್ಜಿಸಲು ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದ ಅವರು, ಇದರ ಸದುಪಯೋಗವನ್ನು ನಾಗರಿಕರು ಪಡೆದುಕೊಳ್ಳುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ನಗರಸಭಾಧ್ಯಕ್ಷೆ ಶೀಲಾದಿನೇಶ್, ಇಂಜಿನಿಯರ್ ಲೋಕೇಶ್, ಆರೋಗ್ಯ ನಿರೀಕ್ಷಕರಾದ ಈಶ್ವರ, ರಂಗಪ್ಪ, ಶ್ರೀನಿವಾಸ್, ಸಣ್ಣ ನೀರಾವರಿ ಇಲಾಖೆಯ ಇಂಜಿನಿಯರ್ ವಿಕಾಸ್ ಹಾಗೂ ನಗರಸಭೆ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ದೀಕ್ಷಾ ಭೂಮಿಗೆ ಯಾತ್ರೆಗೆ ಬಸ್ ವ್ಯವಸ್ಥೆ

**ಚಿಕ್ಕಮಗಳೂರು, ಆ.26:** 2025–26ನೇ ಸಾಲಿನಲ್ಲಿ ಅಕ್ಟೋಬರ್ 2 (ವಿಜಯದಶಮಿ) ರಂದು ನಾಗಪುರ ದೀಕ್ಷಾಭೂಮಿಯಲ್ಲಿ ನಡೆಯುವ ದಮ್ಮ ಪ್ರವರ್ತನ ದಿನದ ಕಾರ್ಯಕ್ರಮಕ್ಕೆ ಸೆಪ್ಟಂಬರ್ 30 ರಿಂದ ಅಕ್ಟೋಬರ್ 4 ರವರೆಗೆ ಕರ್ನಾಟಕ ರಾಜ್ಯದಿಂದ ಡಾ.ಬಿ.ಆರ್.ಅಂಬೇಡ್ಕರ್ ಅನುಯಾಯಿಗಳನ್ನು ಸಮಾಜ ಕಲ್ಯಾಣ ಇಲಾಖಾ ವತಿಯಿಂದ ನಾಗಪುರ ದೀಕ್ಷಾಭೂಮಿಗೆ ಯಾತ್ರೆ ಕೈಗೊಳ್ಳಲು ಕ್ರಮ ಕೈಗೊಳ್ಳಲಾಗಿದೆ.

ಸಾರಿಗೆ ವ್ಯವಸ್ಥೆ, ರೈಲು ಪ್ರಯಾಣದ ವ್ಯವಸ್ಥೆಯನ್ನು ಕಲ್ಪಿಸುವ ಯೋಜನೆಯಡಿ 2025–26ನೇ ಸಾಲಿನಲ್ಲಿ ಮಹಾರಾಷ್ಟ್ರದ ನಾಗಪುರದಲ್ಲಿನ ದೀಕ್ಷಾಭೂಮಿಗೆ ಭೇಟಿ ನೀಡಲಿರುವ ಯಾತ್ರಾರ್ಥಿಗಳಿಗೆ ಕೆ.ಎಸ್.ಆರ್.ಟಿ.ಸಿ. ರಾಜಹಂಸ ಬಸ್ಸುಗಳ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತಿದ್ದು, ದೀಕ್ಷಾಭೂಮಿಗೆ ಭೇಟಿ ನೀಡುವ ಯಾತ್ರಾರ್ಥಿಗಳು ವೆಬ್‌ಸೈಟ್ ಲಿಂಕ್ (<https://swdservices.karnataka.gov.in/>)ನಲ್ಲಿ ಅರ್ಜಿಯನ್ನು ಸಲ್ಲಿಸಲು ಸೆಪ್ಟಂಬರ್ 9ರವರೆಗೆ ನಿಗದಿಪಡಿಸಲಾಗಿದ್ದು ಆಸಕ್ತರು ಅರ್ಜಿ ಸಲ್ಲಿಸಲು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಗಿರಿಭಾಗದ ಪ್ರವಾಸ ಮುಂದೂಡಿ: ಪ್ರವಾಸಿಗರಿಗೆ ಜಿಲ್ಲಾಡಳಿತ ಮನವಿ

**ಚಿಕ್ಕಮಗಳೂರು, ಆ. 26:** ಗಣೇಶ ಚತುರ್ಥಿಯ ಸಂದರ್ಭ ಗಿರಿ ಭಾಗದಲ್ಲಿ ಚಿಕ್ಕಮಗಳೂರು ತಾಲ್ಲೂಕಿನ ಗ್ರಾಮಸ್ಥರು ಧಾರ್ಮಿಕ ಕಾರ್ಯಕ್ರಮ ಹಮ್ಮಿಕೊಳ್ಳುವುದರಿಂದ ಗಿರಿ ಭಾಗದ ರಸ್ತೆಯಲ್ಲಿ ವಾಹನ ದಟ್ಟಣೆ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಈ ಪ್ರದೇಶಗಳಿಗೆ ಭೇಟಿ ನೀಡಲು ಉದ್ದೇಶಿಸಿರುವ ಪ್ರವಾಸಿಗರು, ತಮ್ಮ ಪ್ರವಾಸವನ್ನು ಮುಂದೂಡುವಂತೆ ಸಾರ್ವಜನಿಕರು ಹಾಗೂ ಪ್ರವಾಸಿಗರಿಗೆ ಜಿಲ್ಲಾಡಳಿತ ಮನವಿ ಮಾಡಿದೆ.

ಆಗಸ್ಟ್ 27ರ ಗಣೇಶ ಚತುರ್ಥಿ ಹಬ್ಬದ ಸಂದರ್ಭದಲ್ಲಿ ಚಿಕ್ಕಮಗಳೂರು ತಾಲ್ಲೂಕಿನ ಕಸಬಾ ಹೋಬಳಿ, ವಸ್ತಾರೆ, ಆವತಿ, ಅಂಬಳೆ ಮತ್ತು ಜಾಗರ ಹೋಬಳಿಯ 40ಕ್ಕೂ ಹೆಚ್ಚು ಗ್ರಾಮಗಳ ಗ್ರಾಮಸ್ಥರು ಶ್ರೀ ಮೇಲು ಗದ್ದುಗೆ ಮುಳ್ಳಯ್ಯನಗಿರಿ, ಶ್ರೀ ಸೀತಾಳಯ್ಯನಗಿರಿ ಮತ್ತು ಶ್ರೀ ಗುರು ನಾರುಕಂತೆ ಮಠಗಳಿಗೆ ತೆರಳಿ ಚೌತಿ ಕಾಯಿ ಒಡೆಸಿ ಹಣ್ಣು ಕಾಯಿ ಮಾಡಿಸಿಕೊಂಡು ಬರುವುದು ನೂರಾರು ವರ್ಷಗಳ ಪಾರಂಪರಿಕ ಆಚರಣೆ. ಮೇಲ್ಕಾಣಿಸಿದ ದಿನದಲ್ಲಿ ಸಾರ್ವತ್ರಿಕ ರಜೆ ಇರುವ ಕಾರಣ, ಚಿಕ್ಕಮಗಳೂರು ತಾಲ್ಲೂಕಿನ ಸೀತಾಳಯ್ಯನಗಿರಿ, ಮುಳ್ಳಯ್ಯನಗಿರಿ, ಶ್ರೀ ಗುರುದತ್ತಾತ್ರೇಯ ಬಾಬಾಬುಡನ್ ಸ್ವಾಮಿ ದರ್ಗಾ ಐ.ಡಿ.ಪೀಠ, ಮಾಣಿಕ್ಯಧಾರ ಇತ್ಯಾದಿ ಪ್ರವಾಸಿ ತಾಣಗಳಿಗೆ ಹೊರ ರಾಜ್ಯ, ಜಿಲ್ಲೆಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಭೇಟಿ ನೀಡುವ ನಿರೀ–ಕ್ಷೆ ಇದೆ.

ಈ ಮಾರ್ಗಗಳಲ್ಲಿ ಕಿರಿದಾದ ರಸ್ತೆಗಳಿದ್ದು, ಜನ ಹಾಗೂ ವಾಹನಗಳ ದಟ್ಟಣೆ ಉಂಟಾಗಿ ಅಪಘಾತಗಳು ಸಂಭವಿಸುವ ಸಾಧ್ಯತೆಗಳು ಹೆಚ್ಚಾಗಿವೆ. ಆದ್ದರಿಂದ ಈ ಮಾರ್ಗದಲ್ಲಿ ಹೋಂಸ್ಟೇ ಮತ್ತು ರೆಸಾರ್ಟ್‌ಗಳಲ್ಲಿ ಮುಂಗಡವಾಗಿ ಕೊಠಡಿಗಳನ್ನು ಕಾಯ್ದಿರಿಸಿರುವ ಪ್ರವಾಸಿಗರನ್ನು ಹೊರತುಪಡಿಸಿ, ಉಳಿದವರು ತಮ್ಮ ಪ್ರವಾಸವನ್ನು ಮುಂದೂಡುವಂತೆ ಅವರು ಗಮನ ಸೆಳೆದಿದ್ದಾರೆ.

## ಚಿತ್ರರಂಗವನ್ನು 70 ವರ್ಷ ಆಳಿದವರು ಬಿ.ಸರೋಜಾದೇವಿ: ಡಾ. ಜೆಪಿಕೆ



**ಚಿಕ್ಕಮಗಳೂರು:** ಸುದೀರ್ಘ ಎಪ್ಪತ್ತು ವರ್ಷಗಳ ಕಾಲ ತಮ್ಮ ವಿಶೇಷ ಅಭಿನಯದ ಮೂಲಕ ಚಲನಚಿತ್ರ ರಂಗವನ್ನು ಆಳಿ ಜನಮನವನ್ನು ಗೆದ್ದವರು ಬಿ.ಸರೋಜಾದೇವಿ ಎಂದು ಸುಗಮ ಸಂಗೀತಗಂಗಾದ ಅಧ್ಯಕ್ಷ, ಮಕ್ಕಳ ತಜ್ಞ ಡಾ. ಜೆ.ಪಿ.ಕೃಷ್ಣೇಗೌಡ ಬಣ್ಣಿಸಿದರು.

ನಗರದ ಎಂ.ಇ.ಎಸ್. ಕಾಲೇಜು ಸಭಾಂಗಣದಲ್ಲಿ ಪೂರ್ವಿ ಸುಗಮ ಸಂಗೀತ ಅಕಾಡೆಮಿ ಟ್ರಸ್ಟ್, ಯುರೇಕಾ ಅಕಾಡೆಮಿ, ಲಯನ್ಸ್ ಸಂಸ್ಥೆ ಹಾಗೂ ಮಲೆನಾಡು ವಿದ್ಯಾಸಂಸ್ಥೆಯ ಸಹಭಾಗಿತ್ವದಲ್ಲಿ ಖ್ಯಾತ ನಟಿ ಬಿ.ಸರೋಜಾದೇವಿ ನಟನೆಯ ಚಿತ್ರಗೀತೆಗಳ ಗಾಯನ ಕಾರ್ಯಕ್ರಮ ಪೂರ್ವಿ ಗಾನಯಾನ–110 ಉದ್ಘಾಟಿಸಿ ಅವರು ಮಾತನಾಡಿದರು,

87 ವರ್ಷಗಳ ಕಾಲ ಬದುಕಿದ್ದ ಅವರು, ಕನ್ನಡಕ್ಕೆ ಅಪಾರ ಕೊಡುಗೆಯನ್ನು ನೀಡಿದ್ದವರು. ದೇಶಕಂಡ ಅಪರೂಪದ ಮಹಾನ್ ಕಲಾವಿದೆ. ಪದ್ಮಶ್ರೀ, ಪದ್ಮಭೂಷಣ ಮತ್ತು ಜೀವಮಾನ ಸಾಧನೆಯ ಪ್ರಶಸ್ತಿ ಮಾತ್ರವಲ್ಲದೆ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿಗಳಿಗೆ ಅವರು ಭಾಜನರಾಗಿದ್ದರು.

ಸರೋಜಾದೇವಿ ಕನ್ನಡ ಮಾತ್ರವಲ್ಲ, ತಮಿಳು, ತೆಲುಗು, ಹಿಂದಿ ಚಿತ್ರಗಳಲ್ಲಿ ಸಹ ತಮ್ಮ ನಟನಾ ಕೌಶಲ್ಯ ಪ್ರದರ್ಶಿಸಿದ್ದಾರೆ. ಪತಿ ಹರ್ಷ ಅವರನ್ನು ಕಳೆದುಕೊಂಡ ಬಳಿಕ ಒಂದು ವರ್ಷ ಮೌನಕ್ಕೆ ಶರಣಾಗಿದ್ದ ಅವರು, ಜನರ ಅಪೇಕ್ಷೆಯ ಮೇರೆಗೆ ಹಾಗೂ ಚಿತ್ರರಂಗದ ಪ್ರಮುಖರ ಒತ್ತಾಯದ ಮೇರೆಗೆ ಮತ್ತೆ ಚಿತ್ರರಂಗದಲ್ಲಿ ಮುಂದುವರಿದಿದ್ದರು. ಎಂ.ಜಿ.ಆರ್., ಶಿವಾಜಿ ಗಣೇಶನ್, ಜೆಮಿನಿ ಗಣೇಶನ್, ತೆಲುಗಿನಲ್ಲಿ ಎನ್.ಟಿ. ರಾಮರಾವ್, ನಾಗೇಶ್ವರರಾವ್ ಅವರಂತಹ ದಿಗ್ಗಜರ ಜೊತೆ ಅಭಿನಯಿಸಿದ್ದರು. ಕನ್ನಡ ಸಿನಿಮಾಗಳಲ್ಲಿ ಅವರ ನಟನೆಯಂತೂ ಅದ್ಭುತವಾದುದು ಎಂದು ಅವರು ಹೇಳಿದರು.

ಲಯನ್ಸ್ ಸಂಸ್ಥೆಯ ಪ್ರಾಂತೀಯ ಅಧ್ಯಕ್ಷ ಬಿ.ಎನ್.ವೆಂಕಟೇಶ್ ಮಾತನಾಡಿ, ಬಿ.ಸರೋಜಾದೇವಿಯವರು ಚಿತ್ರರಂಗದಲ್ಲಿ ಅತ್ಯಂತ ಹೆಸರುವಾಸಿಯಾದ ನಟಿಯಾಗಿದ್ದು, ಅವರ ಅಭಿನಯದ ಗೀತೆಗಳ ಮೂಲಕ ನಾವಿಂದು ರಂಜನೆ ಪಡೆಯಲಿದ್ದೇವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಯುರೇಕಾ ಅಕಾಡೆಮಿ ಸಂಸ್ಥಾಪಕ ದೀಪಕ್ ದೊಡ್ಡಯ್ಯ ಮಾತನಾಡಿ, ಬಿ.ಸರೋಜಾದೇವಿಯವರು ಈ ನಾಡುಕಂಡಂತ ಅತ್ಯದ್ಭುತ ನಟಿ. ಬದುಕಿದವರೆ ಸರೋಜಾದೇವಿಯವರಂತೆ ಬದುಕಬೇಕು. ನಮ್ಮ ಜೀವಿತಾವಧಿಯಲ್ಲಿ ನಮ್ಮ ಬಗ್ಗೆ ಉತ್ತಮ ಹೆಸರು ಉಳಿಸಿಕೊಂಡು ನಾವು ಸತ್ತ ಮೇಲೂ ಜನರು ನಮ್ಮನ್ನು ನೆನೆಯುವಂತಿರಬೇಕು. ಈ ನಿಟ್ಟಿನಲ್ಲಿ ಎಂ.ಎಸ್.ಸುಧೀರ್ ನೇತೃತ್ವದ ತಂಡ ಗಾಯನವನ್ನು 110ನೇ ಸರಣಿಯಲ್ಲಿ ಮುಂದುವರಿಸುತ್ತಿರುವುದು ವಿಶೇಷ ಎಂದರು.

ಪೂರ್ವಿ ಸುಗಮ ಸಂಗೀತ ಅಕಾಡೆಮಿ ಟ್ರಸ್ಟ್‌ನ ಅಧ್ಯಕ್ಷ ಎಂ.ಎಸ್.ಸುಧೀರ್ ಸ್ವಾಗತಿಸಿದರು. ರೂಪ ನಾಯ್ಕ್ ವಂದಿಸಿದರು. ಸುಮಾ ಪ್ರಸಾದ್ ಕಾರ್ಯಕ್ರಮ ನಿರೂಪಿಸಿದರು. ಅನಂತರ ಎಂ.ಎಸ್.ಸುಧೀರ್ ಸಾರಥ್ಯದಲ್ಲಿ ನಡೆದ ಗಾಯನದಲ್ಲಿ ಚೇತನ್‌ರಾಮ್, ಶ್ರೀಕಾಂತ್, ರೂಪ ಅಶ್ವಿನ್, ಅನುಷ, ರುಕ್ಸಾನಾಕಾಚೂರ್, ಮೇಘ, ಚೈತನ್ಯ, ಪೃಥ್ವಿಶ್ರೀ ಹಾಗೂ ಅದ್ವಿತ್‌ದೇಶ್ ಬಿ.ಸರೋಜಾದೇವಿ ನಟನೆಯ ಚಿತ್ರಗೀತೆಗಳಿಗೆ ಧ್ವನಿಯಾಗಿ ಸಂಗೀತ ಸುಧೆ ಹರಿಸಿದರು.

## ರೈತ ಮಹಿಳೆ ಆರೋಪ ನಿರಾಧಾರ : ಗುರುಶಾಂತಪ್ಪ



**ಚಿಕ್ಕಮಗಳೂರು:** ತಾಲೂಕಿನ ಮರ್ಲೆ ಹೊಸಳ್ಳಿ ಗ್ರಾಮದ ರೈತ ಮಹಿಳೆ ಕಲ್ಪನ ಅವರ ಕರ್ನಾಟಕ ರಾಜ್ಯ ರೈತಸಂಘದ ವಿರುದ್ಧ ಮಾಡಿರುವ ಆರೋಪ ನಿರಾಧಾರ, ಅವರು ಸಂಘದ ಕ್ಷಮೆಯಾಚಿಸದಿದ್ದರೆ ಮಾನನಷ್ಟ ಮೊಕದ್ದಮೆ ಹೂಡುವುದಾಗಿ ರೈತ ಸಂಘದ ಮುಖಂಡ ಗುರುಶಾಂತಪ್ಪ ಎಚ್ಚರಿಸಿದರು.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕರ್ನಾಟಕ ರಾಜ್ಯ ರೈತ ಸಂಘ ಒಂದು ಸೈದ್ಧಾಂತಿಕ ಹಿನ್ನೆಲೆಯಿಂದ ಬಂದಿದೆ. ಇದರ ವಿರುದ್ಧ ಆರೋಪ ಮಾಡುವಾಗ ಎಚ್ಚರಕೆಯಿಂದ ಇರಬೇಕು. ಅವರು ಕೇಳಿದ ತಕ್ಷಣ ನ್ಯಾಯ ಕೊಡಿಸಲು ಅದೇನು ಅಂಗಡಿಯಲ್ಲಿ ಮಾರುವ ಸರಕಲ್ಲ. ಎಲ್ಲಿ ಅನ್ಯಾಯವಾಗಿದೆ, ಯಾವುದರಲ್ಲಿ ಅನ್ಯಾಯವಾಗಿದೆ ಎಂಬುದನ್ನು ಪರಿಶೀಲಿಸಿ, ಅದರ ವಿರುದ್ಧ ಹೋರಾಟ ರೂಪಿಸಬೇಕಿದೆ ಎಂಬ ಪ್ರಾಥಮಿಕ ತಿಳಿವಳಿಕೆ ಅವರಿಗೆ ಇರಬೇಕು. ಅದನ್ನು ಬಿಟ್ಟು ನ್ಯಾಯ ಕೊಡಿಸಿ ಅಥವಾ ಶಾಲು ತೆಗೆದಿಡಿ ಎಂದು ಹೇಳಲು ಅವರಿಗೆ ಯಾವ ನೈತಿಕತೆ ಇದೆ ಎಂದು ಪ್ರಶ್ನಿಸಿ ರೈತ ಸಂಘ, ಅವರ ಮರ್ಜಿಗೆ ಕುಣಿಯಲು ಕಾರ್ಯಕರ್ತರು ಅವರ ಮನೆಯ ಜೀತದಾಳುಗಳಲ್ಲ ಎಂದು ಹೇಳಿದರು.

ಕಲ್ಪನ ಅವರು ನಮ್ಮ ಸಂಪರ್ಕದಲ್ಲಿಲ್ಲ. ಅವರ ಪತಿ ಶಿಕ್ಷಕ ಹುಲಿಗೌಡ ಅವರು ನಮ್ಮನ್ನು ಭೇಟಿಮಾಡಿ, ಗಣಿಗಾರಿಕೆಯಿಂದ ಆಗುವ ಸಮಸ್ಯೆಗಳ ಬಗ್ಗೆ ಹೇಳಿಕೊಂಡಿದ್ದರು. ಅವರ ಸಮಸ್ಯೆಗೆ ಸ್ಪಂದಿಸಿ ಅವರ ಜಮೀನಿಗೆ ಭೇಟಿನೀಡಿ ನಂತರ ಒಂದು ಸುದ್ದಿಗೋಷ್ಠಿಯನ್ನು ಮಾಡಿದ್ದೇವೆ. ವಿವಿಧ ಇಲಾಖೆಗಳಿಗೆ ಪತ್ರ ಬರೆದು ಉತ್ತರಕ್ಕಾಗಿ ಕಾಯುತ್ತಿದ್ದೇವೆ. ಈ ನಡುವೆ ಹುಲಿಯಪ್ಪಗೌಡ ಅವರನ್ನು ಆ.18 ರಂದು ಡಿಸಿ ಕಚೇರಿಗೆ ಬರಲು ಹೇಳಿದಾಗ ಪತ್ನಿ ಬರುವುದಾಗಿ ಹೇಳಿ ಅವರೂ ಬಂದಿಲ್ಲ. 20 ಮಂದಿ ಕಾರ್ಯಕರ್ತರು ಮಾರನೆ ದಿನ ಡಿಸಿ ಕಚೇರಿ ಮುಂದೆ ಕಾದರೂ ಅವರು ಬಾರದೆ ಸುದ್ದಿಗೋಷ್ಠಿ ನಡೆಸಿದ್ದಾರೆ ಎಂದು ದೂರಿದರು.

ಸಮಸ್ಯೆ ಗಂಭೀರತೆ ಪಡೆಯುವುದನ್ನು ತಿಳಿದು ದೊಡ್ಡ ರಾಜಕಾರಣಿಯ ಭಯದಿಂದ ರೈತಸಂಘದ ಮೇಲೆ ಆರೋಪ ಮಾಡಿರುವುದು ಕಂಡುಬರುತ್ತಿದೆ. ಇದರಲ್ಲಿ ಕೆಲವು ಹಿತಶತ್ರುಗಳ ಕೈವಾಡ ಇದ್ದಂತೆ ಕಾಣುತ್ತದೆ. ತಕ್ಷಣ ಅವರ ಅರೋಪಗಳಿಗೆ ಆಧಾರ ಒದಗಿಸಬೇಕು. ಇಲ್ಲವೆ ಕ್ಷಮೆ ಯಾಚಿಸಬೇಕು ಇಲ್ಲದಿದ್ದರೆ ಮಾನನಷ್ಟ ಮೊಕದ್ದಮೆ ಹೂಡುವುದಾಗಿ ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಮಹೇಶ್.ಡಿ, ಎಂ.ಸಿ.ಬಸವರಾಜು, ಚಂದ್ರಶೇಖರ, ನಿರಂಜನಮೂರ್ತಿ, ಕುಮಾರಸ್ವಾಮಿ ಮತ್ತಿತರರಿದ್ದರು.

# ಮಲೆನಾಡಿನಲ್ಲಿ ಅತೀ ಹೆಚ್ಚು ಮಳೆ ಕಾಫಿ, ಬೆಳೆಹಾನಿ ಪರಿಹಾರಕ್ಕೆ ಆಗ್ರಹ

**ಚಿಕ್ಕಮಗಳೂರು:** ಅತಿಯಾದ ಮಳೆ, ಶೀತಗಾಳಿಯಿಂದ ಕಾಫಿ ತೋಟಗಳಲ್ಲಿ ಬೆಳೆ ನಷ್ಟವಾಗಿದ್ದು ಸಂಕಷ್ಟದಲ್ಲಿರುವ ಕಾಫಿ ಬೆಳೆಗಾರರ ನೆರವಿಗೆ ಸರಕಾರ ಧಾವಿಸಬೇಕು ಎಂದು ಕರ್ನಾಟಕ ಬೆಳೆಗಾರರ ಒಕ್ಕೂಟ(ಕೆಜಿಎಫ್) ಆಗ್ರಹಿಸಿದೆ.

ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಒಕ್ಕೂಟದ ಅಧ್ಯಕ್ಷ ಹಳಸೆ ಶಿವಣ್ಣ, ಹಾಸನ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ನಿರಂತರವಾಗಿ ಸುರಿದ ಅತಿಯಾದ ಮಳೆಯಿಂದ ಕಾಫಿ ಫಸಲು ಅಪಾರ ಪ್ರಮಾಣದಲ್ಲಿ ನೆಲಕಚ್ಚಿದೆ.



ಈ ಬಗ್ಗೆ ಕಾಫಿ ಮಂಡಳಿ ಅಧಿಕಾರಿಗಳು ಸರಕಾರ–ಕ್ಕೆ ವರದಿ ಸಲ್ಲಿಸಿದ್ದಾರೆ. ವರದಿ ಸಲ್ಲಿಕೆ ನಂತರ ಮತ್ತೆ ಮುಂದುವರಿದ ಶೀತಗಾಳಿ ಮತ್ತು ಮಳೆಯಿಂದ ವಿಪರೀತ ಬೆಳೆನಷ್ಟ ಉಂಟಾಗಿದ್ದು, ಕಾಫಿ ಜತೆಗೆ ಮಲೆನಾಡಿನ ಪ್ರಮುಖ ಬೆಳೆಗಳಾದ ಕಾಳು ಮೆಣಸು, ಅಡಿಕೆ ಬೆಳೆ ಕೂಡ ಕೊಳೆರೋಗಕ್ಕೆ ತುತ್ತಾಗಿವೆ. ಈ ಸಂದರ್ಭದಲ್ಲಿ ಸರಕಾರ ಬೆಳೆಗಾರರ ನೆರವಿಗೆ ಬರಬೇಕು. ಕಂದಾಯ ಇಲಾಖೆ, ಕಾಫಿ ಮಂಡಳಿ, ಮತ್ತು ತೋಟಗಾರಿಕ ಇಲಾಖೆ ಅಕಾರಿಗಳು ತೋಟಗಳಿಗೆ ಭೇಟಿನೀಡಿ ನಷ್ಟದ ಬಗ್ಗೆ ಜಂಟಿ ಸಮೀಕ್ಷೆ ನಡೆಸಿ ಸರಕಾರಕ್ಕೆ ವರದಿ ಸಲ್ಲಿಸಬೇಕು. ನಷ್ಟಕ್ಕೆ ಸೂಕ್ತ ಪರಿಹಾರ ಒದಗಿಸಬೇಕು ಎಂದು ಆಗ್ರಹಿಸಿದರು.

**ಕಾಡಾನೆ ಹಾವಳಿ ತಪ್ಪಿಸಿ:** ಕಾಫಿ ಬೆಳೆಯುವ ಮೂರು ಜಿಲ್ಲೆಗಳಲ್ಲಿ ಕಾಡಾನೆ ಹಾವಳಿ ವಿಪರೀತವಾಗಿದ್ದು, ಕಾಫಿ ತೋಟಗಳನ್ನೇ ತಮ್ಮ ವಾಸಸ್ಥಾನವನ್ನಾಗಿಸಿಕೊಂಡಿವೆ. ಇದರಿಂದ ಕಾಫಿ, ಅಡಿಕೆ, ಕಾಳು ಮೆಣಸು ಮತ್ತಿತರೆ ಬೆಳೆಗಳನ್ನು ಲೂಟಿಮಾಡಿ ಬೆಳೆಗಾರರ ಸಂಕಷ್ಟ ಅನುಭವಿಸುವಂತಾಗಿದೆ. ಜತೆಗೆ ಕಾರ್ಮಿಕರು ಕಾಫಿತೋಟಕ್ಕೆ ಕೆಲಸಕ್ಕೆ ಬರಲು ಹಿಂದೇಟು ಹಾಕುತ್ತಿದ್ದಾರೆ. ಕಾಡಾನೆಗಳ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು. ಅರಣ್ಯ ಅಧಿಕಾರಿಗಳು ಕಾಡಾನೆಯಿಂದ ಯಾರಾದರೂ ಮೃತಪಟ್ಟಾಗ ನೀಡುವ ಭರವಸೆಗಳು ಕೂಡಲೇ ಅನುಷ್ಠಾನವಾಗುವಂತೆ ನೋಡಿಕೊಳ್ಳಬೇಕು ಎಂದು ಮನವಿ ಮಾಡಿದರು.

# ಅನುಪಮ ಫ್ಯೂಯೆಲ್ ಸೆಂಟರ್‌ನಲ್ಲಿ ಉತ್ತಮ ಸೇವೆ : ನವೀನ್ ಕುಮಾರ್

**ಚಿಕ್ಕಮಗಳೂರು:** ಪೆಟ್ರೋಲ್ ಬಂಕ್‌ಗಳಲ್ಲಿ ಗ್ರಾಹಕ ಸ್ನೇಹಿಯಾಗಿ ಉತ್ತಮ ಸೇವೆ ನೀಡಿದಲ್ಲಿ ಅಂತಹ ಬಂಕ್ ಯಶಸ್ವಿಯಾಗಿ ಮುನ್ನೆಡೆಯುತ್ತದೆ ಎಂದು ಎಚ್‌ಪಿಸಿಎಲ್ ಪ್ರಾದೇಶಿಕ ವ್ಯವಸ್ಥಾಪಕ ನವೀನ್‌ಕುಮಾರ್ ಹೇಳಿದರು.

ನಗರದ ಎಐಟಿ ವೃತ್ತದಬಳಿ ನೂತನವಾಗಿ ಆರಂಭವಾದ ಅನುಪಮ ಫ್ಯೂಯೆಲ್ ಸೆಂಟರ್ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಎಚ್‌ಪಿಸಿಎಲ್ ಡೀಲರ್‌ಶಿಪ್ ತುಂಬಾಸ್ಟ್ರಾಂಗ್ ಆಗಿರುತ್ತದೆ. ಅದರಲ್ಲಿ ಷಣ್ಮುಖ ಯಶಸ್ವಿಯಾಗಿದ್ದಾರೆ. ಇಲ್ಲಿ ಸಿಎನ್‌ಜಿ ಕೂಡ ಅಗಲಿದೆ ಎಂದರು. ನಗರದ ಸುಂದರ ತಾಣದಲ್ಲಿ ಬಂಕ್ ನಿರ್ಮಿಸಿದ್ದು ಇಲ್ಲಿ ಇನ್ನೂ ಅಭಿವೃದ್ಧಿಪಡಿಸುವುದು ಬಾಕಿ ಇದೆ. ಉತ್ತಮ ದರ್ಜೆಯ ಸೇವೆ ಇಲ್ಲಿ ದೊರೆಯಲಿದೆ ಎಂಬ ವಿಶ್ವಾಸವಿದೆ. ಬಂಕ್ ಮಾಲೀಕರಿಗೆ ಕಾಲಕಾಲಕ್ಕೆ ಕೌಶಲ್ಯ ತರಬೇತಿ, ಮಾರ್ಗದರ್ಶನವನ್ನು ಎಚ್‌ಪಿ ಕಂಪನಿ ಕಡೆಯಿಂದ ನೀಡಲಾಗುವುದು ಎಂದರು.

ಎಚ್‌ಪಿಸಿಎಲ್ ಜನರಲ್ ಮ್ಯಾನೇಜರ್ ಸಂದೀಪ್‌ರೆಡ್ಡಿ ಮಾತನಾಡಿ, ಅನೇಕ



ಅಡಚಣೆಗಳ ಮಧ್ಯೆ ಇಲ್ಲೊಂದು ಸುಂದರವಾದ ಔಟ್‌ಲೆಟ್ ಆರಂಭವಾಗಿದೆ. ಅತಿ ಹೆಚ್ಚಿನ ವ್ಯಾಪಾರ ಇಲ್ಲಿ ನಡೆಯುತ್ತದೆ ಎಂಬ ನಿರೀಕ್ಷೆಯಿದೆ. ಈ ಬಂಕ್ ಆರಂಭಿಸಲು ಮಾಲೀಕ ಷಣ್ಮುಖ ಅವರಿಗೆ ಅನೇಕ ವಿಘ್ನಗಳು ಎದುರಾಗಿವೆ. ಅದನ್ನೆಲ್ಲಾ ಮೆಟ್ಟಿ ನಿಂತು ಇಂದು ಅಂತಿಮ ಘಟ್ಟ ತಲುಪಿದ್ದಾರೆ. ಅವರಿಗೆ ಒಳಿತಾಗಲಿ ಎಂದು ಹಾರೈಸಿದರು.

ಒಕ್ಕಲಿಗರ ಸಂಘದ ಅಧ್ಯಕ್ಷ ಟಿ.ರಾಜಶೇಖರ ಮಾತನಾಡಿ, ಕಳೆದ 30 ವರ್ಷದಿಂದ ಈ ನಿವೇಶನ ಒಕ್ಕಲಿಗರ ಸಂಘದ ಹೆಸರಲ್ಲಿ ಖಾಲಿ ಇತ್ತು. ಸಂಘದ ಸಭೆಯಲ್ಲಿ ತೀರ್ಮಾನಿಸಿ ಇಲ್ಲಿ ಪೆಟ್ರೋಲ್‌ಬಂಕ್ ತೆರೆಯಲು ಖಾಸಗಿಯವರಿಗೆ ನೀಡಲು ನಿರ್ಣಯಿಸಿ ಸಂಘದ ಸದಸ್ಯರಾದ ಷಣ್ಮುಖ ಅವರಿಗೆ ಅತಿ ಹೆಚ್ಚಿನ ಬಾಡಿಗೆಗೆ ನೀಡಲಾಗಿದೆ. ಈ ಬಂಕ್ ಗ್ರಾಹಕರ ಸೇವೆಗೆ ಸನ್ನದ್ಧವಾಗಿರಲಿದೆ ಎಂದು ಹಾರೈಸಿದರು.

ಕೆಪಿಸಿಸಿ ವಕ್ತಾರ ಎಚ್.ಎಚ್.ದೇವರಾಜ್ ಮಾತನಾಡಿ, ಕಳೆದ 15 ವರ್ಷದಿಂದ ಯಶಸ್ವಿಯಗಿ ಬೇರೊಂದು ಪೆಟ್ರೋಲ್ ಬಂಕ್ ನಡೆಸಿರುವ ಷಣ್ಮುಖ ಅವರಿಗೆ ಇಲ್ಲೂ ಕೂಡ ಯಶಸ್ಸು ದೊರೆಯಲಿ ಎಂದು ಹೇಳಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**